ಸಂಪುಟ: 04 ಸಂಚಿಕೆ: 146 ಪುಟಗಳು: 08   ಗುರುವಾರ 08 ಆಗಸ್ಟ್ 2024
www.udayavahini.in  epaper.udayavahini.in  Udayavahini news  Udayavahini news  Udayavahini news youtube  udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ   RNI No. KARKAN/2021/80833   9448225696   +91 8035841833   ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**
ಸತ್ಯಕ್ಕಾಗಿ ಯಾವುದನ್ನು ಬೇಕಾದರೂ ತ್ಯಾಗಮಾಡಿ, ಆದರೆ ಯಾವುದಕ್ಕೂ ಸತ್ಯವನ್ನು ತ್ಯಾಗಮಾಡಬೇಡಿ.

## ನೇಕಾರಿಕೆಗೆ ವೈಜ್ಞಾನಿಕ ಸ್ಪರ್ಶವಿದ್ದರೆ ಉಳಿವು ಸಾಧ್ಯ

• **ಉದಯವಾಹಿನಿ, ಬೆಂಗಳೂರು**

ಸಾಂಪ್ರದಾಯಿಕ ನೇಕಾರಿಕೆ ಇಂದು ಹಲವಾರು ಸವಾಲುಗಳನ್ನು ಎದುರಿಸುತ್ತಿದ್ದು, ನೇಕಾರಿಕೆಗೆ ವೈಜ್ಞಾನಿಕ ಸ್ಪರ್ಶ ಸಿಗದಿದ್ದರೆ ಈ ಉದ್ಯಮ ಉಳಿಯಲು ಸಾಧ್ಯವಿಲ್ಲವೆಂದು ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಮತ್ತು ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಪಾಟೀಲ್ ಅವರು ಹೇಳಿದರು. ವಿಧಾನ ಸೌಧದ ಬ್ಯಾಂಕ್ವೆಟ್ ಸಭಾಂಗಣದಲ್ಲಿ ಕೈಮಗ್ಗ ಮತ್ತು ಜವಳಿ ಇಲಾಖೆ, ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ, ಕಾವೇರಿ ಹ್ಯಾಂಡ್ ಲೂಮ್ಸ್, ನೇಕಾರರ ಸೇವಾ ಕೇಂದ್ರ, ಹಾಗೂ ಎಫ್‌ಐಸಿಸಿಐ ಎಫ್ ಎಲ್‌ಒ ಇವುಗಳ ಸಹಯೋಗದಲ್ಲಿ ಹಮ್ಮಿಕೊಂಡಿದ್ದ 10 ನೇ ರಾಷ್ಟ್ರೀಯ ಕೈಮಗ್ಗ ದಿನಾಚರಣೆ ಹಾಗೂ ಕೈಮಗ್ಗ ನೇಕಾರರಿಗೆ ರಾಜ್ಯ ಪ್ರಶಸ್ತಿ ಪ್ರದಾನ ಸಮಾರಂಭ ಅವರು ಮಾತನಾಡಿದರು. ನೇಕಾರಿಕೆಯಿಂದ ಇಂದು ಹಲವು ಕುಟುಂಬಗಳು ವಿಮುಖವಾಗುತ್ತಿವೆ. ಈ ಕೆಲಸ ಬಿಟ್ಟು ವಲಸೆ ಹೋಗುತ್ತಿದ್ದಾರೆ. ನೇಕಾರಿಕೆಗೆ ಇಂದು ಸವಾಲುಗಳು ಹೆಚ್ಚಿವೆ. ಆದ್ದರಿಂದ ಪಾರಂಪರಿಕ ನೇಕಾರಿಕೆ ಲಾಭವಲ್ಲ ಎಂಬ ಅಭಿಪ್ರಾಯ ಮೂಡಿದೆ ಎಂದರು.

## ನೀವು ಯಾವಾಗಲೂ ನಮ್ಮ ಚಾಂಪಿಯನ್ ಆಗಿರುತ್ತೀರಿ

• **ಉದಯವಾಹಿನಿ, ಬೆಂಗಳೂರು**

ಭಾರತದ ಸ್ಟಾರ್ ಕುಸ್ತಿಪಟು ವಿನೇಶ್ ಫೋಗಟ್ ಪ್ಯಾರಿಸ್ ಒಲಿಂಪಿಕ್ಸ್‌ನ ಫೈನಲ್‌ನಿಂದ ಹೊರಬಿದ್ದಿದ್ದಾರೆ. 50 ಕೆಜಿ ವಿಭಾಗದ ಫೈನಲ್‌ಗೆ ತಲುಪಿದ್ದ ವಿನೇಶ್ ಫೋಗಟ್, ಪ್ರಶಸ್ತಿ ಪಂದ್ಯಕ್ಕೂ ಮುನ್ನ 100 ಗ್ರಾಂ ಹೆಚ್ಚು ತೂಕ ಹೊಂದಿದ್ದರಿಂದ ಅವರನ್ನು ಕ್ರೀಡಾಕೂಟದಿಂದ ಅನರ್ಹಗೊಳಿಸಲಾಗಿದೆ. ಈ ಕ್ರಮದ ನಂತರ ಇಡೀ ದೇಶ ವಿನೇಶ್ ಜೊತೆ ನಿಂತಿದೆ. ಹೌದು ವಿನೇಶ್ ಫೋಗಟ್ ಅನರ್ಹತೆ ವಿಚಾರವಾಗಿ ಸಿಎಂ ಸಿದ್ದರಾಮಯ್ಯ ಅವರು ತಮ್ಮ ಸಾಮಾಜಿಕ ಜಾಲತಾಣ ಎಕ್ಸ್ ಖಾತೆಯಲ್ಲಿ, ಪ್ಯಾರಿಸ್ ಒಲಂಪಿಕ್ಸ್‌ನ ದುರದೃಷ್ಟಕರ. ಘಟನೆಯ ನಂತರ ನನ್ನ ಹೃದಯ ಭಾರವಾಗಿದೆ. ವಿನೇಶ್ ಫೋಗಟ್ ನಿಮ್ಮ ಶಕ್ತಿ, ಸ್ಥಿತಿಸ್ಥಾಪಕತ್ವ ಮತ್ತು ಸಮರ್ಪಣೆ ಯಾವಾಗಲೂ ರಾಷ್ಟ್ರವನ್ನು ಪ್ರೇರೇಪಿಸುತ್ತದೆ. ನೆನಪಿಡಿ, ಈ ಕ್ಷಣವು ನಿಮ್ಮ ಲೆಕ್ಕವಿಲ್ಲದಷ್ಟು ಸಾಧನೆಗಳನ್ನು ಮತ್ತು ನೀವು ಭಾರತಕ್ಕೆ ತಂದ ಹೆಮ್ಮೆಯನ್ನು ಕಡಿಮೆ ಮಾಡುವುದಿಲ್ಲ. ವಿನೇಶ್ ನೀವು ಬಲವಾಗಿ ಸದೃಢವಾಗಿರಿ. ನಾವು ನಿಮ್ಮನ್ನು ಮತ್ತು ನಿಮ್ಮ ಅದ್ಭುತ ಪ್ರಯಾಣವನ್ನು ನಂಬುತ್ತೇವೆ. ನೀವು ಯಾವಾಗಲೂ ನಮ್ಮ ಚಾಂಪಿಯನ್ ಆಗಿರುತ್ತೀರಿ! ಎಂದು ಸಿಎಂ ಟ್ವೀಟ್ ಮಾಡಿದ್ದಾರೆ.

## ಗೃಹ ಆರೋಗ್ಯ ಯೋಜನೆಯಡಿ ಮನೆ ಬಾಗಿಲಿಗೆ ಆರೋಗ್ಯ ಸೇವೆ

• **ಉದಯವಾಹಿನಿ, ಬೆಂಗಳೂರು**

ಮನೆ ಬಾಗಿಲಿಗೆ ಆರೋಗ್ಯ ಸೇವೆ ಒದಗಿಸುವ ಗೃಹ ಆರೋಗ್ಯ ಯೋಜನೆಯ ಮೊದಲ ಹಂತ ಮುಂದಿನ ತಿಂಗಳು ಆರಂಭವಾಗಲಿದೆ. ರಾಜ್ಯದ ಎಂಟು ಜಿಲ್ಲೆಗಳಲ್ಲಿ ಮೊದಲ ಹಂತದಲ್ಲಿ ಗೃಹ ಆರೋಗ್ಯ ಯೋಜನೆ ಆರಂಭಿಸುವುದಾಗಿ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದು, ಗೃಹ ಆರೋಗ್ಯ ಯೋಜನೆ ಆರಂಭಿಸುವ ದಿನಾಂಕವನ್ನು ಬುಧವಾರ ನಿರ್ಧರಿಸಲಾಗುವುದು ಎಂದು ಮಾಹಿತಿ ನೀಡಿದ್ದಾರೆ. ಮಧುಮೇಹ, ಅಧಿಕ ರಕ್ತದೊತ್ತಡ ಸೇರಿ ಇತರೆ ಆರೋಗ್ಯ ಸಮಸ್ಯೆ ಇರುವವರಿಗೆ ಅನೇಕ ಬಾರಿ ನಿಯಮಿತವಾಗಿ ಮಾತ್ರೆ ಸೇವಿಸಲು ಸಾಧ್ಯವಾಗುವುದಿಲ್ಲ. ಗೃಹ ಆರೋಗ್ಯ ಯೋಜನೆಯ ಮೂಲಕ ಇಂತಹ ಸಮಸ್ಯೆ ಇರುವವರಿಗೆ ಮೂರು ತಿಂಗಳಿಗೆ ಆಗುವಷ್ಟು ಮಾತ್ರೆಗಳನ್ನು ಮನೆಗಳಿಗೆ ನೇರವಾಗಿ ಒದಗಿಸಲಾಗುವುದು ಎಂದು ತಿಳಿಸಿದ್ದಾರೆ. ಡಯಾಬಿಟಿಕ್, ಪ್ರಿ -ಡಯಾಬಿಟಿಕ್ ಪತ್ತೆ ಹಚ್ಚುವ ನಿಟ್ಟಿನಲ್ಲಿ ಜಿಲ್ಲಾ ಆಸ್ಪತ್ರೆಗಳಲ್ಲಿ ಸಮುದಾಯ ಮಧುಮೇಹ ಕೇಂದ್ರಗಳನ್ನು ಆರಂಭಿಸಲಾಗುವುದು ಎಂದು ಸಚಿವರು ಮಾಹಿತಿ ನೀಡಿದ್ದಾರೆ.

## 650 ಸಹಾಯಕ ಪ್ರಾಧ್ಯಾಪಕರು, 1,200 ನರ್ಸ್‌ಗಳ ನೇಮಕಾತಿ

• **ಉದಯವಾಹಿನಿ, ಬೆಂಗಳೂರು**

ಕರ್ನಾಟಕ ಪರೀಕ್ಷಾ ಪ್ರಾಧಿಕಾರದ(ಕೆಇಎ) ಮೂಲಕ ವೈದ್ಯಕೀಯ ಶಿಕ್ಷಣ ಇಲಾಖೆಯ ಗ್ರೂಪ್ ಎ ನ 650 ಸಹಾಯಕ ಪ್ರಾಧ್ಯಾಪಕರು ಮತ್ತು 1200 ನರ್ಸ್ ಗಳನ್ನು ಶೀಘ್ರವೇ ನೇಮಕಾತಿ ಮಾಡಿಕೊಳ್ಳಲು ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣ್ ಪ್ರಕಾಶ್ ಪಾಟೀಲ್ ಸೂಚನೆ ನೀಡಿದ್ದಾರೆ. ವಿಕಾಸಸೌಧದಲ್ಲಿ ಇಂದು ವೈದ್ಯಕೀಯ ಶಿಕ್ಷಣ ಇಲಾಖೆ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಸಚಿವರು, ಸಹಾಯಕ ಪ್ರಾಧ್ಯಾಪಕರು, ನರ್ಸ್ ಗಳ ನೇಮಕಾತಿ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ನೇಮಕಾತಿ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಕಾಪಾಡಿಕೊಳ್ಳಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕವೇ ಸ್ಪರ್ಧಾತ್ಮಕ ಪರೀಕ್ಷೆ ನಡೆಸಿ ಹುದ್ದೆಗಳಿಗೆ ಭರ್ತಿ ಮಾಡಿಕೊಳ್ಳುವಂತೆ ನಿರ್ದೇಶನ ನೀಡಿದ್ದಾರೆ.



# ಅಸ್ಥಿರ ಹುನ್ನಾರ ಕೈ ಸಮರ

ನನ್ನ ಪತ್ನಿ ನಾನು ಮುಖ್ಯಮಂತ್ರಿಯಾಗಿದ್ದಾಗಲೆ ೨೦೧೪ ರಲ್ಲಿ ನಮ್ಮ ಜಮೀನನ್ನು ಅಕ್ರಮವಾಗಿ ವಶಪಡಿಸಿಕೊಂಡಿದ್ದೀರಿ ಬದಲಿ ನಿವೇಶನ ಕೊಡಿ ಎಂದು ಮುಡಾಗೆ ಅರ್ಜಿ ಕೊಟ್ಟಿದ್ದರು. ಆಗ ಮುಡಾ ಅಧಿಕಾರಿಗಳು ಇದನ್ನು ನನ್ನ ಗಮನಕ್ಕೆ ತಂದಾಗ ನಾನು ಮುಖ್ಯಮಂತ್ರಿ ಆಗಿರುವವರೆಗೂ ಒಂದು ಗುಂಟೆ ಜಾಗವನ್ನು ಕೊಡಬೇಡಿ ಎಂದು ಸೂಚಿಸಿದ್ದೆ. ನಾನು ನಿವೇಶನ ಕೊಡುವುದಿದ್ದರೆ ಆಗಲೇ ನಿವೇಶನ ಕೊಡಿಸುತ್ತಿದೆ. ಸಿಎಂ ಆಗಿ ನನಗೆ ಅಧಿಕಾರ ಇತ್ತು ನಾನು ಆ ರೀತಿ ಮಾಡಿಲ್ಲ. ನಾನು ಅಧಿಕಾರದಿಂದ ಕೆಳಗಿಳದ ಮೇಲೆ ೨೦೨೧ ರಲ್ಲಿ ಮತ್ತೆ ನಿವೇಶನ ಕೊಡುವಂತೆ ಪತ್ನಿ ಅರ್ಜಿ ಕೊಟ್ಟಿದ್ದರು.

-ಸಿದ್ದರಾಮಯ್ಯ, ಮುಖ್ಯಮಂತ್ರಿ

## ● ಬಿಜೆಪಿ-ಜೆಡಿಎಸ್ ಪಾದಯಾತ್ರೆ ಹೊರಟಿದ್ದು ಸಿದ್ದರಾಮಯ್ಯ ವಿರುದ್ಧ ● ಟಾರ್ಗೆಟ್ ಮಾತ್ರ ಡಿಕೆಶಿ..! ● ಶಿಕಾರಿಪುರದಲ್ಲಿ ವಿಜಯೇಂದ್ರ ಚುನಾವಣೆ ಗೆದ್ದ ರಹಸ್ಯ ಬಿಚ್ಚಿಟ್ಟ ಡಿಕೆಶಿ

• **ಉದಯವಾಹಿನಿ, ಮೈಸೂರು**

ಮುಡಾ ಹಗರಣ,ವಾಲ್ಮೀಕಿ ಹಗರಣ ಖಂಡಿಸಿ ಬಿಜೆಪಿ ಹಾಗೂ ಜೆಡಿಎಸ್ ಬೆಂಗಳೂರಿನಿಂದ ಮೈಸೂರಿಗೆ ಪಾದಯಾತ್ರೆ ಹಮ್ಮಿಕೊಂಡಿದೆ. ಎಂಟು ದಿನಗಳ ಕಾಲ ನಡೆಯಲಿರುವ ಈ ಪಾದಯಾತ್ರೆಯಲ್ಲಿ ಸಿಎಂ ಸಿದ್ದರಾಮಯ್ಯ ಅವರ ರಾಜೀನಾಮೆಯೇ ಬಿಜೆಪಿ, ಜೆಡಿಎಸ್‌ನ ಪ್ರಮುಖ ಬೇಡಿಕೆಯಾಗಿದೆ. ಆದರೆ, ವಿಚಿತ್ರವೆಂದರೆ ಪಾದಯಾತ್ರೆಯಲ್ಲಿ ಸಿದ್ದರಾಮಯ್ಯ ಅವರಿಂತ ಡಿಕೆ ಶಿವಕುಮಾರ್ ಅವರೇ ಹೆಚ್ಚಿನ ಟಾರ್ಗೆಟ್ ಆಗುತ್ತಿದ್ದಾರೆ; ಅವರೇ ಪಾದಯಾತ್ರೆಯ ಹಾಟ್ ಟಾಪಿಕ್ ಆಗಿದ್ದಾರೆ.

ಬಿಜೆಪಿ-ಜೆಡಿಎಸ್ ನನ್ನನ್ನು ಟಾರ್ಗೆಟ್ ಮಾಡಿ ನಮ್ಮ ಸರ್ಕಾರವನ್ನು ಅಸ್ಥಿರ ಮಾಡುವ ಪ್ರಯತ್ನ ನಡೆಸಿದೆ ಅದರಲ್ಲಿ ಅವರಿಗೆ ಯಶಸ್ಸು ಸಿಗಲ್ಲ ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಹೇಳಿದರು. ಮೈಸೂರಿನಲ್ಲಿಂದು ಸುದ್ದಿಗಾರೊರಂದಗೆ ಮಾತನಾಡಿದ ಅವರು, ಸಿದ್ದರಾಮಯ್ಯ ಬಡವರ ಪರ ಕೆಲಸ ಮಾಡುತ್ತಿರುವುದು, ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿರುವುದು ಬಿಜೆಪಿ- ಜೆಡಿಎಸ್‌ನವರಿಗೆ ಸಹಿಸಲು ಆಗುತ್ತಿ ಲ್ಲ. ಹಾಗಾಗಿಯೇ ನನ್ನ ಸರ್ಕಾರವನ್ನು ಅಸ್ತಿರಗೊಳಿಸುವ ಪ್ರಯತ್ನ ನಡೆಸಿದ್ದಾರೆ. ಸರ್ಕಾರವನ್ನು ಅಸ್ಥಿರಗೊಳಿಸಲು ಸಾಧ್ಯವಿಲ್ಲ ಎಂದರು.ಬಿಜೆಪಿ-ಜೆಡಿಎಸ್ ಬಡವರ ವಿರುದ್ಧ. ಗ್ಯಾರಂಟಿ ಯೋಜನೆಗಳಿಗೆ ಮೊದಲಿನಿಂದಲೂ ಅವರು ವಿರೋಧ. ಪ್ರಧಾನಿ ಮೋದಿ ಸಹ ಗ್ಯಾರಂಟಿ ಯೋಜನೆಗಳ ವಿರುದ್ಧ ಮಾತನಾಡಿದ್ದರು.ಇಷ್ಟಾದರೂ ಒಂದು ವರ್ಷದಿಂದ ನಾವು ಯಶಸ್ವಿಯಾಗಿ ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿದ್ದೇವೆ. ಇದನ್ನು ಸಹಿಸಲು ಆಗದೆ ಅವರುಗಳು ನನ್ನ ಸರ್ಕಾರವನ್ನು ದುರ್ಬಲಗೊಳಿಸುವ ಪ್ರಯತ್ನ ನಡೆಸಿದ್ದಾರೆ ಎಂದು ವಾಗ್ದಾಳಿ ನಡೆಸಿದರು. ಜನ ಬಿಜೆಪಿ-ಜೆಡಿಎಸ್‌ನ ಸುಳ್ಳನ್ನು ನಂಬಲ್ಲ. ಸುಳ್ಳಿನಿಂದ ಯಶಸ್ಸು ಸಿಗಲ್ಲ. ಸತ್ಯಕ್ಕೆ ಜಯ ಎಂದು ಮುಖ್ಯಮಂತ್ರಿಗಳು ಹೇಳಿದರು.ಈ ಹಿಂದೆ ಆಪರೇಷನ್ ಕಮಲ ಮಾಡಿ ನನ್ನ ಸರ್ಕಾರವನ್ನು ಉರುಳಿಸುವ ಪ್ರಯತ್ನ ಮಾಡಿದ್ದರು.

ಅದರಲ್ಲಿ ಅವರು ಸಫಲರಾಗಲಿಲ್ಲ. ಈಗ ನನ್ನನ್ನು ಗುರಿಯಾಗಿಸಿ ಸುಳ್ಳು ಆರೋಪಗಳನ್ನು ಮಾಡುವ ಮೂಲಕ ಸರ್ಕಾರ ಉರುಳಿಸುವ ಕೆಲಸ ಮಾಡಿದ್ದಾರೆ ಇದರಲ್ಲೂ ಅವರಿಗೆ ಯಶಸ್ಸು ಸಿಗಲ್ಲ ಎಂದರು.ವಿಪಕ್ಷಗಳ ಸುಳ್ಳನ್ನು ಎದುರಿಸುವ ಶಕ್ತಿ ನನಗಿದೆ. ಸತ್ಯಕ್ಕೆ ಎಂದೂ ಜಯ ಎಂದು ಮುಖ್ಯಮಂತ್ರಿಗಳು ಪುನರುಚ್ಚರಿಸಿದರು. ಬಿಜೆಪಿ-ಜೆಡಿಎಸ್‌ನವರಿಗೆ ನಿಮ್ಮನ್ನು ಕಂಡರೆ ಭಯವೇ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ವೈಯುಕ್ತಿಕವಾಗಿ ನನ್ನನ್ನು ಕಂಡರೆ ಭಯ ಇದೆ ಎಂದು ನಾನು ಹೇಳಲ್ಲ. ಆದರೆ ನಾನು ಬಡವರ, ಪರಿಶಿಷ್ಟ ಜಾತಿ ಪಂಗಡದ ಪರ ಕೆಲಸ ಮಾಡುತ್ತಿರುವುದರಿಂದ ಅವರಿಗೆ ಭಯ ತಂದಿದೆ. ಹಾಗಾಗಿಯೇ ಅವರು ನನ್ನನ್ನು ಗುರಿಯಾಗಿ ಸರ್ಕಾರ ಉರುಳಿಸುವ ಪ್ರಯತ್ನ ನಡೆಸಿದ್ದಾರೆ.

**ರಾಜ್ಯಪಾಲರು ಒಪ್ಪುವ ವಿಶ್ವಾಸವಿದೆ**

ಮುಡಾ ಪ್ರಕರಣಕ್ಕೆ ರಾಜ್ಯಪಾಲರಿಂದ ನನಗೆ ಬಂದಿರುವುದು ಒಂದೇ ನೋಟಿಸ್, ಅದಕ್ಕೆ ಉತ್ತರ ಕೊಟ್ಟಿದ್ದೇನೆ. ಮುಡಾ ಹಗರಣದಲ್ಲಿ ನನ್ನ ಪಾತ್ರ ಇಲ್ಲ, ಕಾನೂನು ಪ್ರಕಾರ ಎಲ್ಲಾವೂ ಸರಿ ಇದೆ. ರಾಜ್ಯಪಾಲರು ಸಂವಿಧಾನದ ಮುಖ್ಯಸ್ಥರು. ಹಾಗಾಗಿ ಅವರು ಕಾನೂನು ಪ್ರಕಾರ ಸಂವಿಧಾನದ ಪ್ರಕಾರ ಸರ್ಕಾರ ಇರುವುದನ್ನು ಒಪ್ಪಿಕೊಳ್ಳುತ್ತಾರೆ ಎಂಬ ನಂಬಿಕೆ ನನಗಿದೆ ಎಂದರು. ಮುಖ್ಯಕಾರ್ಯದರ್ಶಿ ಅವರನ್ನು ರಾಜ್ಯಪಾಲರು ಕರೆಸಿಕೊಂಡು ಮಾತನಾಡಿರುವ ಬಗ್ಗೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿಗಳು ಮುಖ್ಯಕಾರ್ಯದರ್ಶಿಗಳು ಹೊಸದಾಗಿ ಅಧಿಕಾರ ಸ್ವೀಕರಿಸಿದ್ದಾರೆ. ರಾಜ್ಯಪಾಲರು ಊರಿನಲ್ಲಿರದ ಕಾರಣ ಅವರನ್ನು ಭೇಟಿ ಮಾಡಿರಲಿಲ್ಲ, ಹಾಗಾಗಿ ರಾಜ್ಯಪಾಲರು ಬೆಂಗಳೂರಿಗೆ ಬಂದ ನಂತರ ಅವರನ್ನು ಭೇಟಿ ಮಾಡಿದ್ದಾರೆ.ಮುಡಾ ವಿಷಯದಲ್ಲಿ ಸಂಪೂರ್ಣವಾಗಿ ಕಾನೂನು ಪ್ರಕಾರ ಏನೇನು ನಡೆದಿದೆ, ಯಾವ ರೀತಿ ನಿವೇಶನ ಮಂಜೂರಾಗಿದೆ, ನಿವೇಶನ ಹಂಚಿಕೆಯಲ್ಲಿ ನಾನು ಯಾವ ರೀತಿ ಪ್ರಭಾವ ಬೀರಿಲ್ಲ, ಎಲ್ಲಾವೂ ಕಾನೂನಿನ ಪ್ರಕಾರ ನಡೆದಿದೆ ಎನ್ನುವುದನ್ನು ರಾಜ್ಯಪಾಲರಿಗೆ ನೀಡಿರುವ ಉತ್ತರದಲ್ಲಿ ಹೇಳಿದ್ದೇವೆ, ಅವರು ಅದನ್ನು ಒಪ್ಪಿಕೊಳ್ಳುತ್ತಾರೆ ಎಂಬ ವಿಶ್ವಾಸವಿದೆ ಎಂದರು.




**ಬಿಜೆಪಿ ಹಗರಣ ಬಗ್ಗೆ ಉಲ್ಲೇಖ**

ಬೃಹತ್ ಸಮಾವೇಶದಲ್ಲಿ ಬಿಜೆಪಿ ಅವಧಿಯಲ್ಲಿ ನಡೆದ ಹಗರಣಗಳ ಬಗ್ಗೆ ಸಿಎಂ ಸಿದ್ದರಾಮಯ್ಯ ಮಾತನಾಡಲಿದ್ದಾರೆ. ಬೆಂಗಳೂರಿನಿಂದ ಆರಭಗೊಂಡ ದೋಸ್ತಿ ಪಾದಯಾತ್ರೆ ಶನಿವಾರ ಮೈಸೂರು ತಲುಪಲಿದೆ. ಬಿಜೆಪಿ ಜೆಡಿಎಸ್ ಮೈಸೂರಿನಲ್ಲೂ ಬೃಹತ್ ಸಮಾವೇಶವನ್ನು ಹಮ್ಮಿಕೊಳ್ಳಲಿದೆ. ಈ ಮೂಲಕ ಮೈತ್ರಿ ಪಕ್ಷ ಹಾಗೂ ಕಾಂಗ್ರೇಸ್ ನಡುವಿನ ರಾಜಕೀಯ ಸಮರಕ್ಕೆ ವೇದಿಕೆ ಸಿದ್ಧಗೊಂಡಿದೆ.

**ಸಿದ್ದರಾಮಯ್ಯ ಪರ ಜನಾಂದೋಲನ**

ಸಿಎಂ ಸಿದ್ದರಾಮಯ್ಯ ಪರವಾಗಿ ಕುರುಬ ಸಂಘಟನೆಗಳು ಹಾಗೂ ಪ್ರಗತಿಪರ ಸಂಘಟನೆಗಳು ನಿಂತಿವೆ. ಮತ್ತೊಂದು ಕಡೆಯಲ್ಲಿ ಕಾಂಗ್ರೆಸ್ ಜನಾಂದೋಲನಾ ಸಭೆಯನ್ನು ನಡೆಸುತ್ತಿದೆ. ಬಿಜೆಪಿ ಅವಧಿಯ ಭ್ರಷ್ಟಾಚಾರ ಆರೋಪಗಳನ್ನು ಮತ್ತೊಮ್ಮೆ ಬಹಿರಂಗಪಡಿಸುತ್ತಿದೆ.



**ರಾಜಕೀಯ ನಿವೃತ್ತಿ ಆಗಬೇಕು**

ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಬಿಜೆಪಿ-ಜೆಡಿಎಸ್‌ನ ಪಾದಯಾತ್ರೆ ಮುಗಿಯುವುದರೊಳಗೆ ಸಿದ್ದರಾಮಯ್ಯ ರಾಜೀನಾಮೆ ಕೊಡುತ್ತಾರೆ ಎಂದು ಹೇಳಿರುವ ಬಗ್ಗೆ ಕೇಳಿದ ಪ್ರಶ್ನೆಗೆ ಗರಂ ಆದ ಮುಖ್ಯಮಂತ್ರಿಗಳು, ಯಡಿಯೂರಪ್ಪನವರಿಗೆ ನನ್ನ ರಾಜೀನಾಮೆ ಕೇಳುವ ನೈತಿಕತೆ ಇದೆಯೇ. ಈಗ ಅವರು ಪೋಕ್ಸೋ ಕೇಸ್‌ನಲ್ಲಿ ಸಿಲುಕಿದ್ದಾರೆ. ಕೋರ್ಟ್‌ನ ದಯೆಯಿಂದ ಜೈಲಿಗೆ ಹೋಗದೆ ಹೊರಗಡೆ ಇದ್ದಾರೆ. ಅವರಿಗೆ 82 ವಯಸ್ಸು. ಈ ವಯಸ್ಸಿನಲ್ಲಿ ಈ ಪೋಕ್ಸೋ ಪ್ರಕರಣ ಹಾಕಿಸಿಕೊಂಡಿದ್ದಾರೆ. ಅವರು ರಾಜಕೀಯ ನಿವೃತ್ತಿ ಆಗಬೇಕು ಎಂದು ಯಡಿಯೂರಪ್ಪ ವಿರುದ್ಧ ವಾಗ್ದಾಳಿ ನಡೆಸಿದರು. ಯಡಿಯೂರಪ್ಪ ಅವರು ಯಾವ ನೈತಿಕತೆ ಇಟ್ಟುಕೊಂಡು ರಾಜೀನಾಮೆ ಕೇಳುತ್ತಿದ್ದಾರೆ.

**1** ಮುಡಾ ಹಗರಣ ಹಾಗೂ ವಾಲ್ಮೀಕಿ ಹಗರಣದ ಹಿನ್ನೆಲೆ ಬಿಜೆಪಿ ಮತ್ತು ಜೆಡಿಎಸ್ ದೋಸ್ತಿ ಪಾದಯಾತ್ರೆಗೆ ಸಿಎಂ ಸಿದ್ದರಾಮಯ್ಯ ಕೌಂಟರ್ ನೀಡಲು ಮುಂದಾಗಿದ್ದಾರೆ

**2** ಶುಕ್ರವಾರದಂದು ಮೈಸೂರಿನಲ್ಲಿ ಬೃಹತ್ ಸಮಾವೇಶ ನಡೆಸುವ ಮೂಲಕ ಶಕ್ತಿ ಪ್ರದರ್ಶನಕ್ಕೆ ಸಿಎಂ ಸಿದ್ದರಾಮಯ್ಯ ಮುಂದಾಗಿದ್ದಾರೆ

**3** ಮೈಸೂರಿನಲ್ಲಿ ನಡೆಯುವ ಜನಾಂದೋಲನ ಸಭೆಯಲ್ಲಿ ಸಿಎಂ ಬಿಜೆಪಿ ವಿರುದ್ಧದ ಹಗರಣಗಳ ಆರೋಪದ ಬಗ್ಗೆ ಮಾತನಾಡಲಿದ್ದಾರೆ

## ನಮ್ಮ ಹೋರಾಟದಿಂದ ಸಿದ್ದರಾಮಯ್ಯ ನಿದ್ದೆಗೆಟ್ಟಿದ್ದಾರೆ

**ಸರ್ಕಾರದ ವಿರುದ್ಧ ಬಿವೈವಿ ಕೆಂಡ**

• **ಉದಯವಾಹಿನಿ, ಮಂಡ್ಯ**


ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಇಂದು ದೋಸ್ತಿಗಳ ಪಾದಯಾತ್ರೆ ಮಂಡ್ಯ ಜಿಲ್ಲೆಯನ್ನು ತಲುಪಿತು 5 ನೆ ದಿನದ ಪಾದಯಾತ್ರೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ನಮ್ಮ ಹೋರಾಟದ ಪರಿಣಾಮ ಆಡಳಿತ ಪಕ್ಷಕ್ಕೆ ನಡುಕ ಉಂಟಾಗಿದೆ. ಸಿದ್ದರಾಮಯ್ಯನವರಿಗೆ ಇವತ್ತು ನಿದ್ರೆ ಬರುತ್ತಿಲ್ಲ ಎಂದರು.

ಮಂಡ್ಯದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಮುಡಾ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯ ಸಿಲುಕಿ ಸಂಕಷ್ಟಕ್ಕೆ ಈಡಾಗಿದ್ದಾರೆ. ಹಾಗಾಗಿ ಅವರಿಗೆ ಸರಿಯಾಗಿ ನಿದ್ರೆ ಬರುತ್ತಿಲ್ಲ. ಅಧಿಕೃತ ಕಾರ್ಯಕ್ರಮಗಳೆಲ್ಲವೂ ಕೂಡ ರದ್ದು ಮಾಡುತ್ತಿರುವುದನ್ನು ನಾವು ನೋಡುತ್ತಿದ್ದೇವೆ ಎಂದರು.

ಅಹಿಂದ ಹೆಸರಲ್ಲಿ ಸಿದ್ದರಾಮಯ್ಯ ಅಧಿಕಾರ ಹಿಡಿದಿದ್ದಾರೆ ಅಧಿಕಾರಕ್ಕೆ ಬಂದ ನಂತರ ಭ್ರಷ್ಟಾಚಾರದಲ್ಲಿ ಸಿಎಂ ಸಿದ್ದರಾಮಯ್ಯ ಮುಳುಗಿದ್ದಾರೆ ಭ್ರಷ್ಟ ಮುಖ್ಯಮಂತ್ರಿಯಿಂದ ಜನರಿಗೆ ನ್ಯಾಯ ಸಿಗಬೇಕು..ಕಾಂಗ್ರೇಸ್ ಸರ್ಕಾರ ಹಗಲು ದರೋಡೆ ಮಾಡುತ್ತಿದೆ ಎಂದು ಮಂಡ್ಯದಲ್ಲಿ ರಾಜ್ಯ ಬಿಜೆಪಿ ಅಧ್ಯಕ್ಷ ವಿಜಯೇಂದ್ರ ವಾಗ್ದಳಿ ನಡೆಸಿದರು.

ಎಸ್‌ಎಮ್ ಕೃಷ್ಣ ಬಿಎಸ್ ಯಡಿಯೂರಪ್ಪ ಅವರಿಗೆ ಜನ್ಮ ಕೊಟ್ಟಿರುವಂತಹ ಪುಣ್ಯಭೂಮಿ ಮಂಡ್ಯ. ಎಸ್‌ಐಟಿ ಅಂದರೆ ಸಿದ್ದರಾಮಯ್ಯ ಇನ್ವೆಸ್ಟಿಗೇಷನ್ ಟೀಮ್ ಇದ್ದಂಗೆ. ಭ್ರಷ್ಟ ಕಾಂಗ್ರೆಸ್ ವಿರುದ್ಧ ಹೋರಾಟ ಮಾಡುತ್ತಿದ್ದೇವೆ ಸಿದ್ದರಾಮಯ್ಯ ಅವರನ್ನು ಕೆಳಗಿಳಿಸುವವರೆಗೆ ಹೋರಾಟ ನಿಲ್ಲುವುದಿಲ್ಲ. ಪೊಲೀಸ್ ಅಧಿಕಾರಿಗಳ ಮೇಲೆ ವಿಶ್ವಾಸವಿದೆ ಆದರೆ ಆಡಳಿತ ಪಕ್ಷ ಕಾಂಗ್ರೇಸ್ ಮೇಲೆ ನಂಬಿಕೆ ಇಲ್ಲ ಎಂದರು.

ಡಿಕೆ ಶಿವಕುಮಾರ್ ಬಿಚ್ಚಿಡುವಂತಹ ಅವಶ್ಯಕತೆ ಇಲ್ಲ. ಇವರ ಯೋಗ್ಯತೆಗೆ ಸದನದಲ್ಲಿ ಉತ್ತರ ಕೊಡಕ್ಕೆ ಆಗುವುದಿಲ್ಲ. ಸದನದಲ್ಲಿ ಉತ್ತರ ಕೊಡದವರು ಇಲ್ಲಿ ಬಂದು ಪುಕ್ಕಟ್ಟೆ ಮಾತನಾಡುತ್ತಾರೆ. ನಾವ್ಯಾರು ಇವರಿಗೆ ಕಿಮ್ಮತ್ತು ಕೊಡುವ ಅವಶ್ಯಕತೆ ಇಲ್ಲ. ಐದನೇ ದಿನದಲ್ಲಿ ಪಾದಯಾತ್ರೆಯಲ್ಲಿದ್ದರೂ ಸಹ ಕಾರ್ಯಕರ್ತರಲ್ಲಿ ಮುಖದಲ್ಲಿ ಉತ್ಸಾಹ ಕಡಿಮೆಯಾಗಿಲ್ಲ ಎಂದರು.



## ಅವರದ್ದು ಏನೇನಿದೆ ಎಲ್ಲವನ್ನು ಬಿಚ್ಕೊಂಡು ನಿಂತ್ಕೊಳ್ಳಿ

• **ಉದಯವಾಹಿನಿ, ಮಂಡ್ಯ**

ಮುಡಾ ಹಗರಣಕೆ ಸಂಬಂಧಿಸಿದಂತೆ ಸಿಎಂ ಸಿದ್ದರಾಮಯ್ಯ ಅವರ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ಜೆಡಿಎಸ್ ಪಾದಯಾತ್ರೆ ಹಮಿಕೊಂಡಿದ್ದು, ಮಂಡ್ಯ ಜಿಲ್ಲೆಯನ್ನು ತಲುಪಿತು. ಕುಮಾರಸ್ವಾಮಿ ವಿರುದ್ಧ ಹಗರಣಗಳನ್ನು ಬಿಚ್ಚಿಡುತ್ತೇನೆ ಎಂದು ಡಿಕೆ ಶಿವಕುಮಾರ್ ಅವರ ಹೇಳಿಕೆಗೆ ಎಚ್ ಡಿ ಕುಮಾರಸ್ವಾಮಿ ಅವರದು ಏನೇನಿದೆಯೋ ಕೆಲವು ಬಿಚ್ಕೊಂಡು ನಿಂತ್ಕೊಳ್ಳಿ ಏನು ತೊಂದರೆ ಇಲ್ಲ ಎಂದು ವಾಗ್ದಾಳಿ ನಡೆಸಿದರು.

ಮಂಡ್ಯದಲ್ಲಿ ಪಾದಯಾತ್ರೆ ಮಾಡುತ್ತಲೇ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕೊಚ್ಚೆಗಳ ಬಗ್ಗೆ ಮಾತಾಡಬಾರದು ಅಂತ ಜನ ಸಲಹೆ ಕೊಡುತ್ತಾರೆ. ನಾನು ಮಾತನಾಡಬಾರದು ಅಂತಿದ್ದೆ. ನಿನ್ನೆ ಹೇಳಿಕೆ ಕುರಿತು ಒಂದು ವಿಡಿಯೋ ಪ್ಲೇ ಮಾಡಿದ್ದಾರೆ. ಅದಕ್ಕೆ ನಾನು ಸಿಡಿ ಶಿವು ಅಂತ ಹೇಳಿದ್ದು. ಎಲ್ಲೋಗುತ್ತೆ ವಿಡಿಯೋ ಬಿಡುವ ಚಾಳಿ ಎಂದು ಎಚ್ ಡಿ ಕುಮಾರಸ್ವಾಮಿ ಡಿಸಿಎಂ ಡಿಕೆ ಶಿವಕುಮಾರ್ ವಿರುದ್ಧ ಕಿಡಿ ಕಾರಿದರು.

ಹಿಂದೆ ನಿಮ್ಮ ಸಿದ್ದರಾಮಯ್ಯ ಕಾಂಗ್ರೇಸ್ ಬಗ್ಗೆ ಏನೆಲ್ಲ ಮಾತಾಡಿಲ್ಲ ಅದನ್ನೆಲ್ಲ ಮರೆತಿದ್ದೀರಾ ಸಿದ್ದರಾಮಯ್ಯ ರಾಜೀನಾಮೆ ಕೊಡುವುದು ಬಿಡುವುದು ಅವರಿಗೆ ಬಿಟ್ಟಿದ್ದು. ಈ ಒಂದು ಹಗರಣಗಳ ಬಗ್ಗೆ ಜನರಿಗೆ ತಿಳುವಳಿಕೆ ಮೂಡಿಸಬೇಕಲ್ಲ. ಜನರಿಗೆ ರಾಜ್ಯದಲ್ಲಿ ಏನೇನು ನಡೆದಿದೆ ಸರ್ಕಾರದ ಆಸ್ತಿಗಳನ್ನ ಯಾವ ರೀತಿ ಲಪಟಾಯಿಸಿದ್ದಾರೆ ಆ ಒಂದು ವಿಷಯಗಳನ್ನು ಜನತೆಗೆ ತಿಳಿಸುವುದು ನಮ್ಮ ಜವಾಬ್ದಾರಿ. ಹಿಂದುಳಿದ ನಾಯಕರೇ ಹಿಂದುಳಿದವರ ಹೆಸರಿನಲ್ಲಿದ್ದಂತ ಹಣವನ್ನು ಲೂಟಿ ಮಾಡಿದ್ದಾರೆ ಎಂದರು.

ಬಡವರ ಪರ ಕೆಲಸ ಮಾಡಬೇಕಿದ್ದ ಹಣ ಲೂಟಿಯಾಗಿದೆ. ಹಿಂದುಳಿದವರಿಗೆ ತಲುಪಿದ ಬೇಕಾದ ಹಣ ಲೂಟಿಯಾಗಿದೆ. ರಾಜ್ಯಪಾಲರನ್ನು ಯಾರು ದುರ್ಬಳಕೆ ಮಾಡಿಕೊಳ್ಳುವುದಕ್ಕೆ ಆಗಲ್ಲ. ರಾಜ್ಯಪಾಲರು ಸಂವಿಧಾನ ವ್ಯಾಪ್ತಿಯಲ್ಲಿ ಅಧಿಕಾರ ಚಲಾವಣೆ ಮಾಡುತ್ತಾರೆ. ಅವರಿಗೆ ಅಧಿಕಾರ ಇದೆ ಅದನ್ನು ಬಳಸಿಕೊಳ್ಳುತ್ತಾರೆ ಅಷ್ಟೇ. ಇನ್ನೂ ಎಚ್ ಡಿ ಕುಮಾರಸ್ವಾಮಿ ಅವರ ಕುರಿತು ಎಲ್ಲಾ ಹಗರಣಗಳ ಬಿಚ್ಚಿಡುತ್ತೇನೆ ಎಂಬ ಡಿಕೆ ಶಿವಕುಮಾರ್ ಹೇಳಿಕೆಗೆ ಅವರದು ಏನೇನಿದೆ ಎಲ್ಲಾವನ್ನು ಬಿಚ್ಕೊಂಡು ನಿಂತ್ಕೊಳ್ಳಿ ಏನು ತೊಂದರೆ ಇಲ್ಲ.



# ಬೆಂಗಳೂರಿನ ಖಾಲಿ ನಿವೇಶನ ಮಾಲೀಕರಿಗೆ ಬಿಗ್ ಶಾಕ್

### ತ್ಯಾಜ್ಯ ವಿಲೆವಾರಿಗಾಗಿ ಮಾಲೀಕರಿಂದ ಆಸ್ತಿ ತೆರಿಗೆಯ ಭಾಗವಾಗಿ ದಂಡ ಮತ್ತು ವಿಲೇವಾರಿಗೆ ತಗುಲಿದ ವೆಚ್ಚ ಸಂಗ್ರಹ

• **ಉದಯವಾಹಿನಿ, ಬೆಂಗಳೂರು**

ನಗರದ ಖಾಲಿ ನಿವೇಶನ ಮಾಲೀಕರಿಗೆ ಬಿಗ್ ಶಾಕ್ ಎನ್ನುವಂತೆ ಸ್ವಚ್ಛತೆಯನ್ನು ಕಾಪಾಡದೇ ಇರುವಂತವರಿಗೆ ಆಸ್ತಿ ತೆರಿಗೆಯ ಭಾಗಾವಗಿ ದಂಡ ಮತ್ತು ವಿಲೇವಾರಿಗೆ ತಲುಪುವಂತ ವೆಚ್ಚವನ್ನು ವಸೂಲಿ ಮಾಡುವಂತೆ ಬಿಬಿಎಂಪಿ ಆದೇಶಿಸಿದೆ.

ಈ ಕುರಿತಂತೆ ಬಿಬಿಎಂಪಿಯ ಮುಖ್ಯ ಆಯುಕ್ತರು ಆದೇಶ ಹೊರಡಿಸಿದ್ದು, ಖಾಲಿ ಇರುವ ತೆರೆದ ಸ್ಥಳಗಳಿಂದ/ ಖಾಲಿ ನಿವೇಶನಗಳಿಂದ ತ್ಯಾಜ್ಯ ವಿಲೆವಾರಿಗಾಗಿ ಮಾಲೀಕರಿಂದ ಆಸ್ತಿ ತೆರಿಗೆಯ ಭಾಗವಾಗಿ ದಂಡ ಮತ್ತು ವಿಲೇವಾರಿಗೆ ತಗುಲಿದ ವೆಚ್ಚ ಸಂಗ್ರಹಿಸುವಂತೆ ಸೂಚಿಸಿರುವುದಾಗಿ ತಿಳಿಸಿದ್ದಾರೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಖಾಲಿ ಇರುವ ತೆರೆದ ಸ್ಥಳಗಳಿಂದ/ ಖಾಲಿ ನಿವೇಶನಗಳಿಂದ ತ್ಯಾಜ್ಯ ವಿಲೆವಾರಿಗಾಗಿ ಮಾಲೀಕರಿಂದ ಆಸ್ತಿ ತೆರಿಗೆಯ ಭಾಗವಾಗಿ ದಂಡ ಮತ್ತು ವಿಲೇವಾರಿಗೆ ತಗುಲಿದ ವೆಚ್ಚ ಸಂಗ್ರಹಿಸುವ ಕುರಿತು ಘನತ್ಯಾಜ್ಯ ನಿರ್ವಹಣೆ ನಿಯಮಗಳು-2016, ಘನತ್ಯಾಜ್ಯ ನಿರ್ವಹಣೆ ಬೈ-ಲಾಸ್ 2020 ಮತ್ತು ಬಿಬಿಎಂಪಿ ಕಾಯಿದೆ 2020ರ ಅಡಿಯಲ್ಲಿ ಹೊಸ ಆದೇಶವನ್ನು ಹೊರಡಿಸಲಾಗಿರುತ್ತದೆ.



**ಸ್ವಚ್ಛತೆ ಕಾಪಾಡದಿದ್ದರೇ ಬಿಬಿಎಂಪಿ ದಂಡ**

- ವಲಯ ಕಛೇರಿಗಳು ಎಲ್ಲಾ ಖಾಲಿ ನಿವೇಶನಗಳು/ಪ್ಲಾಟ್ಗಳು/ ಸ್ಥಳಗಳು ಮತ್ತು ಘನತ್ಯಾಜ್ಯ/ ಕಟ್ಟಡ ಮತ್ತು ಭಗ್ನಾವಶೇಷ ತ್ಯಾಜ್ಯ(ಅ ಆ)ವನ್ನು ಸುರಿದು, ಅಹಿತಕರ ಅಥವಾ ಅನಾರೋಗ್ಯಕರ ಸ್ಥಿತಿ ಅಥವಾ ಯಾವುದೇ ದಪ್ಪ ಅಥವಾ ಹಾನಿಕಾರಕ ಸಸ್ಯವರ್ಗ, ಮರಗಳು ಅಥವಾ ಗಿಡಗಂಟಿಗಳಿಂದ ಆರೋಗ್ಯಕ್ಕೆ ಹಾನಿಕರ ಅಥವಾ ಆಕ್ರಮಣಕಾರಿ ಎಂದು ಗುರುತಿಸಲ್ಪಡುವ ಸಾರ್ವಜನಿಕ ಸ್ಥಳಗಳನ್ನು ಅಥವಾ ನೆರೆಹೊರೆಯವರಿಗೆ ತೊಂದರೆಯನ್ನುಂಟುಮಾಡುವ ಸ್ಥಳಗಳನ್ನು ಗುರುತಿಸುವುದು.
- ನಿರ್ದಿಷ್ಟ ನಿಯಮಗಳ ಉಲ್ಲಂಘನೆಗೆ ಘನತ್ಯಾಜ್ಯ ನಿರ್ವಹಣಾ ಬೈ-ಲಾ ಶೈಡೂಲ್-VIIಗಳಿಗೆ ಅನುಗುಣವಾಗಿ ದಂಡವನ್ನು ವಿಧಿಸುವುದು.
- ಖಾಲಿ ನಿವೇಶನದಲ್ಲಿನ ತ್ಯಾಜ್ಯವನ್ನು ತೆಗೆದುಹಾಕಲು ಅಥವಾ ತೆರವುಗೊಳಿಸಲು 07 ದಿನಗಳ ನಿರ್ದಿಷ್ಟ ಅವಧಿಯೊಂದಿಗೆ ಸೂಚನೆಯನ್ನು ನೀಡುವುದು.
- ವ್ಯಕ್ತಿ/ಮಾಲೀಕರು ನಿರ್ದೇಶನಗಳನ್ನು ಪಾಲಿಸಲು ವಿಫಲರಾದರೆ, ನಂತರ ಪಾಲಿಕೆಯಿಂದ ಸ್ಥಳವನ್ನು ತೆರವುಗೊಳಿಸಲು ಕ್ರಮವನ್ನು ಪ್ರಾರಂಭಿಸುವುದು ಮತ್ತು ತ್ಯಾಜ್ಯವನ್ನು ತೆರವುಗೊಳಿಸಲು/ ತೆಗೆದುಹಾಕಲು ಮಾಡಿದ ವೆಚ್ಚವನ್ನು ಮತ್ತು ದಂಡವನ್ನು ಪಾವತಿಸಲು ಸೂಚಿಸುವ ಸೂಚನೆಯ(ಆಸ್ತಿ ತೆರಿಗೆಯ ಸೂಚನೆಯಲ್ಲಿಯೇ ಪ್ರತ್ಯೇಕ ಕೋಷ್ಠಕದಲ್ಲಿ) (07 ದಿನಗಳ ಕಾಲಾವಧಿಯೊಂದಿಗೆ) ನೀಡುವುದು.
- ದಂಡ ಮತ್ತು ವೆಚ್ಚವನ್ನು ಆಸ್ತಿ ತೆರಿಗೆಯ ಪುಸ್ತಕಗಳಲ್ಲಿ ನಮೂದಿಸಬೇಕು ಮತ್ತು ಆಸ್ತಿ ತೆರಿಗೆಯ ರಶೀದಿಯಲ್ಲಿ ಪ್ರತ್ಯೇಕ ಕೋಷ್ಠಕದಲ್ಲಿ ನಮೂದಿಸುವ ಮೂಲಕ ಆಸ್ತಿ ತೆರಿಗೆ ಸಂಗ್ರಹಣೆಯೊಂದಿಗೆ ಬಾಕಿಯಾಗಿ ಸಂಗ್ರಹಿಸುವುದು.
- ನಿಗದಿತ ಅವಧಿಯಲ್ಲಿ ಪಾವತಿಸಲು ವಿಫಲವಾದಲ್ಲಿ ವಲಯ ಆಯುಕ್ತರುರವರು ಸೂಕ್ತ ಅನ್ವಯಿತ ಬಡ್ಡಿಯನ್ನು ವಿಧಿಸುವುದು.



ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

## ತುರೀಯವದು ಗುಣಗಂಧಾವಸ್ಥೆ


ನಿಜಗುಣರ ಪರಮಾನುಭವ ಬೋಧೆಯ ಮಾತು. ಈ ಹಿಂದೆ ಮೂರು ಅವಸ್ಥೆಗಳನ್ನು ವಿವರಿಸಲಾಗಿದೆ. ಇಲ್ಲಿ ಇನ್ನೊಂದು ರೀತಿಯಲ್ಲಿ ಮೂರು ಅವಸ್ಥೆಗಳನ್ನು ಹೇಳಲಾಗಿದೆ. ಈ ಜಗತ್ತು ಸತ್ಯ ಎಂದು ತಿಳಿದರೆ ಅದೇ ಜಾಗ್ರಾವಸ್ಥೆ. ಈ ಜಗತ್ತು ಸುಳ್ಳು ಎಂದು ತಿಳಿದರೆ ಅದು ಸ್ವಪ್ನಾವಸ್ಥೆ. ಈ ಜಗತ್ತನ್ನು ಸತ್ಯ ಎಂದಾಗಲೀ ಸುಳ್ಳೆಂದಾಗಲೀ ತಿಳಿಯದಿರುವುದೇ ಸುಪ್ತಿ = ನಿದ್ರಾವಸ್ಥೆ. ಈ ಮೂರೂ ಅವಸ್ಥೆಗಳು ನನಗಿಂತ ಬೇರೆ, ಇವು ದೃಶ್ಯಗಳು ನಾನು ಅವನ್ನು ಎದಿರಿಟ್ಟು ನೋಡುವವನು ಎಂದು ತಿಳಿಯುವ ಆತ್ಮನಿಗೆ ದ್ರಷ್ಟಾ ಎಂದು ಹೆಸರು.

## ಮನೆ ಬದಲಿಸಿದರೂ ಗೃಹಜ್ಯೋತಿ ಯೋಜನೆ ಲಾಭ: ಇಂಧನ

• ಉದಯವಾಹಿನಿ, ಬೆಂಗಳೂರು

ಮನೆ ಬದಲಾವಣೆ ಮಾಡಿದ ನಂತರ ಗೃಹಜ್ಯೋತಿ ಯೋಜನೆಯ ಲಾಭ ಪಡೆದುಕೊಳ್ಳಲು ಹಳೆ ಮನೆಯ ಆರ್.ಆರ್. ಸಂಖ್ಯೆಯನ್ನು ಡಿ -ಲಿಂಕ್ ಮಾಡುವ ಸೌಲಭ್ಯವನ್ನು ಇಂಧನ ಇಲಾಖೆ ವತಿಯಿಂದ ಕಲ್ಪಿಸಲಾಗಿದೆ. ಫಲಾನುಭವಿಗಳು ವಿವಿಧ ಕಾರಣಗಳಿಂದ ಮನೆ ಬದಲಾವಣೆ ಸಂದರ್ಭದಲ್ಲಿ ಹಳೆ ಖಾತೆಯ ಆರ್.ಆರ್. ಸಂಖ್ಯೆಯನ್ನು ಡಿ-ಲಿಂಕ್ ಮಾಡಿ ಮತ್ತೊಂದು ಮನೆಯ ಆರ್.ಆರ್. ಸಂಖ್ಯೆಯೊಂದಿಗೆ ಗೃಹಜ್ಯೋತಿ ಯೋಜನೆಯ ಲಾಭ ಪಡೆಯಬಹುದು. ಗ್ರಾಹಕರು ಸೇವಾ ಸಿಂಧು ಕರ್ನಾಟಕ ವೆಬ್ಸೈಟ್‌ನಲ್ಲಿ ಆರ್. ಆರ್. ಸಂಖ್ಯೆಯನ್ನು ಡಿ-ಲಿಂಕ್ ಮಾಡಿಕೊಳ್ಳಬಹುದಾಗಿದೆ.

## ಹರಿದಾಸ ವೈಭವ



• ಉದಯವಾಹಿನಿ, ಬೆಂಗಳೂರು

ಪವಮಾನಪುರದ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಶ್ರೀಮಠದ ವಿಚಾರಣಾಕರ್ತರಾದ ಶ್ರೀ ಗಿರಿರಾಜಾಚಾರ್ಯರ ನೇತೃತ್ವದಲ್ಲಿ ಆಗಸ್ಟ್ 8, ಗುರುವಾರ ಸಂಜೆ 7-00 ಗಂಟೆಗೆ ಶ್ರೀಮತಿ ಪ್ರಜ್ಞಾ ರಾವ್ ಇವರಿಂದ ಗಾಯನ, ಶ್ರೀ ಅಮಿತ್ ಶರ್ಮಾರಿಂದ ಕೀ-ಬೋರ್ಡ್, ಶ್ರೀ ಸರ್ವೋತ್ತಮರಿಂದ ತಬಲಾ ವಾದನ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಶ್ರೀ ಗೊಗ್ಗಿ ಕೃಷ್ಣಾಚಾರ್ ತಿಳಿಸಿದ್ದಾರೆ. ಸ್ಥಳ : ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, ಒಂದನೇ ಮುಖ್ಯರಸ್ತೆ, ಪವಮಾನಪುರ, ಬೆಂಗಳೂರು-560062

## ಕನ್ನಡಿಗರಿಗೆ ಉದ್ಯೋಗ ಮೀಸಲಾತಿ ಪ್ರಶ್ನಿಸಿದ್ದ ಪಿಐಎಲ್ ಅರ್ಜಿ ವಜಾ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿರುವ ಕೈಗಾರಿಕೆಗಳು, ಕಾರ್ಖಾನೆಗಳು, ಇತರೆ ಉದ್ಯಮಗಳಲ್ಲಿ ಕನ್ನಡಿಗರಿಗೆ ಉದ್ಯೋಗ ಮೀಸಲಾತಿ ಕಲ್ಪಿಸುವ ಮಸೂದೆ ಪ್ರಶ್ನಿಸಿ ಸಲ್ಲಿಸಲಾಗಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿ(ಪಿಐಎಲ್)ಅನ್ನು ಹೈಕೋರ್ಟ್ ವಜಾಗೊಳಿಸಿದೆ.ಬೆಂಗಳೂರಿನ ಬಿಳೇಕಹಳ್ಳಿಯ ಸೋಮೇಶ್ವರ ಲೇಔಟ್ ನ ಲೆಕ್ಕಪರಿಶೋಧಕಿ ಆರ್.ಅಮೃತಲಕ್ಷ್ಮಿ ಅವರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ಮುಖ್ಯ ನ್ಯಾಯಮೂರ್ತಿ ಎನ್.ವಿ. ಅಂಜಾರಿಯಾ ನೇತೃತ್ವದ ವಿಭಾಗೀಯ ಪೀಠದಲ್ಲಿ ಮಂಗಳವಾರ ನಡೆದಿದ್ದು, ಅರ್ಜಿಯನ್ನು ವಜಾಗೊಳಿಸಲಾಗಿದೆ. ಅರ್ಜಿದಾರರ ಪರ ವಕೀಲರು, ಇದೇ ಮಾದರಿಯ ಕಾನೂನನ್ನು ಹರಿಯಾಣ ಸರ್ಕಾರ ರಚಿಸಿದ್ದನ್ನು ಪಂಜಾಬ್ ಮತ್ತು ಹರಿಯಾಣ ಹೈಕೋರ್ಟ್ ರದ್ದುಪಡಿಸಿತ್ತು ಎಂದು ಹೇಳಿದ್ದಾರೆ. ಅರ್ಜಿ ಪರಿಶೀಲಿಸಿದ ನ್ಯಾಯಪೀಠ, ಹರಿಯಾಣ ಸರ್ಕಾರ ತನ್ನ ರಾಜ್ಯದ ಖಾಸಗಿ ವಲಯದಲ್ಲಿ ಸ್ಥಳೀಯರಿಗೆ ಮೀಸಲಾತಿ ಕಲ್ಪಿಸಿ ಕಾಯ್ದೆ ರೂಪಿಸಿತ್ತು. ಕರ್ನಾಟಕದಲ್ಲಿ ವಿಧೇಯಕ ಕಾಯ್ದೆ ರೂಪದಲ್ಲಿ ಜಾರಿಗೆ ಬಂದಿಲ್ಲ. ಕರಡು ಸ್ವರೂಪದಲ್ಲಿದೆ. ಇದು ಕಾನೂನಿನ ಮಾನ್ಯತೆ ಪಡೆದಿಲ್ಲ. ಆದ್ದರಿಂದ ವಿಧೇಯಕ ಕಾನೂನಿನ ಗುಣಲಕ್ಷಣ ಹೊಂದಿರುವುದಾಗಿ ಭಾವಿಸಲಾಗದು ಎಂದು ಅಭಿಪ್ರಾಯಪಟ್ಟಿದೆ. ಅರ್ಜಿದಾರರು ಆಕ್ಷೇಪಿಸಿರುವ ಮಸೂದೆ ಇನ್ನೂ ಕಾಯ್ದೆ ರೂಪದಲ್ಲಿ ಜಾರಿಗೆ ಬಂದಿಲ್ಲ ಎಂಬ ಅಭಿಪ್ರಾಯದೊಂದಿಗೆ ನ್ಯಾಯಪೀಠ ಅರ್ಜಿಯನ್ನು ವಜಾಗೊಳಿಸಿ ಆದೇಶಿಸಿದೆ.

## ಸೀಮಂತದ ದಿನವೇ, ಪತಿ ಕಣ್ಣೆದುರೇ ತುಂಬು ಗರ್ಭಿಣಿ ಸಾವು

• ಉದಯವಾಹಿನಿ, ನೆಲಮಂಗಲ

ಸೀಮಂತಕ್ಕೆ ಹೊರಟಿದ್ದ ತುಂಬು ಗರ್ಭಿಣಿ ಪತಿಯ ಕಣ್ಣೆದುರೇ ಭೀಕರ ರಸ್ತೆ ಅಪಘಾತದಲ್ಲಿ ದಾರುಣವಾಗಿ ಸಾವನ್ನಪ್ಪಿರುವ ಘಟನೆ ಬೆಂಗಳೂರು-ತುಮಕೂರು ರಾಷ್ಟ್ರೀಯ ಹೆದ್ದಾರಿ ಎಡೆಹಳ್ಳಿ ಕ್ರಾಸ್ ಬಳಿ ನಡೆದಿದೆ. ತಾಲ್ಲೂಕಿನ ತೋಟನಹಳ್ಳಿ ಗ್ರಾಮದ ನಿವಾಸಿ ಸಿಂಚನ ಮೃತಪಟ್ಟ ಗೃಹಿಣಿ. ಸಿಂಚನ ಸೀಮಂತ ಕಾರ್ಯವಿದ್ದು, ಈ ಹಿನ್ನೆಲೆಯಲ್ಲಿ ದಂಪತಿ ದೇವಸ್ಥಾನಕ್ಕೆ ತೆರಳಿ ಪೂಜೆ ಮುಗಿಸಿಕೊಂಡು ಮನೆಗೆ ವಾಪಸ್ ಬರುತ್ತಿದ್ದಾಗ ಹಿಂದಿನಿಂದ ವೇಗವಾಗಿ ಬಂದ ಜಲ್ಲಿ ತುಂಬಿದ ಲಾರಿ ಡಿಕ್ಕಿ ಹೊಡೆದ ಪರಿಣಾಮ ಗರ್ಭಿಣಿ ಸಿಂಚನ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಕಣ್ಣೆದುರೇ ಪತ್ನಿ ಹಾಗೂ ಇನ್ನೂ ಕಣ್ಣುಬಿಡದ ಕಂದಮ ನರಳಿನರಳಿ ಸಾವನ್ನಪ್ಪಿದ್ದು, ಪತಿಯ ಆಕ್ರಂದನ ಮುಗಿಲು ಮುಟ್ಟಿತ್ತು.ಸುದ್ದಿ ತಿಳಿಯುತ್ತಿದ್ದಂತೆ ನೆಲಮಂಗಲ ಸಂಚಾರಿ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.ಸೀಮಂತದ ಸಂಭ್ರಮದಲ್ಲಿದ್ದ ಕುಟುಂಬ ಸದಸ್ಯರಿಗೆ ಈ ಒಂದು ದುರಂತ ಬರಸಿಡಿಲಿನಂತೆ ಅಪ್ಪಳಿಸಿದ್ದು, ಸೀಮಂತ ಮನೆ ಸೂತಕದ ಮನೆಯಾಗಿತ್ತು.

## ಬೆಂಗಳೂರಿನ ಲಾಲ್ ಬಾಗ್‌ನಲ್ಲಿ ಫಲಪುಷ್ಪ ಪ್ರದರ್ಶನ ಆರಂಭ: ಹೀಗಿದೆ ಟಿಕೆಟ್ ದರ

• ಉದಯವಾಹಿನಿ, ಬೆಂಗಳೂರು

ಸ್ವಾತಂತ್ರ್ಯೋತ್ಸವದ ಅಂಗವಾಗಿ ಬೆಂಗಳೂರಿನ ಲಾಲ್ ಬಾಗ್‌ನಲ್ಲಿ ಫಲಪುಷ್ಪ ಪ್ರದರ್ಶನ ಆರಂಭಗೊಳ್ಳಲಿದೆ.ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ವಿಷಯ ಆಧಾರಿತ ಸ್ವಾತಂತ್ರ್ಯೋತ್ಸವ ಫಲಪುಷ್ಪ ಪ್ರದರ್ಶನವು ಲಾಲ್‌ಬಾಗ್‌ನಲ್ಲಿ



ಆಗಸ್ಟ್ 8 ರಿಂದ 19ರ ವರೆಗೆ ನಡೆಯಲಿದೆ. ಲಾಲ್‌ಬಾಗ್‌ನ ಎಲ್ಲಾ ಪ್ರವೇಶ ದ್ವಾರಗಳಲ್ಲಿ ಎಲೆಕ್ಟ್ರಾನಿಕ್ ಟಿಕೆಟ್ ಯಂತ್ರಗಳ ವ್ಯವಸ್ಥೆ ಮಾಡಲಾಗಿದ್ದು, ಆನ್‌ಲೈನ್ ಬುಕ್ಕಿಂಗ್ ಪಡೆದುಕೊಳ್ಳುವ ಸೌಲಭ್ಯ ಇದೆ. ವಯಸ್ಕರಿಗೆ ರೂ.80, ರಜೆ ದಿನಗಳಲ್ಲಿ ರೂ.100, ಮಕ್ಕಳಿಗೆ ರೂ.30 ಹಾಗೂ ಸಮವಸ್ತ್ರ ಧರಿಸಿ ಬರುವ ಶಾಲಾ ವಿದ್ಯಾರ್ಥಿಗಳಿಗೆ ಪ್ರವೇಶ ಉಚಿತವಾಗಿದೆ.ಆರಂಭಗೊಳ್ಳುತ್ತಿರುವಂತ ಲಾಲ್ ಬಾಗ್ ಫ್ಲವರ್ ಶೋ ಬೆಳಿಗ್ಗೆ 6 ಗಂಟೆಯಿಂದ ಆರಂಭಗೊಂಡು ಸಂಜೆ 6.30ರವರೆಗೆ ತೆರೆದಿರಲಿದೆ. ಸಾರ್ವಜನಿಕರು ಲಾಲ್ ಬಾಗ್ ಫ್ಲವರ್ ಶೋಗೆ ಭೇಟಿ ನೀಡಿ, ಬಗೆ ಬಗೆಯ ಹೂವುಗಳ ಪ್ರದರ್ಶನವನ್ನು ಕಣ್ ತುಂಬಿಕೊಳ್ಳಬಹುದಾಗಿದೆ.

# ಮುಡಾದ 14 ಸೈಟ್ : ಸಿದ್ದರಾಮಯ್ಯಗೆ ಆರ್.ಅಶೋಕ್ ಪ್ರಶ್ನೆ

### ಕಾಂಗ್ರೆಸ್ ಸರಕಾರ ಬಂದ ಬಳಿಕ ಫ್ರೀ ಆಗಿ ದುಡ್ಡು ಹೊಡೆಯುವ ಸ್ಕೀಂಗಳನ್ನು ಜಾರಿಗೊಳಿಸಿದೆ ಎಂದು ಟೀಕೆ

• ಉದಯವಾಹಿನಿ, ಬೆಂಗಳೂರು

ನೀವು ಕ್ಲೀನಾಗಿ ಮೈಸೂರು ಮೂಡದ 14 ಸೈಟ್ ನುಂಗಿದ್ದೀರಲ್ಲವೇ ನೀವ್ಯಾವ ಸೀಮೆಯ ಕ್ಲೀನ್ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯರನ್ನು ಪ್ರಶ್ನಿಸಿದರು. ಮಂಡ್ಯದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯನವರು ಮೊನ್ನೆ ಬಹಳ ದುಃಖದಿಂದ ನಾನು ಕ್ಲೀನ್ ಎಂದು ಪತ್ರಿಕಾ ಸಂದರ್ಶನದಲ್ಲಿ ಹೇಳಿದ್ದಾರೆ.

40 ವರ್ಷಗಳ ರಾಜಕಾರಣದಲ್ಲಿ ನಾನು ಕ್ಲೀನ್ ಎಂದಿದ್ದಾರೆ ಎಂದು ವ್ಯಂಗ್ಯವಾಡಿದರು. ಹಿಂದೆ ರೀಡೂ ಸಂಬಂಧ ನಾಕ್ಕೈದು ಸಾವಿರ ಕೋಟಿಯ ಹಗರಣ ಆಗಿತ್ತು. ಆ ಹಗರಣದಲ್ಲಿ ನೀವೇ ನಂಬರ್ ಒನ್. ಆಗ ಕೆಂಪಣ್ಣ ಆಯೋಗ ಮಾಡಿದ್ದೀರಿ. 6 ತಿಂಗಳು ಅವಕಾಶ ಕೊಡಲಾಗಿತ್ತು. ಆರು ವರ್ಷವಾದರೂ ವರದಿ ಮಂಡಿಸಿಲ್ಲ; ಇನ್ನು 60 ವರ್ಷ ಆಗಲು ನಾವು ಕಾಯಬೇಕಿದೆ; ಕೆಂಪಣ್ಣ ವರದಿ ಏನು ಹೇಳಿದೆ ಎಂದು ಕಾಯುತ್ತಿದ್ದೇವೆ ಎಂದರು. ಈಗ ದೇಸಾಯಿ ಆಯೋಗ ಮಾಡಿದ್ದೀರಿ. ಸಿದ್ದ ರಾಮಯ್ಯ ನವರು ಈ ಆಯೋಗಕ್ಕೆ ಎಷ್ಟು ತಿಂಗಳು ಕೊಡುತ್ತಾರೆ ಎಂದು ಮೊದಲೇ ತಿಳಿಸಬೇಕು. ಇದಕ್ಕೂ 6 ತಿಂಗಳು, ಆಮೇಲೆ 6 ವರ್ಷ, ನಂತರ 60 ವರ್ಷವೇ ಎಂದು ಪ್ರಶ್ನಿಸಿದರು. ಕ್ಲೀನ್ ಪಟ್ಟವನ್ನು ರಾಜ್ಯದ ಜನರು ಕೊಡಬೇಕಿತ್ತು. ರಾಜ್ಯದ ಜನರು ಕೊಟ್ಟಿಲ್ಲ. ನಿಮ್ಮನ್ನೇ ನೀವೇ ಕ್ಲೀನ್ ಎಂದು ಹೊಗಳಿಕೊಂಡಿದ್ದೀರಿ. ಆ ಪರಿಸ್ಥಿತಿಗೆ ನೀವು ಬಂದುದನ್ನು ನಾವು ನೋಡುತ್ತಿದ್ದೇವೆ ಎಂದು ಟೀಕಿಸಿದರು.

ನಾಕ್ಕೈದು ಸಾವಿರ ಕೋಟಿಯ ಹಗರಣ

ಮುಖ್ಯಮಂತ್ರಿಗಳು ಪತ್ರಿಕಾಗೋಷ್ಠಿ ಮಾಡಿ ಅದನ್ನು



ಉದಯವಾಹಿನಿ ಚಿತ್ರ

ಪುಟಗಟ್ಟಲೆ ಜಾಹೀರಾತಾಗಿ ನೀಡಿದ್ದಾರೆ.

ಕರ್ನಾಟಕದ ಯಾವುದೇ ಸಿಎಂ ಈ ಥರ ಮಾಡಿದ್ದಾರಾ ವಿಧಾನಸಭೆಗೆ ಒಂದು ಗೌರವ, ಪಾವಿತ್ರ್ಯ ಇದೆ. ನೀವು ಅದನ್ನು ಉಲ್ಲಂಘಿಸಿದ್ದೀರಿ ಎಂದು ಆಕ್ಷೇಪಿಸಿದರು. ದುಡ್ಡಿದ್ದ ಶಾಸಕ ಪುಟಗಟ್ಟಲೆ ಬರೆಸಿದರೆ, ಎಂಎಲ್‌ಎ ಆಗಿ ಗೆದ್ದು ಬಂದ ಬಡವರ ಕಥೆ ಏನು ಎಂದು ಕೇಳಿದರು. ದುಡ್ಡನ್ನೇ ಅಳತೆಗೋಲು ಮಾಡುವುದು ಎಷ್ಟು ಸರಿ ಎಂದು ಕೇಳಿದರು. ಕಾಂಗ್ರೆಸ್ ಸರಕಾರ ಬಂದ ಬಳಿಕ ಫ್ರೀ ಆಗಿ ದುಡ್ಡು ಹೊಡೆಯುವ ಸ್ಕೀಂಗಳನ್ನು ಜಾರಿಗೊಳಿಸಿದೆ ಎಂದು ಟೀಕಿಸಿದರು. ನಿಂಗರಿಗೆ ಮೈಲಾರಯ್ಯ, ಮಲ್ಲಯ್ಯ, ದೇವರಾಜು ಎಂಬ ಮಕ್ಕಳಿದ್ದು, ಇವತ್ತಿಗೆ ಹಕ್ಕುದಾರರು 27 ಜನ ಇದ್ದಾರೆ ಎಂದು ವಂಶವೃಕ್ಷದೊಂದಿಗೆ ವಿವರಿಸಿದರು. ನೀವು ದೇವರಾಜು ಒಬ್ಬರ ಕೈಯಲ್ಲೇ ಹೇಗೆ ಸಹಿ ಹಾಕಿಸಿಕೊಂಡಿದ್ದೀರಿ ಎಂದು ಸಿದ್ದರಾಮಯ್ಯರನ್ನು ಪ್ರಶ್ನಿಸಿದರು. ಇದು ಪಿತ್ರಾರ್ಜಿತ ಆಸ್ತಿ ಎಂದು ನೆನಪಿಸಿದರು. 1968ರಲ್ಲಿ ಮಲ್ಲಯ್ಯ ಮತ್ತು ದೇವರಾಜು ಅವರು 464ನೇ ಸರ್ವೇ ನಂಬರ್‌ನ ಮೈಲಾರಯ್ಯ

> 2001ರಲ್ಲಿ ಲೇ ಔಟ್ ಮಾಡಲು ಎಲ್ ಆಂಡ್ ಟಿಯವರಿಗೆ 11 ಕೋಟಿ 68 ಲಕ್ಷದ 6,632 ರೂಪಾಯಿಗೆ ಆದೇಶವಾಗಿದೆ. ಆಗಲೂ ಸಿದ್ದರಾಮಯ್ಯನವರು ಅದನ್ನು ನೋಡಿಕೊಂಡಿಲ್ಲ. ಬಳಿಕ ದೇವರಾಜ್ ಒಬ್ಬರ ಹೆಸರಿಗೆ ಕಾನೂನುಬಾಹಿರವಾಗಿ ಖಾತೆ ಮಾಡಿಸಿಕೊಂಡರು. 27 ಜನ ಹಕ್ಕುದಾರರಿದ್ದರೂ ಒಬ್ಬರ ಹೆಸರಿಗೆ ಖಾತೆ ಮಾಡಿಸಿದ್ದಾರೆ ಎಂದು ಆಕ್ಷೇಪಿಸಿದರು.

ಅವರ ಹೆಸರಿಗೆ ವರ್ಗಾಯಿಸಿದ್ದರು. 1992ರಲ್ಲಿ ಮುಡಾದವರು ಇದೂ ಸೇರಿದಂತೆ 462 ಎಕರೆ ಜಮೀನನ್ನು ಬಡಾವಣೆಗಾಗಿ ನೋಟಿಫಿಕೇಶನ್ ಮಾಡಿದ್ದರು. ಒಂದು ವರ್ಷ ಅದು ನಿಂಗ ಮತ್ತು ಜವರ ಹೆಸರಲ್ಲೇ ಇತ್ತು. 3,24,700 ರೂ.ಗಳನ್ನು 1998ರಲ್ಲಿ ಹಣ ನೀಡಿದ್ದರು. ಮಲ್ಲಯ್ಯ ಅವರು ಇದಕ್ಕೆ ಸಹಿ ಹಾಕಿ ಸ್ವೀಕರಿಸಿದ್ದರು. ಬಳಿಕ ಅದೇವರ್ಷ ಈ ಸರ್ವೇ ನಂಬರನ್ನು ಡಿನೋಟಿಫೈ ಮಾಡಿದ್ದು, ಗಜೆಟ್‌ನಲ್ಲಿ ಪ್ರಕಟಿಸಿದ್ದರು. ಹೇಗೆ ಡಿನೋಟಿಫಿಕೇಶನ್ ಆಗಿದೆ ಎಂದು ಪ್ರಶ್ನಿಸಿದರು. ಆಗ ಉಪ ಮುಖ್ಯಮಂತ್ರಿ ಆಗಿದ್ದವರು ಯಾರು? ಸಿದ್ದರಾಮಯ್ಯನವರು ಎಂದು ವಿವರ ನೀಡಿದರು. ಇಲ್ಲಿಂದಲೇ ಸಿದ್ದರಾಮಯ್ಯನವರ ಕೈವಾಡ ಶುರುವಾಯಿತು ಎಂದರು. 2004ರಲ್ಲಿ ಈ 3.16 ಎಕರೆಯನ್ನು ಸಿದ್ದರಾಮಯ್ಯನವರ ಪತ್ನಿಯ ತಮ್ಮ (ಬಾಮೈದ) ಮಲ್ಲಿಕಾರ್ಜುನಸ್ವಾಮಿ ಬಿನ್ ಮರಿಲಿಂಗಯ್ಯ ಕ್ರಯಕ್ಕೆ ಅಕ್ರಮವಾಗಿ ಪಡೆದಿದ್ದರು ಎಂದು ನೋಂದಣಿ ಪತ್ರವನ್ನು ಪ್ರದರ್ಶಿಸಿದರು. ಲೇ ಔಟ್ ಮಾಡುತ್ತಿರುವಾಗಲೇ ಅದನ್ನು 2005ರಲ್ಲಿ ಅದನ್ನು

> ಮೂಡದಲ್ಲಿ 14 ದೊಡ್ಡ ನಿವೇಶನಗಳನ್ನು ತಗೊಂಡಿದ್ದೀರಲ್ಲವೇ ಇದು ಯಾರದು ನಿಂಗ ಎಂಬವರ 3.16 ಎಕರೆ ಜಮೀನದು. 1936ರಲ್ಲಿ ಅವರಿಗೆ ಒಂದು ರೂಪಾಯಿಗೆ ಲಭಿಸಿದ ಜಮೀನದು. ಅವರ ಪತ್ನಿ 1990ರಲ್ಲಿ ನಿಧನ ಹೊಂದಿದ್ದರು. ನಿಂಗ-ನಿಂಗಮ್ಮರ ಸ್ವಯಾರ್ಜಿತ ಆಸ್ತಿ ಇದಾಗಿದೆ. ಸಿದ್ದರಾಮಯ್ಯನವರು ಎಲ್ಲಿ ಕೆಸರಲ್ಲಿ ಕಾಲಿಟ್ಟರೆಂದು ತಿಳಿಸುವುದಾಗಿ ಆರ್.ಅಶೋಕ್ ಅವರು ಹೇಳಿದರು.

ಭೂಪರಿವರ್ತನೆ ಮಾಡಲಾಯಿತು. ತಹಶೀಲ್ದಾರ್ ಸ್ಥಳ ಮಹಜರು ಮಾಡಿದ್ದರು. ಮರಗಿಡ ಇಲ್ಲ ಎಂದು ಬರೆದಿದ್ದರು. ಎ.ಸಿ., ಡಿ.ಸಿ ಕೂಡ ಇದನ್ನು ಪರಿಶೀಲಿಸಿ ಒಪ್ಪಿಗೆ ಕೊಟ್ಟಿದ್ದರು. ಎಂಥ ಅಮಾಯಕ-ಅಥವಾ ಬುದ್ಧಿವಂತ ಡಿ.ಸಿ. ಇವರು ಎಂದು ಪ್ರಶ್ನಿಸಿದರು. ಎನ್‌ಒಸಿ ಕೊಟ್ಟಿದ್ದ ಮೂಡ ಅಧಿಕಾರಿಯೂ ಪ್ರಳಯಾಂತಕ ಎಂದು ದೂರಿದರು. ಇದು ಮೂಲೆಯಲ್ಲಿದ್ದ ಜಾಗ ಎಂದು ಸಿದ್ದರಾಮಯ್ಯನವರು ಹೇಳಿದ್ದರು.

ಅದು ಮಧ್ಯದಲ್ಲೇ ಬರುತ್ತದೆ; ಅದೂ ತಪ್ಪು ಮಾಹಿತಿ ಎಂದು ನಕ್ಷೆ ನೀಡಿ ವಿವರಿಸಿದರು. ಸಿದ್ದರಾಮಯ್ಯನವರು ಈಗ ಏನೆನ್ನುತ್ತಾರೆ ಎಂದು ಕೇಳಿದರು. ವಿಧಾನ ಪರಿಷತ್ತಿನ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಮಾಜಿ ಉಪಮುಖ್ಯಮಂತ್ರಿ ಡಾ.ಸಿ.ಎನ್.ಅಶ್ವಥ್ ನಾರಾಯಣ್, ಮಾಜಿ ಸಚಿವ ಮತ್ತು ಶಾಸಕ ಗೋಪಾಲಯ್ಯ, ಶಾಸಕ ಅರವಿಂದ ಬೆಲ್ಲದ, ಎಂ.ಎಲ್.ಸಿ. ರಮೇಶ್ ಗೌಡ ಮತ್ತು ಮಂಡ್ಯ ಜಿಲ್ಲೆಯ ಮುಖಂಡರು ಇದ್ದರು.

## ಗೋಪಾಲಕೃಷ್ಣ ಬೇಳೂರು ಬಂಧನಕ್ಕೆ ಸಿ.ಟಿ.ರವಿ ಒತ್ತಾಯ

• ಉದಯವಾಹಿನಿ, ಬೆಂಗಳೂರು

ಹಣಕ್ಕೆ ಬೇಡಿಕೆಯಿಟ್ಟು ಸಹಾಯಕ ಇಂಜಿನಿಯರ್‌ಗೆ ಜೀವ ಬೆದರಿಕೆ ಹಾಕಿರುವ ಶಿವಮೊಗ್ಗ ಜಿಲ್ಲೆ ಸಾಗರ ವಿಧಾನಸಭಾ ಕ್ಷೇತ್ರದ ಶಾಸಕ ಗೋಪಾಲಕೃಷ್ಣ ಬೇಳೂರು ಅವರನ್ನು ಕೂಡಲೇ ಬಂಧಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಬೇಕೆಂದು ಮಾಜಿ ಸಚಿವ, ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ಒತ್ತಾಯಿಸಿದ್ದಾರೆ.

ತಮ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, ಅಧಿಕಾರಿಗಳ ಹಣಕ್ಕಾಗಿ ಕಿರುಕುಳ ನೀಡುವುದೇ ಕರ್ನಾಟಕ ಕಾಂಗ್ರೆಸ್ ನೇತೃತ್ವದ ಸರ್ಕಾರದ ಒನ್‌ಲೈನ್ ಅಜೆಂಡಾ ಎಂದು ಗಂಭೀರ ಆರೋಪ ಮಾಡಿದ್ದಾರೆ.

ಶಾಸಕರ ಮಾತು ಕೇಳಿ ಪುಡಿರೌಡಿಯಂತೆ ವರ್ತಿಸಿ ಸಹಾಯಕ ಎಂಜಿಯರ್‌ಗೆ ಸುಪಾರಿ ಪಡೆದು ಕಿರುಕುಳ ನೀಡುತ್ತಿರುವ ಡಿವೈಎಸ್ಪಿ ಅವರನ್ನು ಕೂಡ ತಕ್ಷಣ



ಉದಯವಾಹಿನಿ ಚಿತ್ರ

ವೇ ಸೇವೆಯಿಂದ ಅಮಾನತುಗೊಳಿಸಬೇಕೆಂದು ಆಗ್ರಹಿಸಿದ್ದಾರೆ. ಸಹಾಯಕ ಎಂಜಿನಿಯರ್ ಒಬ್ಬರು ತಮಗೆ ಸಾಗರ ಶಾಸಕ ಗೋಪಾಲಕೃಷ್ಣ ಬೇಳೂರು ಅವರಿಂದ ಜೀವಬೆದರಿಕೆಯಿದೆ, ದಯವಿಟ್ಟು ನನ್ನನ್ನು ಕಾಪಾಡಿ ಎಂದು ನ್ಯಾಯಾಲಯದಲ್ಲಿ ನ್ಯಾಯಾಧೀಶರ ಮುಂದೆ ಅಂಗಲಾಚುತ್ತಿರುವುದು ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರ ಮತ್ತು ಅರಾಜಕತೆ ವ್ಯಾಪ್ತಿ ಎಷ್ಟರ ಮಟ್ಟಿಗಿದೆ ಎಂಬುದಕ್ಕೆ ಈ ಪ್ರಕರಣವೇ ಸಾಕ್ಷಿ ಎಂದು ರವಿ ವಾಗ್ದಾಳಿ ನಡೆಸಿದ್ದಾರೆ.

## ಕೃಷಿ ವಿದ್ಯಾರ್ಥಿಗಳು ಅನ್ವೇಷಣೆಗೆ ಮುಂದಾಗಲಿ

• ಉದಯವಾಹಿನಿ, ಬೆಂಗಳೂರು

ಕೃಷಿ ವಿದ್ಯಾರ್ಥಿಗಳು ವೈಚಾರಿಕತೆಯನ್ನು ಒರೆಗೆ ಹಚ್ಚುವ ಮೂಲಕ ಹೊಸ ಅನ್ವೇಷಣೆಗಳಿಗೆ ಮುಂದಾಗಬೇಕು ಎಂದು ಬೆಂಗಳೂರು ಕೃಷಿ ವಿವಿ ಕುಲಪತಿ ಡಾ. ಎಸ್.ವಿ.ಸುರೇಶ್ ಕರೆ ನೀಡಿದ್ದಾರೆ.

ನಗರದ ಜಿಕೆವಿಕೆ ಕ್ಯಾಂಪಸ್‌ನಲ್ಲಿ ವಿವಿಯ ಸ್ನಾತಕೋತ್ತರ ಅಧ್ಯಯನ ನಿರ್ದೇಶನಾಲಯವು ಆಯೋಜಿಸಿದ್ದ 'ಸ್ನಾತಕೋತ್ತರ ವಿಜ್ಞಾನ ಸಪ್ತಾಹ'ಕ್ಕೆ ಮಂಗಳವಾರ ಚಾಲನೆ ನೀಡಿ ಮಾತನಾಡಿದರು.

ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ತಮ್ಮ ಸಂಶೋಧನಾ ಪ್ರಯತ್ನ ಹಾಗೂ ಆವಿಷ್ಕಾರಗಳನ್ನು ಪ್ರಸ್ತುತಪಡಿಸಲು ವಿಜ್ಞಾನ ಸಪ್ತಾಹ ಸೂಕ್ತ ವೇದಿಕೆ ಒದಗಿಸಿದೆ. ಈ ವಿಚಾರ ಸಂಕಿರಣದಲ್ಲಿ ಕೃಷಿ ವಿಜ್ಞಾನದ ತಿಳಿವಳಿಕೆಯನ್ನು ಹೆಚ್ಚುವುದರ ಜತೆಗೆ



ಉದಯವಾಹಿನಿ ಚಿತ್ರ

ಸಂವಹನ ಕೌಶಲವನ್ನು ಹದಗೊಳಿಸುವುದರ ಮೂಲಕ ಸಂಶೋಧನಾ ಉತ್ಕೃಷ್ಟತೆಯನ್ನು ಪ್ರೇರೇಪಿಸುವ ಹಾಗೂ ಪೋಷಿಸುವ ಗುರಿಯನ್ನು ಹೊಂದಿದೆ. ಭವಿಷ್ಯದಲ್ಲಿ ಅಂತರ್ ಕೃಷಿ ವಿವಿಗಳ ವಿಜ್ಞಾನ ಸಪ್ತಾಹವನ್ನು ಆಚರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಡಾ. ಸುರೇಶ್ ವಿವರಿಸಿದರು. ಕಾರ್ಯಕ್ರಮದಲ್ಲಿ ವಿಶ್ರಾಂತ ಡೀನ್ ಡಾ. ಕೆ.ಎನ್.ಗಣೇಶಯ್ಯ, ಕೃಷಿ ಶಿಕ್ಷಣ ನಿರ್ದೇಶಕ ಡಾ. ಕೆ.ಸಿ. ನಾರಾಯಣಸ್ವಾಮಿ ಮತ್ತಿತರರಿದ್ದರು.

> ಇಂದಿನ ಸಂಶೋಧನೆಗಳು ಭವಿಷ್ಯದ ಅಭಿವೃದ್ಧಿಗೆ ಬುನಾದಿ. ಯುವಜನತೆ ಸಂಶೋಧನೆಗಳ ಬಗ್ಗೆ ಹೆಚ್ಚಿನ ಒತ್ತು ನೀಡಿ ಸ್ಥಳೀಯ ಸಮಸ್ಯೆಗಳಿಗೆ ಪರಿಹಾರ ಒದಗಿಸಬೇಕು. ವಿಜ್ಞಾನ ಸಪ್ತಾಹವು ಸಂಶೋಧನೆಯ ಮೂಲಭೂತ ಅನ್ವಯಿಕ ಆಯಾಮಗಳೆರಡನ್ನೂ ಪರಿಚಯಿಸುವ ಜತೆಗೆ ಪರಿಣಾಮಕಾರಿ ಸಂವಹನ ಪ್ರಾವೀಣ್ಯತೆ ಸಾಧಿಸಲು ನೆರವಾಗುತ್ತದೆ ಕೃಷಿಯು ವೈಜ್ಞಾನಿಕ ಜ್ಞಾನವನ್ನೂ ಸಂಯೋಜಿಸಿ ವರ್ಗಾಯಿಸಲು ಸಹಕಾರಿಯಾಗಲಿದೆ ಎಂದು ಪ್ರತಿಪಾದಿಸಿದರು.

## ಆಹಾರದಲ್ಲಿ ಕೆಮಿಕಲ್, ಕಲರ್ ಬಳಸಿದರೆ ಕ್ರಮ

• ಉದಯವಾಹಿನಿ, ಬೆಂಗಳೂರು

ರಾಜಧಾನಿಯ ಹೋಟೆಲ್, ಮಾಲ್‌ಗಳಲ್ಲಿ ನೀಡಲಾಗುವ ಆಹಾರದಲ್ಲಿ ಕೃತಕ ಕಲರ್, ಕೆಮಿಕಲ್ ಬಳಕೆ ಮಾಡದಂತೆ ಆಹಾರ ಸುರಕ್ಷತೆ ಮತ್ತು ಗುಣಮಟ್ಟ, ಆರೋಗ್ಯ ಸಚಿವರು ಎಚ್ಚರಿಕೆ ನೀಡಿದ್ದಾರೆ.ಮಾಲ್‌ಗಳು ಹಾಗೂ ಹೋಟೆಲ್ ಮಾಲೀಕರ ಜೊತೆಗೆ ಸಭೆ ನಡೆಸಿ ಆರೋಗ್ಯ ಸಚಿವ ದಿನೇಶ್ ಗುಂಡೂ ರಾವ್ ಈ ಕುರಿತು ಸೂಚನೆ ನೀಡಿದ್ದಾರೆ. ಇತ್ತೀಚಿನ ದಿನಗಳಲ್ಲಿ ಪ್ರತಿ ಆಹಾರದಲ್ಲೂ ಕಲರ್ ಬಳಕೆ, ರಾಸಾಯನಿಕ ಬಳಕೆ ಮಾಡ ಲಾಗುತ್ತಿದೆ. ಆಹಾರ ಸುರಕ್ಷತೆ ಮತ್ತು ಗುಣಮಟ್ಟ ತನಿಖೆ ಮಾಡಿದಾಗ ಮಾಲ್‌ಗಳಲ್ಲಿನ ಫುಡ್ ಕಳಪೆ ಎಂದು ಪತ್ತೆಯಾಗಿದೆ. ಇದು ಆರೋಗ್ಯ ಸಮಸ್ಯೆಗಳಿಗೆ ಕಾರಣವಾಗುತ್ತಿದೆ. ಹೀಗಾಗಿ ಎಲ್ಲರೂ ಆಹಾರದಲ್ಲಿ ಶುಚಿತ್ವ ಕಾಪಾಡುವಂತೆ, ಕಲರ್ ಮುಕ್ತ ಆಹಾರ ನೀಡುವಂತೆ ಸಚಿವರು ನಿರ್ದೇಶನ ನೀಡಿದ್ದಾರೆ.

ಇದರ ಜೊತೆಗೆ ತರಕಾರಿ ಮಾರಾಟಗಾರರಿಗೂ ಲೈಸನ್ಸ್ ಪಡೆಯುವುದು ಕಡ್ಡಾಯವಾಗಲಿದೆ. ಎಲ್ಲಾ ತರಕಾರಿ ವ್ಯಾಪಾರಿಗಳು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯಿಂದ ಲೈಸೆನ್ಸ್ ಪಡೆಯಬೇಕು. ತರಕಾರಿಗಳ ಸ್ಯಾಂಪಲ್‌ಗಳನ್ನು ಅಗತ್ಯ ಬಿದ್ದರೆ ಪರೀಕ್ಷೆ ನಡೆಸಬೇಕು. ತರಕಾರಿ- ಹಣ್ಣು ಮಾರುವಲ್ಲಿ ಶುಚಿತ್ವ ಕಾಪಾಡಿಕೊಳ್ಳಬೇಕು. ಕೆಲವು ಕಡೆಗಳಲ್ಲಿ ಸಾವಯವ ತರಕಾರಿ ಮಾರುತ್ತೇವೆ ಎಂದು ಹೆಚ್ಚಿನ ದರದಲ್ಲಿ ಕಳಪೆ ತರಕಾರಿ ಹಣ್ಣುಗಳನ್ನು ಮಾರುತ್ತಿರುವುದು ಕಂಡುಬರುತ್ತಿದೆ. ಇದರ ವಿರುದ್ಧವೂ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ಹೇಳಿದ್ದಾರೆ.

## ಖಾಸಗಿ ಶಾಲೆಗಳ ಬಂದ್ ಕರೆ: ಮಹತ್ವದ ಸಭೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದ ಅನುದಾನರಹಿತ ಖಾಸಗಿ ಶಾಲೆಗಳ ಸಂಘ (ರುಪ್ಸಾ) ಆಗಸ್ಟ್ 21ರಿಂದ ರಾಜ್ಯಾದ್ಯಂತ ಶಾಲೆಗಳನ್ನು ಬಂದ್ ಮಾಡುವುದಾಗಿ ಹೇಳಿದೆ. ವಿವಿಧ ಬೇಡಿಕೆಗಳನ್ನು ಈಡೇರಿಸಲು ಸರ್ಕಾರಕ್ಕೆ 15 ದಿನಗಳ ಗಡುವು ನೀಡಿದೆ. ಆದ್ದರಿಂದ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವ ಮಧು ಬಂಗಾರಪ್ಪ ಮಹತ್ವದ ಸಭೆಯನ್ನು ಕರೆದಿದ್ದಾರೆ.ಶಿವಮೊಗ್ಗ ಜಿಲ್ಲಾ ಉಸ್ತುವಾರಿ ಸಚಿವ ಮಧು ಬಂಗಾರಪ್ಪ ಬುಧವಾರ ಜಿಲ್ಲಾ ಪಂಚಾಯಿತಿ ಕಟ್ಟಡದಲ್ಲಿ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಘಟಕವನ್ನು ಉದ್ಘಾಟಿಸಿದರು. ಬಳಿಕ ಮಾಧ್ಯಮಗಳ ಜೊತೆ ಮಾತನಾಡಿದರು.



ಉದಯವಾಹಿನಿ ಚಿತ್ರ

> ರಾಜ್ಯದ ಖಾಸಗಿ ಶಾಲೆಗಳ ಬೇಕು-ಬೇಡಗಳನ್ನು ಸರ್ಕಾರದ ವತಿಯಿಂದ ಚರ್ಚಿಸಲು ನಾಳೆ ಬೆಂಗಳೂರಿನಲ್ಲಿ ಸಭೆ ಆಯೋಜಿಸಲಾಗಿದೆ ಎಂದು ಹೇಳಿದರು. ಈಗಾಗಲೇ ಅವರು ನೀಡಿರುವ ಮನವಿಯನ್ನು ಗಮನಿಸಲಾಗಿದ್ದು, ಅವರ ಬೇಡಿಕೆಯನ್ನು ಮಾನ್ಯ ಮುಖ್ಯಮಂತ್ರಿಗಳು ಸೇರಿದಂತೆ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿ, ನಿರ್ಣಯ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು. -ಸಚಿವ ಮಧು ಬಂಗಾರಪ್ಪ

ಅನುದಾನರಹಿತ ಖಾಸಗಿ ಶಾಲೆಗಳ ಸಂಘ ಆಗಸ್ಟ್ 15ರಂದು ಕರಾಳ ದಿನಾಚರಣೆಗೆ ಕರೆ ನೀಡಿರುವ ಕುರಿತು ಪ್ರತಿಕ್ರಿಯಿಸಿದ ಅವರು, ಅವರು ಆಚರಣೆ ಮಾಡಲಿ, ಆ ಹಕ್ಕು ಅವರಿಗಿದೆ. ಅವರ ಎಲ್ಲಾ ಮನವಿಗೆ ಸ್ಪಂದಿಸಿದ್ದೇವೆ, ಸಮಸ್ಯೆಗೆ ಪರಿಹರಿಸಿದ್ದೇವೆ ಎಂದರು. ರುಪ್ಸಾ ಅನುದಾನ ರಹಿತ ಖಾಸಗಿ ಶಾಲೆಗಳ ನವೀಕರಣಕ್ಕೆ ವಿಧಿಸಿರುವ ಷರತ್ತುಗಳ ಗೊಂದಲ ಸರಿಪಡಿಸಬೇಕು ಎಂಬುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದೆ. ಅಲ್ಲದೇ ಇದಕ್ಕಾಗಿ 15 ದಿನಗಳ ಗಡುವು ನೀಡಿದೆ. ಸರ್ಕಾರ ಸ್ಪಂದಿಸದಿದ್ದರೆ ಆಗಸ್ಟ್ 21ರಿಂದ ರಾಜ್ಯಾದ್ಯಂತ ಖಾಸಗಿ ಶಾಲೆಗಳನ್ನು ಬಂದ್ ಮಾಡುತ್ತೇವೆ ಎಂದು ಎಚ್ಚರಿಸಿದೆ. ಈ ಕುರಿತು ರುಪ್ಸಾದ ರಾಜ್ಯಾಧ್ಯಕ್ಷ ಡಾ. ಹಾಲನೂರು ಲೇಪಾಕ್ಷಿ ಮಾತನಾಡಿದ್ದು, ಶಾಲಾ ಶಿಕ್ಷಣ ಇಲಾಖೆ ಖಾಸಗಿ ಶಾಲೆಗಳ ಅಭಿವೃದ್ಧಿಯನ್ನು ಕಡೆಗಣಿಸುತ್ತಿದೆ. ಖಾಸಗಿ ಶಾಲೆಗಳ ನವೀಕರಣಕ್ಕೆ ಇಲಾಖೆ ನಿಗದಿ ಮಾಡಿರುವ 64 ಅಂಶಗಳು ಅವೈಜ್ಞಾನಿಕವಾಗಿವೆ ಎಂದು ಆರೋಪಿಸಿದರು. ಬಿಬಿಎಂಪಿ ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಗಳ ಮಹಾನಗರ ಪಾಲಿಕೆ, ನಗರಸಭೆಗಳು ಸೇವಾ ತೆರಿಗೆ ಹಾಗೂ ಇತರೆ ತೆರಿಗೆಗಳನ್ನು ಖಾಸಗಿ ಶಾಲೆಗಳಿಂದ ಸಂಗ್ರಹ ಮಾಡುತ್ತಿವೆ. ಈ ಬಗ್ಗೆ ಇಲಾಖೆಯ ಅಧಿಕಾರಿಗಳು, ಸಚಿವರ ಗಮನಕ್ಕೆ ತಂದರೂ ಸಹ ಯಾವುದೇ ಉಪಯೋಗವಾಗಿಲ್ಲ ಎಂದು ದೂರಿದರು.

## ಪಾದಯಾತ್ರೆಗೆ ಸೆಡ್ಡು ಹೊಡೆಯಲು ಕೈ ಬಿಗ್ ಪ್ಲ್ಯಾನ್

• ಉದಯವಾಹಿನಿ, ಬೆಂಗಳೂರು

ಆಗಸ್ಟ್ 9 ಕ್ಕೆ ಮೈಸೂರಿನಲ್ಲಿ ಕಾಂಗ್ರೆಸ್ ಶಕ್ತಿ ಪ್ರದರ್ಶನಕ್ಕೆ 2 ಲಕ್ಷ ಜನ ಸೇರಿಸುವ ಗುರಿ ಹೊಂದಲಾಗಿದೆ ಎನ್ನಲಾಗುತ್ತಿದೆ. ಬಿಜೆಪಿ ಮೈಸೂರು ಪಾದಯಾತ್ರೆ ಮೈಸೂರು ತಲುಪುವ ದಿನವೇ ಮೈಸೂರಿನಲ್ಲಿ ಕಾಂಗ್ರೆಸ್ ಶಕ್ತಿ ಪ್ರದರ್ಶನ ನಡೆಯಲಿದೆ.ಸಿಎಂ ತವರು ಮೈಸೂರಿನಲ್ಲಿ ಭಾರಿ ಶಕ್ತಿ ಪ್ರದರ್ಶನಕ್ಕೆ ಕಾಂಗ್ರೆಸ್ ಸಿದ್ಧತೆ ನಡೆಸಿದೆ ಎನ್ನಲಾಗಿದೆ. 2 ಲಕ್ಷಕ್ಕೂ ಹೆಚ್ಚಿನ ಜನ ಸೇರಿಸುವಂತೆ ಸ್ಥಳೀಯ ನಾಯಕರು ಹಾಗೂ ಶಾಸಕರಿಗೆ ಸಂದೇಶ ರವಾನಿಸಲಾಗಿದೆ ಎನ್ನಲಾಗುತ್ತಿದೆ.6 ಜಿಲ್ಲೆಗಳಲ್ಲಿ ಪ್ರತಿ ಹಳ್ಳಿಗೆ ತಲಾ 2 ಬಸ್ಸಿನಲ್ಲಿ ಜನ ಕರೆತರಲು ಸಹ ಸೂಚನೆ ನೀಡಲಾಗಿದೆ. ಮೈಸೂರು, ಚಾಮರಾಜನಗರ, ಕೊಡಗು, ಹಾಸನ, ಮಂಡ್ಯ, ರಾಮನಗರ ಜಿಲ್ಲೆಯ ಪ್ರತಿ ಹಳ್ಳಿಗೆ 2 ಬಸ್ಸು ಕಳುಹಿಸಲು ಕಾಂಗ್ರೆಸ್ ನಿರ್ಧರಿಸಿದೆ ಎಂದು ತಿಳಿದುಬಂದಿದೆ. ಭಾರಿ ಸಂಖ್ಯೆಯಲ್ಲಿ ಜನರನ್ನ ಸೇರಿಸಿ ಸಿಎಂ ಪರ ಶಕ್ತಿ ಪ್ರದರ್ಶನಕ್ಕೆ ಸಿದ್ಧತೆ ನಡೆಯುತ್ತಿದೆ. ಕನಿಷ್ಟ 2 ಲಕ್ಷ ಜನ ಸೇರಿಸಿ ಸಿದ್ದರಾಮಯ್ಯ ಪರ ಶಕ್ತಿ ಪ್ರದರ್ಶನ ಮಾಡಲು 6 ಜಿಲ್ಲೆಯ ನಾಯಕರಿಗೆ ವಿಶೇಷ ಟಾಸ್ಕ್ ನೀಡಲಾಗಿದೆ.

# ಭಂಡತನ ಬಿಟ್ಟು ಸಿಬಿಐಗೆ ವಹಿಸಿ, ರಾಜೀನಾಮೆ ನೀಡಲಿ

### ಸಿದ್ದರಾಮಯ್ಯಗೆ ಬಿ.ವೈ. ವಿಜಯೇಂದ್ರ ಆಗ್ರಹ, ಹೈಕಮಾಂಡ್ ಆಶ್ರಯ ಪಡೆಯುವ ಪ್ರಯತ್ನ


• ಉದಯವಾಹಿನಿ, ಬೆಂಗಳೂರು

'ಸಿದ್ದರಾಮಯ್ಯ ಬಲಿಷ್ಠ ಸಿಎಂ ಎಂದು ಹೇಳಲಾಗುತ್ತಿತ್ತು. ಆದರೆ ಎರಡು ಹಗರಣಗಳಲ್ಲಿ ಭಾಗಿಯಾದ ನಂತರ ಅವರ ಬಗ್ಗೆ ಇದ್ದ ಆಡಳಿತ ಪಕ್ಷದ ಶಾಸಕರ ವಿಶ್ವಾಸ ಕುಂದಿದೆ. ಎಲ್ಲೋ ಒಂದು ಕಡೆ ಸಿದ್ದರಾಮಯ್ಯನವರ ನಿದ್ದೆಗೆಡಿಸಿದೆ.ಹೀಗಾಗಿಯೇ ಅವರು ಹೈಕಮಾಂಡ್ ಆಶ್ರಯ ಪಡೆಯುವ ಪ್ರಯತ್ನ ಮಾಡುತ್ತಿದ್ದಾರೆ.

ನಮ್ಮ ಮೇಲೆ ಎಷ್ಟೇ ಕೇಸ್ ಹಾಕಿದರೂ ಸರಿಯೇ, ಹೋರಾಟದಿಂದ ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜ ಯೇಂದ್ರ, ರಾಜ್ಯ ಸರ್ಕಾರಕ್ಕೆ ನೀಡಿರುವ ಸ್ಪಷ್ಟ ಸಂದೇಶ. ಮುಡಾ ಹಗರಣ, ವಾಲ್ಮೀಕಿ ನಿಗಮದ ಅಕ್ರಮ ಸೇರಿ ವಿವಿಧ ವಿಚಾರಗಳನ್ನು ಮುಂದಿಟ್ಟುಕೊಂಡು ದೋಸ್ತಿ ಪಕ್ಷಗಳಾದ ಬಿಜೆಪಿ, ಜೆಡಿಎಸ್ ಬೆಂಗಳೂರಿನಿಂದ ಮೈಸೂರಿಗೆ ಹಮ್ಮಿಕೊಂಡಿರುವ ಪಾದಯಾತ್ರೆ ನಡುವೆಯೇ ವಿಜಯೇಂದ್ರ ವಿಜಯವಾಣಿಗೆ ಸಂದರ್ಶನ ನೀಡಿದ್ದಾರೆ. ನಾವು ಬಹಿರಂಗ ಸವಾಲು ಸ್ವೀಕರಿಸಿದ್ದೇವೆ, ನಮ್ಮ ಮೇಲೆ 20-30 ಕೇಸ್ ಹಾಕುತ್ತೀರೋ ಹಾಕಿ. ನಿಮ್ಮ ಈ ಬೆದರಿಕೆ ತಂತ್ರದಿಂದ ವಿರೋಧ ಪಕ್ಷಗಳ ಧ್ವನಿ ಅಡಗಿಸಲು ಸಾಧ್ಯವಿಲ್ಲ. ನಮ್ಮನ್ನು ತಡೆಯುವ ಶಕ್ತಿ ರಾಜ್ಯ ಸರ್ಕಾರಕ್ಕಿಲ್ಲ ಎಂದು ಗುಡುಗಿದರು. ಖುಷಿಪಡಿಸುವ ಧಾವಂತ: ಸಿಎಂ ಕುರ್ಚಿ ಅಲ್ಲಾಡುತ್ತಿದೆ. ಈ ಸಂದರ್ಭದಲ್ಲಿ ರಾಹುಲ್ ಗಾಂಧಿ ಖುಷಿಪಡಿಸುವುದು ರಾಜ್ಯದ ಸಿಎಂ ಆದ್ಯತೆ. ವಯನಾಡಲ್ಲಿ 100 ಮನೆ ಕಟ್ಟಿಸಿಕೊಡುತ್ತೇವೆಂದು ಸಿಎಂ ಹೇಳುತ್ತಾರೆ, ಇಲ್ಲಿ ಸಂತ್ರಸ್ತರಿಗೆ ಆ ದಾಖಲೆ ಕೊಡಿ ಈ ದಾಖಲೆ ತನ್ನಿ ಎಂದು ತೊಂದರೆ ಕೊಡುತ್ತಿದ್ದಾರೆ. ಸರ್ಕಾರ ಬದುಕಿಲ್ಲವೇ ಎಂದು ಚಾಟಿ ಬೀಸಿದರು. ಭಂಡತನ: ಅಧಿವೇಶನದಲ್ಲಿ ಸಿಎಂ ಮುಡಾ ಹಗರಣದ ಬಗ್ಗೆ ಉತ್ತರಿಸಿದ್ದರೆ ಪಾದಯಾತ್ರೆ ನಡೆಯುತ್ತಿರಲಿಲ್ಲ.

ಹೋರಾಟದಿಂದ ಹಿಂದೆ ಸರಿಯಲ್ಲ

ಆದರೆ ಸಿಎಂ ಪಲಾಯನ ಮಾಡಿದ್ದರಿಂದ ಹಗರಣದಲ್ಲಿ ಅವರು ಸಂಪೂರ್ಣವಾಗಿ ಭಾಗಿಯಾಗಿದ್ದಾರೆ ಎಂಬುದು ಗೊತ್ತಾಗಿದೆ. ನಾಲ್ಕರಿಂದ ಐದು ಸಾವಿರ ಕೋಟಿ ರೂ. ಗೂ ಹೆಚ್ಚು ಮೌಲ್ಯದ ನಿವೇಶನಗಳನ್ನು ಲೂಟಿ ಮಾಡಿದ್ದಾರೆ. ಏನೇ ಭಂಡತನ ಮೆರೆದರೂ ಎಲ್ಲದಕ್ಕೂ ಉತ್ತರ ಕೊಡಲೇಬೇಕಾಗುತ್ತದೆ ಎಂದು ವಿಜಯೇಂದ್ರ ಹೇಳಿದರು.ಮೈಸೂರು ಚಲೋ ಪಾದಯಾತ್ರೆಯಲ್ಲಿ ಭಾಗವಹಿಸಿರುವ ಜನಸಮೂಹ ನೋಡಿದರೆ ನಮ್ಮ ಹೋರಾಟಕ್ಕೆ ಸ್ಪಂದನೆ ಹೇಗಿದೆ ಎಂದು ಅರ್ಥವಾಗುತ್ತದೆ. ಈ ಸರ್ಕಾರ ಭ್ರಷ್ಟಾಚಾರದಲ್ಲಿ ಮುಳುಗಿ ಹೋಗಿದೆ, ನಮಗೆ ಅನ್ಯಾಯ ಮಾಡಿದ್ದಾರೆ ಎಂದು ಜನಸಾಮಾನ್ಯರಿಗೆ ಅನಿಸಿದೆ. ಅದರ ಪರಿಣಾಮವೇ ನಮ್ಮ ಪಾದಯಾತ್ರೆ ಯಶಸ್ಸಿನ ಗುಟ್ಟು ಎನ್ನುತ್ತಾರೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ. ಕಾಂಗ್ರೆಸ್ ಹೈಕಮಾಂಡ್ ನಾಯಕರು ಬೆಂಗಳೂರಿಗೆ ಬಂದು ಸಿಎಂ ಪರ ಗಟ್ಟಿಯಾಗಿ ನಿಲ್ಲುವಂತೆ ಆಡಳಿತ ಪಕ್ಷದ ಶಾಸಕರಿಗೇನೇ ಬುದ್ಧಿವಾದ ಹೇಳಿದ್ದಾರೆ. ಅಂದ ಮೇಲೆ ಸಿಎಂ ಪರಿಸ್ಥಿತಿ



### ಬೆದರಿಕೆ ತಂತ್ರದಿಂದ ವಿರೋಧ ಪಕ್ಷಗಳ ಧ್ವನಿ

ನಮ್ಮ ಕರ್ನಾಟಕ ರಾಜಕಾರಣ ಆ ಮಟ್ಟಕ್ಕೆ ಹೋಗಿರಲಿಲ್ಲ. ಈಗ ಬಹಿರಂಗವಾಗಿಯೇ ವಿರೋಧ ಪಕ್ಷಗಳನ್ನು ಬೆದರಿಸುವ ಕುತಂತ್ರ ನಡೆಯುತ್ತಿದೆ. ನಾವು ಕೂಡ ಸವಾಲು ಸ್ವೀಕರಿಸಿದ್ದೇವೆ. 20-30 ಕೇಸ್ ಹಾಕುತ್ತೀರೋ ಹಾಕಿ. ನಿಮ್ಮ ಈ ಬೆದರಿಕೆ ತಂತ್ರದಿಂದ ವಿರೋಧ ಪಕ್ಷಗಳ ಧ್ವನಿ ಅಡಗಿಸಲು ಸಾಧ್ಯವಿಲ್ಲ. ನಮ್ಮನ್ನು ತಡೆಯುವ ಶಕ್ತಿ ರಾಜ್ಯ ಸರ್ಕಾರಕ್ಕಿಲ್ಲ. ಅನ್ಯಾಯದ ವಿರುದ್ಧ ಹೋರಾಟ ಮಾಡುತ್ತೇವೆ, ಧ್ವನಿ ಎತ್ತುತ್ತೇವೆ.

ಎಲ್ಲಿಗೆ ಬಂದು ನಿಂತಿದೆ ಎಂದು ಇದರ ಮೇಲೆಯೇ ಗೊತ್ತಾಗುತ್ತದೆ ಎಂದು ವಿಜಯವಾಣಿ ಸಂದರ್ಶನದಲ್ಲಿ ಪಾದಯಾತ್ರೆ ಸಾಗುತ್ತಿರುವ ಹಾದಿ ಬಗ್ಗೆ ಬೆಳಕು ಚೆಲ್ಲಿದ್ದಾರೆ. ಸಿದ್ದರಾಮಯ್ಯ ಅವರ ಹಾವಭಾವ ನಿನ್ನೆ-ಮೊನ್ನೆಯದಲ್ಲ, ಯಾವಾಗ ಮುಡಾ ಪ್ರಕರಣವನ್ನು ಬಿಜೆಪಿ, ಜೆಡಿಎಸ್‌ನವರು ತೆಗೆದುಕೊಳ್ಳುತ್ತಾರೆ ಎಂದು ಗೊತ್ತಾಯಿತೋ ಆವಾಗ ಅವರು ಸ್ವಲ್ಪ ಗಾಬರಿಯಾದರು. ಸಿಎಂ ಬಗ್ಗೆ ಶಾಸಕರಿಗೆ ವಿಶ್ವಾಸ ಕಡಿಮೆಯಾಗಿದೆ. ಇದು ಸಿದ್ದರಾಮಯ್ಯ ನಿದ್ದೆಗೆಡಿಸಿದೆ. ಹಾಗಾಗಿ ಹೈಕಮಾಂಡ್ ಆಶ್ರಯ ಪಡೆಯುವಂತಹ ಪ್ರಯತ್ನ ಮಾಡುತ್ತಿದ್ದಾರೆ. ಪಾದಯಾತ್ರೆ ಮಾಡಬೇಕೆಂದು ಹೇಳಿದಾಗ ಮಳೆ ಇದೆ, ಬಿಸಿಲಿದೆ ಎಂದು

> ರಾಜಕೀಯ ಜನ್ಮಕೊಟ್ಟ ಮೈಸೂರಿನಲ್ಲಿ 1.05 ಲಕ್ಷ ಜನ ನಿವೇಶನಕ್ಕಾಗಿ ಅಲೆಯುತ್ತಿರುವಾಗ, ತಮ್ಮ ಧರ್ಮ ಪತ್ನಿಗೆ 14 ನಿವೇಶನ ಪಡೆಯಬೇಕೆನಿಸುತ್ತದೆ. ನಿರ್ಗತಿಕರು, ಬಡವರಿಗೆ ನಿವೇಶನ ಕೊಡಬೇಕೆಂದು ಅನಿಸಲಿಲ್ಲವೇ ಇದು ಈ ನಾಡಿನ ದುರಂತ. 14 ನಿವೇಶನ ಕೊಡಬೇಕು, 62 ಕೋಟಿ ರೂ. ಬರಬೇಕಾಗಿತ್ತು, ನನಗೆ ಅನ್ಯಾಯ ಆಗಿದೆ ಎಂದು ಮುಖ್ಯಮಂತ್ರಿಯಾಗಿ ಹೇಳುತ್ತೀರಿ ಅಂತಾದರೆ ನಿಜವಾಗಿ ಅನುಭವಿ ಸಿಎಂಗೆ ಇದು ಶೋಭೆ ತರುವುದಿಲ್ಲ. ಭಂಡತನ ಬದಿಗಿಟ್ಟು ಸಿಬಿಐ ತನಿಖೆಗೆ ಕೊಡಿ.

ಕಾದು ಕುಳಿತರೆ ಜನರಿಗೆ ಅನ್ಯಾಯ ಮಾಡಿ ದಂತಾಗುತ್ತದೆ.

ಈ ಹೋರಾಟ ಸ್ವಾರ್ಥ ಏನಿಲ್ಲ. ಬಡವರು, ರೈತರು ಸಂಕಷ್ಟದಲ್ಲಿದ್ದಾಗ ರಾಜ್ಯ ಸರ್ಕಾರದಿಂದ ಸಿಡಿದೇಳುವುದು ಪ್ರತಿಪಕ್ಷದ ಕರ್ತವ್ಯ. ಈ ಕೆಲಸ ನಿರ್ವಹಿಸುತ್ತಿದ್ದೇವೆ.

ರಾಹುಲ್ ಗಾಂಧಿ ಪ್ರತಿನಿಧಿಸಿದ್ದ ವಯನಾಡಿನಲ್ಲಿ 100 ಮನೆ ಕಟ್ಟಿಸಿಕೊಡುತ್ತೇವೆಂದು ಸಿಎಂ ಹೇಳುತ್ತಾರೆ, ಇದನ್ನು ನಾನು ತಪುಪ ಎನ್ನಲ್ಲ. ಆದರೆ ಉತ್ತರ ಕನ್ನಡದಲ್ಲಿ ಮನೆ ಕಳೆದುಕೊಂಡ ಸಂತ್ರಸ್ತರಿಗೆ ಆ ದಾಖಲೆ ಕೊಡಿ, ಈ ದಾಖಲೆ ತನ್ನಿ ಎಂದು ತೊಂದರೆ ಕೊಡುತ್ತಿದ್ದಾರೆ. ಸರ್ಕಾರ ಸತ್ತು ಹೋಗಿದೆಯೇ? ಎಲ್ಲೋ ಒಂದು ಕಡೆ ಆ ಒಂದು ಗಾಂಧಿ ಕುಟುಂಬಕ್ಕೆ ಖುಷಿಪಡಿಸಲು ವಿಚಾರದಲ್ಲಿ ರಾಜ್ಯದ ಜನರಿಗೆ ತೊಂದರೆ ಆದರೂ ಪರವಾಗಿಲ್ಲ, ರಾಹುಲ್ ಗಾಂಧಿ ಖುಷಿಪಡಿಸುವುದು ರಾಜ್ಯದ ಮುಖ್ಯಮಂತ್ರಿಯ ಆದ್ಯತೆ. ಇದು ರಾಜ್ಯದ ದುರಂತ.

ಅಂತರಾಳದಿಂದ.. EDITORIAL

# ಬಾಂಗ್ಲಾದಲ್ಲಿ ರಾಜಕೀಯ ಬಿಕ್ಕಟ್ಟು ಭಾರತಕ್ಕೆ ಭಾರಿ ಕಳವಳಕಾರಿ

ಬಾಂಗ್ಲಾ ಸೇನೆಯು ಅಧಿಕಾರದ ಮೋಹಕ್ಕೆ ಬೀಳದೆ, ದೇಶದಲ್ಲಿ ನಿಷ್ಪಕ್ಷಪಾತ ಮತ್ತು ನ್ಯಾಯಯುತ ಚುನಾವಣೆ ನಡೆದು ಪ್ರಜಾಪ್ರಭುತ್ವ ಇನ್ನಷ್ಟು ಗಟ್ಟಿಗೊಳ್ಳುವಂತೆ ನೋಡಿಕೊಳ್ಳಬೇಕು ನಮ್ಮ ನೆರೆಯ ಬಾಂಗ್ಲಾದೇಶದಲ್ಲಿ ರಾಜಕೀಯ ಅಸ್ಥಿರತೆ ಮತ್ತು ಬಿಕ್ಕಟ್ಟು ಉಂಟಾಗಿರುವುದು ಕಳವಳಕಾರಿ ವಿದ್ಯಮಾನ. ಅವಾಮಿ ಲೀಗ್ ಮುಖ್ಯಸ್ಥೆ ಶೇಖ್ ಹಸೀನಾ ನೇತೃತ್ವದ ಸರ್ಕಾರ ಪತನಗೊಂಡಿದೆ ಮತ್ತು ಹಸೀನಾ ಅವರು ಸದ್ಯ ಭಾರತದಲ್ಲಿ ಇದ್ದಾರೆ. 1971ರ ಬಾಂಗ್ಲಾ ವಿಮೋಚನೆ ಸಂಘರ್ಷದಲ್ಲಿ ಭಾಗಿಯಾದ ಸೈನಿಕರ ಸಂಬಂಧಿಕರಿಗೆ ಸರ್ಕಾರಿ ಉದ್ಯೋಗಗಳಲ್ಲಿ ಶೇ.30ರಷ್ಟು ಮೀಸಲಾತಿ ನೀಡುವುದರ ವಿರುದ್ಧ ನಡೆದ ಪ್ರತಿಭಟನೆಯು ದೇಶದಾದ್ಯಂತ ಪಸರಿಸಿ ಚಳವಳಿಯ ರೂಪ ಪಡೆದುಕೊಂಡಿತು.

ವಿದ್ಯಾರ್ಥಿಗಳು ಮತ್ತು ಯುವಸಮೂಹದ ಈ ಪ್ರತಿಭಟನೆಗೆ ವಿವಿಧ ರಾಜಕೀಯ ಪಕ್ಷಗಳು, ಗಣ್ಯರು ಬೆಂಬಲ ನೀಡಿದರು. ಪರಿಣಾಮವಾಗಿ ಮೀಸಲಾತಿ ವಿರುದ್ಧ ಆರಂಭಗೊಂಡ ಪ್ರತಿಭಟನೆಯು ಹಸೀನಾ ನೇತೃತ್ವದ ಸರ್ಕಾರವನ್ನು ಪತನಗೊಳಿಸುವ ಹೋರಾಟವಾಯಿತು. ದೇಶದಾದ್ಯಂತ ವಿಧಿಸಲಾಗಿದ್ದ ಕರ್ಫ್ಯೂವನ್ನು ಲೆಕ್ಕಿಸದೆ ಪ್ರತಿಭಟನಕಾರರು ಢಾಕಾದತ್ತ ನುಗ್ಗಿದರು. ಪ್ರತಿಭಟನೆಯ ಸಂದರ್ಭದಲ್ಲಿ 440ಕ್ಕೂ ಹೆಚ್ಚು ಮಂದಿ ಮೃತಪಟ್ಟಿದ್ದಾರೆ. ಭಾನುವಾರ ಒಂದೇ ದಿನ ಸುಮಾರು ನೂರು ಮಂದಿ ಬಲಿಯಾದರು. ಪ್ರತಿಭಟನಕಾರರು ಪ್ರಧಾನಿಯ ಅರಮನೆಗೆ ನುಗ್ಗುವುದಕ್ಕೆ ಸ್ವಲ್ಪ ಹೊತ್ತಿಗೆ ಮೊದಲು ಸೇನೆಯ ಸಲಹೆಯಂತೆ ಹಸೀನಾ ಅವರು ಸೇನೆಯ ವಿಮಾನದಲ್ಲಿ ಭಾರತಕ್ಕೆ ಬಂದಿದ್ದಾರೆ. ಇದರೊಂದಿಗೆ ಅವರ ಸತತ 15 ವರ್ಷಗಳ ಅಧಿಪತ್ಯ ಕೊನೆಗೊಂಡಿದೆ. 1975ರಲ್ಲಿ ತಮ್ಮ ತಂದೆ ಮುಜೀಬುರ್ ರೆಹಮಾನ್ ಮತ್ತು ಕುಟುಂಬದ ಇತರರ ಹತ್ಯೆಯಾದ ಬಳಿಕ ದೇಶಭ್ರಷ್ಟರಾಗಿ ಭಾರತದಲ್ಲಿ ಆಶ್ರಯ ಪಡೆದಿದ್ದ ಹಸೀನಾ ಅವರು, 1981ರಲ್ಲಿ ಸ್ವದೇಶಕ್ಕೆ ಮರಳಿದ್ದರು. ಇತರ ಪಕ್ಷಗಳ ಜೊತೆಗೆ ಸೇರಿ ಪ್ರಜಾಪ್ರಭುತ್ತ ಸ್ಥಾಪನೆಗೆ ಹೋರಾಡಿದ್ದರು. ಈ ಹೋರಾಟವು ಅವರಿಗೆ ದೇಶದಲ್ಲಿ ಅಪಾರ ಜನಪ್ರಿಯತೆ ಗಳಿಸಿಕೊಟ್ಟಿತ್ತು.1996ರಲ್ಲಿ ನಡೆದ ಚುನಾವಣೆಯಲ್ಲಿ ಗೆದ್ದು ದೇಶದ ಪ್ರಧಾನಿಯೂ ಆದರು. ಬಳಿಕ ಸೋತರು, ಆದರೆ, 2008ರ ಚುನಾವಣೆಯಲ್ಲಿ ಗೆದ್ದು ಮರಳಿ ಅಧಿಕಾರಕ್ಕೆ ಬಂದ ಅವರು ದೇಶದ ಮೇಲೆ ಬಿಗಿಹಿಡಿತ ಸಾಧಿಸಿದ್ದರು. ಪ್ರಜಾಪ್ರಭುತ್ವಕ್ಕಾಗಿ ಹೋರಾಡಿದ್ದ ಅವರ ಆಳ್ವಿಕೆಯು ನಿರಂಕುಶವಾಗಿತ್ತು ಎಂಬ ಆರೋಪಗಳು ಇವೆ. ತಮ್ಮ ವಿರುದ್ಧದ ಟೀಕೆಗಳನ್ನು ಅವರು ಸಹಿಸುತ್ತಿರಲಿಲ್ಲ. ಟೀಕಾಕಾರರು. ವಿರೋಧಿಗಳನ್ನು ದಮನ ಮಾಡುತ್ತಿದ್ದರು ಎಂದೂ ಹೇಳಲಾಗುತ್ತಿದೆ. ಆದರೆ ಈ ಎಲ್ಲಾ ಆರೋಪಗಳನ್ನು ಹಸೀನಾ ನಿರಾಕರಿಸಿದ್ದಾರೆ. ಆದರೆ, ಜನರು ಈಗ ಪ್ರದರ್ಶಿಸಿರುವ ಆಕ್ರೋಶವನ್ನು ಗಮನಿಸಿದರೆ ಈ ಆರೋಪಗಳಲ್ಲಿ ಹುರುಳಿಲ್ಲ ಎಂದು ಹೇಳಲಾಗದು. ಬಾಂಗ್ಲಾದೇಶದಲ್ಲಿ ಉಂಟಾಗಿರುವ ರಾಜಕೀಯ ಅಸ್ಥಿರತೆಯ ಹಿಂದೆ ಪಾಕಿಸ್ತಾನದ ಗೂಢಚರ್ಯೆ ಸಂಸ್ಥೆ ಐಎಸ್ಐ ಮತ್ತು ಚೀನಾದ ಪಿತೂರಿ ಇದೆ ಎಂಬ ಮಾತುಗಳು ಕೇಳಿಬರುತ್ತಿವೆ. ಇದು ನಿಜವೇ ಆಗಿದ್ದರೆ ಖಂಡನೀಯ, ಒಂದು ದೇಶದ ಆಂತರಿಕ ವ್ಯವಹಾರಗಳಲ್ಲಿ ಹಸ್ತಕ್ಷೇಪ ನಡೆಸಿ ದೇಶವನ್ನು ಅಸ್ಥಿರ ಗೊಳಿಸುವುದು ಅಕ್ಷಮ್ಯ. ನಾಲ್ಕು ಸಾವಿರಕ್ಕೂ ಹೆಚ್ಚು ಕಿಲೊಮೀಟರ್ ಉದ್ದದ ಗಡಿಯನ್ನು ಭಾರತದ ಜೊತೆಗೆ ಹಂಚಿಕೊಂಡಿರುವ ಬಾಂಗ್ಲಾದೇಶದಲ್ಲಿನ ಬಿಕ್ಕಟ್ಟನ್ನು ಭಾರತವು ಲಘುವಾಗಿ ತೆಗೆದು ಕೊಳ್ಳುವಂತಿಲ್ಲ. ಜೊತೆಗೆ ಈಗಿನ ಬಿಕ್ಕಟ್ಟಿನ ಹಿಂದೆ ಐಎಸ್ಐ ಮತ್ತು ಚೀನಾದ ಕೈವಾಡ ಇದೆ ಎಂದಾದರೆ, ಅದು ಭಾರತಕ್ಕೆ ಅಪಾಯದ ಕರೆಗಂಟೆ ಎಂದೇ ಅರ್ಥ. ಹಸೀನಾ ತಮ್ಮ ಆಳ್ವಿಕೆಯ ಅವಧಿಯಲ್ಲಿ ಬಾಂಗ್ಲಾವು ಭಾರತ ವಿರೋಧಿ ಚಟುವಟಿಕೆಗಳಿಗೆ ಬಳಕೆ ಆಗದಂತೆ ನೋಡಿಕೊಂಡಿದ್ದರು. ಇನ್ನು ಮುಂದೆ ಅಂತಹ ಭರವಸೆ ಇಲ್ಲ. ಬಾಂಗ್ಲಾದೇಶವು ದಕ್ಷಿಣ ಏಷ್ಯಾದಲ್ಲಿ ಭಾರತದ ಅತಿ ದೊಡ್ಡ ವ್ಯಾಪಾರ ಪಾಲುದಾರ. ರಾಜಕೀಯ ಅಸ್ಥಿರತೆಯು ದ್ವಿಪಕ್ಷೀಯ ವ್ಯಾಪಾರಕ್ಕೂ ಧಕ್ಕೆ ಉಂಟುಮಾಡಬಹುದು. ಬಾಂಗ್ಲಾದೇಶದ ಈಗಿನ ಬಿಕ್ಕಟ್ಟಿಗೆ ಒಂದು ರೀತಿಯಲ್ಲಿ ಹಸೀನಾ ಅವರೂ ಕಾರಣರಾಗಿದ್ದಾರೆ. ಪ್ರಜಾಪ್ರಭುತ್ವಕ್ಕಾಗಿ ಹೋರಾಡಿದ್ದ ಅವರು ಸರ್ವಾಧಿಕಾರಿಯಂತೆ ವರ್ತಿಸಬಾರದಿತ್ತು. ಸರ್ಕಾರಿ ಉದ್ಯೋಗಗಳೇ ಕಡಿಮೆ ಇರುವ ದೇಶದಲ್ಲಿ ಶೇ 30ರಷ್ಟು ಹುದ್ದೆಗಳನ್ನು ವಿಮೋಚನೆ ಹೋರಾಟದಲ್ಲಿ ಭಾಗಿಯಾಗಿದ್ದವರ ಬಂಧುಗಳಿಗೆ ಮೀಸಲಿರಿಸಿದರೆ ಪರಿಣಾಮ ಏನಾಗಬಹುದು ಎಂಬುದನ್ನು ಅವರು ಅಂದಾಜಿಸಬೇಕಿತ್ತು. ಪ್ರತಿಭಟನಕಾರರ ಬೇಡಿಕೆಗಳಿಗೆ ಸಹಾನುಭೂತಿ ತೋರದೆ. ಅವರನ್ನು ಭಯೋತ್ಪಾದಕರು ಎಂದು ಕರೆದು, ಉರಿಯುವ ಬೆಂಕಿಗೆ ತುಪ್ಪ ಸುರಿದರು. ಪ್ರತಿಭಟನಕಾರರ ಬೇಡಿಕೆ ಈಡೇರಿದೆ. ಸರ್ಕಾರ ಪತನಗೊಂಡಿದೆ. ಆದರೆ, ಹಿಂಸಾಚಾರದಿಂದ ಏನನ್ನು ಬೇಕಿದ್ದರೂ ಸಾಧಿಸಬಹುದು ಎಂದು ಅವರು ಭಾವಿಸಬಾರದು. ಪಾಕಿಸ್ತಾನ ಪರ ಒಲವು ಹೊಂದಿರುವ, ಮೂಲಭೂತವಾದಿಯಾಗಿರುವ ಹಲವು ಗುಂಪುಗಳು ಬಾಂಗ್ಲಾದೇಶದಲ್ಲಿ ಇವೆ.

# ನಾಗ ಮತ್ತು ಪಂಚಮಿ ಹಬ್ಬ



■ ಅಶ್ವಜೀತ ದಂಡಿನ

• ಉದಯವಾಹಿನಿ, ವಿಶೇಷ

ವಿಸ್ಮಯಗಳ ಜಗತ್ತಿನಲ್ಲಿ ಪ್ರಕೃತಿಯ ಅನನ್ಯ ಶಕ್ತಿಗೆ ಮನುಷ್ಯನ ಮಾನಸಿಕ ಕಲ್ಪನಾ ಶಕ್ತಿ ಮಿಲನಗೊಂಡು ಒಂದು ಬಗೆಯ ಅಗೋಚರ ದೈವೀಕರಣ ಕ್ರಿಯೆ ಉತ್ಪತ್ತಿಯಾಗದ ಹಿನ್ನೆಲೆಯಲ್ಲಿ ಆರಾಧನೆ ಮತ್ತು ಆಚರಣೆಗಳು ರೂಢಿಗೆ ಬಂದವು.

ಈ ನೇಲದ ಆದಿಮ ಬುಡಕಟ್ಟು ಜನಾಂಗಗಳು ನಿರ್ಧಿಷ್ಟವಾದ ಅರಣ್ಯ ಪ್ರದೇಶವು ಗಡಿಯಾಗಿಸಿಕೊಂಡು ಗುಂಪು ಗುಂಪುಗಳಾಗಿ ಬದುಕುತ್ತಿದವು. ಅನ್ಯ ಗುಂಪಿನ ಜನಾಂಗವು ತಮ್ಮ ಗಡಿಯ ವ್ಯಾಪ್ತಿ ಪ್ರದೇಶ ಪ್ರವೇಶಿಸಿದರೆ ಭೀಕರ ಕಾಳಗಗಳೇ ನಡೆಯುತ್ತಿದ್ದವು. ಒಂದೊಂದು ಆದಿಮ ಬುಡಕಟ್ಟು ಗುಂಪುಗಳಲ್ಲಿಯೂ ಒಬ್ಬೊಬ್ಬ ನಾಯಕನಿರುತ್ತಿದ. ಬಲಶಾಲಿ ಪರಾಕ್ರಮಿ ಶಕ್ತಿಶಾಲಿಯಾದವನನ್ನೆ ತಮ್ಮ ನಾಯಕನಾಗಿ ಆರಿಸುತ್ತಿದ್ದರು. ನಾಯಕನಾದವನು ಇಂತಹ ಕಾಳಗಗಳಲ್ಲಿ ಶೌರ್ಯದಿಂದ ಹೋರಾಡಿ ತಮ್ಮ ಗುಂಪಿನ ಜನರನ್ನು ರಕ್ಷಸುತ್ತಿದ. ಹಾಗಾಗಿ ಆಯಾ ಗುಂಪಿನ ಜನಾಂಗವು ತಮ್ಮ ನಾಯಕನನ್ನು ಅತ್ಯಂತ ಗೌರವದಿಂದ ಕಾಣುತ್ತಿದ್ದರು. ಕಾಳಗದಲ್ಲಿ ಗೆದ್ದಾಗ ಎಲ್ಲರು ಒಂದು ಕಡೆ ಸೇರಿ ಕಾಡಿನಲ್ಲಿ ವಿಜಯೋತ್ಸವ ಆಚರಿಸಿ ನಾಯಕನಿಗೆ ಗೌರವ ಸಲ್ಲಿಸುತ್ತಿದ್ದರು.

ಇಂತಹ ವಿಜಯೋತ್ಸವ ಮತ್ತು ಆರಾಧನಾ ಕ್ರಿಯೆಗಳೆ ಮುಂದೆ ಹಬ್ಬಗಳಾಗಿ ಮಾರ್ಪಟ್ಟವು. (ಇದಕ್ಕೆ ಆರ್ಯ ಜನಾಂಗವೇನು ಹೊರತಲ್ಲ. ಏಕೆಂದರೆ, ಲಭ್ಯವಿರುವ ವೈದಿಕರ ಪೌರಾಣಿಕ ಗ್ರಂಥಗಳಲ್ಲಿ ಉಲ್ಲೇಖಗಳಿರುವಂತೆ ಪ್ರತಿಯೊಂದು ಹಬ್ಬಗಳ ಹಿಂದೆ ಈ ನೆಲದ ದಾನವ, ದೈತ್ಯ, ಅಸುರ, ರಕ್ಷಸ ನಾಯಕರ ಸಂಹಾರದ ಕಥೆಗಳ ಉಲ್ಲೇಖಗಳಿವೆ.) ಇವುಗಳಲ್ಲಿ ನಾಗರ ಪಂಚಮಿಯು ಒಂದು.

**ನಾಗರ ಪಂಚಮಿ ನಾಡಿಗೆ ದೊಡ್ಡದ್ದು**

ನಾಗ ಎನ್ನುವುದು ಮೂಲತಃ ಪಾಲಿ ಭಾಷೆಗೆ ಸೇರಿದ ಪದ ಪಾಲಿಯಲ್ಲಿ ನಾಗ ಎಂಬ ಪದವು 'ಆನೆ' ಎಂಬ ಅರ್ಥನಿಡುತ್ತದೆ. ಆದರೆ, ನಾಗಗಳು ಎಂಬ ಕಗ್ಗಂಟಿನ ಪ್ರಶ್ನೆಗೆ ಬೌದ್ಧ ಇತಿಹಾಸವು ಸಾಕಷ್ಟು ಬೆಳಕು ಚೆಲ್ಲುತ್ತದೆ. ಇಲ್ಲಿ ಮಾನವ ಗರ್ಭದಿಂದ ಹುಟ್ಟಿದ ನಾಗಗಳು ಹಾಗೂ ಮೊಟ್ಟೆಯಿಂದ ಜನ್ಮತಳೆದ ನಾಗ(ಹಾವು)ಗಳ ನಡುವೆ ವ್ಯತ್ಯಾಸವನ್ನು ಗುರುತಿಸಲಾಗಿದೆ. ಲೇಖನ ಓದುವಾಗ ಗೊಂದಲವಾಗದಿರಲ್ಲಿ ಎಂದು 'ನಾಗ' ಎಂಬ ಪದಕ್ಕೆ ಎರಡು ಅರ್ಥಗಳಿರುವುದು ಮೊದಲೇ ಹೇಳುತ್ತಿರುವೆ. ಈಗ ನಾನು ಹೇಳಲು ಹೊರಟಿರುವುದು ಮಾನವ ಗರ್ಭದಿಂದ ಹುಟ್ಟಿದ ನಾಗಗಳ ಕುರಿತು. ನಾವು ಇತಿಹಾಸವನ್ನು ಗಮನಿಸಿದಾಗ ನಮಗೆ 'ನಾಗ' ಎನ್ನುವ ಜನಾಂಗ ಈ ಭೂಮಿಯ ಮೇಲೆ ಬಾಳಿ ಬದುಕಿರುವುದರ ಬಗ್ಗೆ ಹಲವಾರು ಉಲ್ಲೇಖಗಳು ದೊರೆಯುತ್ತವೆ. ಈ ಜನಾಂಗವು ಅತ್ಯಂತ ಉತ್ಕೃಷ್ಟ ನಾಗರಿಕತೆ ಉಳ್ಳವರಾಗಿದ್ದರು. ಭಾರತಕ್ಕೆ ಆರ್ಯರ ಆಗಮನಕ್ಕಿಂತ ಮೊದಲು ಏಷ್ಯಾ ಖಂಡದ ಬಹು ಭಾಗ ಆಳಿದಂತವರು. ಆರ್ಯರ ಆಗಮನದ ನಂತರವೂ ಹಲವು ಶತಮಾನಗಳ ಕಾಲ ಆಳ್ವಿಕೆ ಮಾಡಿದ ಜನಾನುರಾಗಿ ದೊರೆಗಳಿವರು.ಇವರ ಬಗ್ಗೆ ಬರೆಯಲು ಹೋದರೆ ಒಂದು ಬೃಹತ್ ಗ್ರಂಥವೆ ಆಗುತ್ತದೆ. ಸಾಧ್ಯವಾದಲ್ಲಿ ಮುಂದಿನ ದಿನಗಳಲ್ಲಿ ಬರೆಯುವ ಪ್ರಯತ್ನ ಮಾಡುವೆ. ಈ ನಾಗ ಜನಾಂಗದ ಇತಿಹಾಸವು ಪಟ್ಟಭದ್ರ ಹಿತಾಸಕ್ತಿಗಳು ಕಾಲ ಕಾಲಕ್ಕೆ ತಿರುಚುತ ಬಂದು ಕಥೆಯಾಗಿಸಿ ಸಂಪೂರ್ಣವಾಗಿ ಈ ಭವ್ಯ ಇತಿಸವನ್ನೆ ಮರೆಮಾಚಿದರು. ಆದರೆ, 'ಸತ್ಯ ಒಂದಲ್ಲ ಒಂದು ದಿನ ಬೆಳಕಿಗೆ ಬರುತ್ತದೆ' ಎಂಬ ಮಾತಿನಂತೆ ಬ್ರಿಟಿಷರು ಉತ್ಖಾದನಾ ನಡೆಸಿದಾಗ ದೊರೆತ ನಾಣ್ಯಗಳು ಐವರು(ಪಂಚ) ನಾಗ ದೊರೆಗಳ ಇತಿಹಾಸದ ಕುರಿತು ಸಾಕಷ್ಟು ಬೆಳಕು ಚಲ್ಲಿದವು. ಇಂದಿಗೂ ಈ ನಾಣ್ಯಗಳು ಬ್ರಿಟಿಷ್ ಮ್ಯೂಸಿಯಂನಲ್ಲಿ ಸುರಕ್ಷಿತವಾಗಿ ಇವೆ.

ಸುಮಾರು 81 ವರ್ಷಗಳ ಕಾಲ ಆಳ್ವಿಕೆ ಮಾಡಿದ ನಾಗಗಳಲ್ಲಿ ಮೊದಲನೇ ಅರಸನೆ 'ಶೇಷನಾಗ' ಇತನ ಪೂರ್ಣ ಹೆಸರು ಶೇಷದತ್ತ ನಾಗ್ ಕ್ರಿ.ಪೂ 110 ರಿಂದ 90(110 BC – 90 BC) ರ ವರೆಗೆ ಆಳ್ವಿಕೆ ಮಾಡಿದ ಜನಾನುರಾಗಿ ಅರಸ ಜೊತೆಗೆ ಇತನೊಬ್ಬ ತಂತ್ರಜ್ಞಾನಿಯು ಆಗಿದ್ದನ್ನು. ಸುಮಾರು 20 ವರ್ಷಗಳ ಕಾಲ ನಾಗ ವಂಶವನ್ನು ಆಳಿದ ಶೇಷನಾಗ ಕ್ರಿಸ್ತಪೂರ್ವ 90 ರಲ್ಲಿ ನಿಧನಾದನು. ಎರಡನೆಯವನು 'ಭೋಗಿನ್ ನಾಗ' ಇವನು ಶೇಷನಾಗನ ಮಗ, ತನ್ನ ತಂದೆಯ ಮರಣದ ನಂತರ ಕ್ರಿ.ಪೂ 90 ರಲ್ಲಿ ಅಧಿಕಾರಕ್ಕೆ ಬಂದನು. ಇವನು ಕ್ರಿ.ಪೂ 90 ರಿಂದ 80 (90 BC – 80 BC)ರ ವರೆಗೆ ಸುಮಾರು 10 ವರ್ಷಗಳ ಕಾಲ ನಾಗ ವಂಶವನ್ನು ಆಳಿದ.

ಮೂರನೆಯವನು 'ಚಂದ್ರಶು ನಾಗ' ಈ ವಂಶದ ಶ್ರೇಷ್ಠ ಅರಸ. ಇವನು ಭೋಗಿನ್ ನಾಗನ ನಂತರ ಕ್ರಿ.ಪೂ 80 ರಲ್ಲಿ ಅಧಿಕಾರಕ್ಕೆ ಬಂದನು. ಕ್ರಿ.ಪೂ 80 ರಿಂದ 50 (80 BC – 50 BC)ರ ವರೆಗೆ ಸುಧೀರ್ಘವಾಗಿ ಸುಮಾರು 30 ವರ್ಷಗಳ ಕಾಲ ನಾಗ ವಂಶವನ್ನು ಆಳಿದ ಸುಪ್ರಸಿದ್ಧ ದೊರೆ ವಿದ್ಯೆಗೆ ಅತ್ಯಂತ ಮಹತ್ವದ ಸ್ಥಾನ ನೀಡಿದನು. ಪ್ರಜೆಗಳನ್ನು ಮತ್ತು ಮರ ಗಿಡಗಳನ್ನು ಅಪಾರವಾಗಿ ಪ್ರೀತಿಸುತ್ತಿದ್ದ.

> **ಐದನೆಯವನ್ನು 'ವಂಗರ್ ನಾಗ' ಇವನು ದಮ್ಮವರ್ಮನ್ ನಾಗನ ನಂತರ ಕ್ರಿ.ಪೂ 40 ರಲ್ಲಿ ಅಧಿಕಾರಕ್ಕೆ ಬಂದನು. ಕ್ರಿ.ಪೂ 40 ರಿಂದ 31 (40 ಃಅ – 31 ಃಅ)ರ ವರೆಗೆ ಸುಮಾರು 11 ವರ್ಷಗಳ ಕಾಲ ನಾಗ ವಂಶವನ್ನು ಆಳಿದ ಇತನು ತಮ್ಮ ಹಿಂದಿನ ಅರಸರುಗಳಂತೆಯೇ ಜನಾನುರಾಗಿ ಅರಸನಾಗಿದ್ದ. ಇನ್ನು ಪಂಚಮಿ ಎಂಬ ಪದದ ಬಗ್ಗೆ ಹೇಳುವುದಾದರೆ, ಈ ಪದವು ಮೂಲತಃ ಯಾವ ಭಾಷೆಗೆ ಸೇರಿರುವುದು ಅಂತ ನನ್ನಗೆ ಸರಿಯಾಗಿ ತಿಳಿದಿಲ್ಲ. ಆದರೆ, ಪಂಚ ಅಂದರೆ ಐದು, ಪಂಚಮಿ ಅಂದರೆ ಐವರು ಎಂಬ ಅರ್ಥ ನೀಡುತ್ತದೆ.**

ನಾಲ್ಕನೆಯವನ್ನು 'ದಮ್ಮವರ್ಮನ್ ನಾಗ' ಇವನು ಚಂದ್ರಶು ನಾಗನ ನಂತರ ಕ್ರಿ.ಪೂ 50 ರಲ್ಲಿ ಅಧಿಕಾರಕ್ಕೆ ಬಂದನು. ಕ್ರಿ.ಪೂ 50 ರಿಂದ 40 (50 BC – 40 BC)ರ ವರೆಗೆ ಸುಮಾರು 10 ವರ್ಷಗಳ ಕಾಲ ನಾಗ ವಂಶವನ್ನು ಆಳಿದ ಇತನು ಜನಾನುರಾಗಿ ಅರಸನಾಗಿದ್ದ. ಆಗಾಗ ಪ್ರಜೆಗಳಿಗೆ ಧಾನದ ರೂಪದಲ್ಲಿ ಕಾಣಿಕೆಗಳು ನೀಡುತ್ತಿದ್ದ. ಈ ಮೇಲೆ ಹೇಳಿದ ಐವರು ನಾಗ ಅರಸರನ್ನೆ 'ಪಂಚ' 'ಪಂಚಮಿ' ಅಂತ ಕರೆಯಲಾಗುತ್ತಿತ್ತು. ನಾಗ ಮತ್ತು ಪಂಚಮಿ ಪದಗಳು ಸೇರಿ 'ನಾಗ ಪಂಚಮಿ' 'ನಾಗರ ಪಂಚಮಿ' ಆದದ್ದು ಕಂಡು ಬರುತ್ತದೆ. ಈ ಪಂಚ ನಾಗ ಅರಸರುಗಳು ಬುದ್ಧ ಧಮ್ಮ ಅನುಯಾಯಿಗಳಾಗಿದರು. ಬಾಬಾಸಾಹೇಬರು ಹೇಳುವಂತೆ ಬುದ್ಧನು ಸಹ ಒಬ್ಬ ನಾಗ ವಂಶದವನಾಗಿದ. ಬುದ್ಧರ ಅನೇಕ ಪ್ರಾಚೀನ ಶಿಲ್ಪಗಳ ಹಿಂದೆ ಐದು ಹೆಡೆಯ ಸರ್ಪದ ಚಿತ್ರವಿರುವುದು ನಾವು ಕಾಣಬಹುದು. ಈ ಸರ್ಪವು ನಾಗ ವಂಶಿಗರ ಸಂಕೇತ. ನಮ್ಮ ಕರ್ನಾಟಕದ ಮೈಸೂರಿನಲ್ಲಿ ನಾಗ ಕುಲದ ದೊರೆ ಮಹಿಷಾಸುರನ ಕೈಯಲ್ಲಿಯೋ ಸಹ ನಾವು ಈ ಸರ್ಪದ ಸಂಕೇತವೂ ಕಾಣಬಹುದು. ಬುದ್ಧ ಧಮ್ಮದ ರಕ್ಷಕರಾದ ಈ ಪಂಚ ನಾಗ ದೊರೆಗಳ ಸಂಕೇತವೆ ಅಮರಾವತಿ ಸ್ತೂಪದ ಮೇಲೆ ಪಂಚಮುಖಿ ನಾಗನ ರೂಪದಲ್ಲಿ ಚಿತ್ರಿಸಲಾಗಿದೆ. ಈ ನಾಗ ಜನಾಂಗದ ಇತಿಹಾಸವನ್ನೇ ತಿರುಚಿ ಮನುವಾದಿಗಳು ಪಂಚಮಿ ಹಬ್ಬವೆಂದು ಬುರುಡೆ ಬಿಟ್ಟಿದ್ದಾರೆ. ನಾಗ ದ್ವೇಷ, ಸರ್ಪ ದೋಷ, ಅ ದೋಷ ಈ ದೋಷಗಳೆಂದು ಮುಗ್ಧ ಜನರ ಮನಸ್ಸುಗಳಲ್ಲಿ ಭಯ್ಯವನ್ನು ಹುಟ್ಟಿಸಿ ಅ ಭಯ್ಯವನೆ ತಮ್ಮ ಬಂಡವಾಳವಾಗಿಸಿಕೊಂಡು ಹೊಟ್ಟೆ ಹೊರೆಯುತ್ತಿರುವುದು ನಾವು ಕಾಣುತ್ತಿದ್ದೇವೆ. ಇವರ ಈ ಕುತಂತ್ರ ಅರಿಯದೆ ಜನಗಳು ಸಹ ಮೌಢ್ಯಕ್ಕೆ ಬಲಿಯಾಗಿ ಪಂಚಮಿ ಹಬ್ಬದಲ್ಲಿ ಅವೈಜ್ಞಾನಿಕವಾಗಿ ಹುತ್ತಗಳಿಗೆ ಮತ್ತು ಸರ್ಪದ ಶಿಲೆಗಳಿಗೆ ಪೋಷ್ಟಿಕತೆಯುಳ್ಳ ಆಹಾರವಾದ ಹಾಲು ಸುರಿದು ವ್ಯರ್ಥ ಮಾಡುತ್ತಿದ್ದಾರೆ. ಇದರಲ್ಲಿ ಬುದ್ಧಿಜೀವಿಗಳು ಸರಕಾರಿ ನೌಕರರು ಸೇರಿಕೊಂಡಿರುವುದು ಬಹುದೊಡ್ಡ ದುರಂತ.! ಇಂತಹ ಅವೈಜ್ಞಾನಿಕ ಆಚರಣೆಗಳಿಂದ ಹೊರಬಂದು ಪ್ರಜ್ಞಾವಂತರಾಗಿ ಪ್ರಬುದ್ಧ ಸಮಾಜ ನಿರ್ಮಿಸೋಣ.

# ತಾಯಿ ಮಗನಿಗೆ ಮೈಸೂರಿನಲ್ಲಿ ಅದ್ದೂರಿ ಸನ್ಮಾನ

• ಉದಯವಾಹಿನಿ, ಮೈಸೂರು

ದ ಪೋರಂ ಆಫ್ ಬ್ಯುಸಿನೆಸ್ ಬೈ ಬ್ರಾಹ್ಮಿನ್ ಬಿಬಿಬಿ ಟ್ರಸ್ಟ್ ಐದನೇ ವರ್ಷದ ವಾರ್ಷಿಕೋತ್ಸವ ಸಂದರ್ಭದಲ್ಲಿ ಕಲಿಯುಗದ ಶ್ರವಣಕುಮಾರ ಖ್ಯಾತಿಯ ದಕ್ಷಿಣಾ ಮೂರ್ತಿ ಕೃಷ್ಣಕುಮಾರ್ ಹಾಗೂ ಮಾತೃಶ್ರೀ ಚೂಡಾರತ್ನಮ್ಮನವರನ್ನು ವಿಪ್ರ ಮಹಿಳಾ ರತ್ನ ಹಾಗೂ ಸ್ತ್ರೀ ರತ್ನ ಪ್ರಶಸ್ತಿ ಪುರಸ್ಕೃತರು ಗೌರವಪೂರ್ವಕವಾಗಿ ಸನ್ಮಾನಿಸಲಾಯಿತು.

ಶಾರದಾ ವಿಲಾಸ್ ಶತಮಾನೋತ್ಸವ ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಹೊಯ್ಸಳ ಕರ್ನಾಟಕ ಸಂಘದ ಪೂರ್ವ ಅಧ್ಯಕ್ಷರಾದ ಶ್ರೀ ಎಮ್ . ವಿ.ಸತ್ಯನಾರಾಯಣ್ ರವರು ಮಾತನಾಡಿ ತಂದೆ ಕೊಡಿಸಿದ ಸ್ಕೂಟರ್‌ನಲ್ಲಿ ಹೆತ್ತ ತಾಯಿಯನ್ನು ಹೊತ್ತು ದೇಶದ ಉದ್ದಗಲ ಪುಣ್ಯಕ್ಷೇತ್ರಗಳ ದರ್ಶನ ಮಾಡಿಸಿದ ಶ್ರವಣಕುಮಾರ ಹಾಗೂ ಮಾತೃಶ್ರೀ ಅವರನ್ನು ಈ ವಿಶೇಷ ಸಂದರ್ಭದಲ್ಲಿ ಅಭಿನಂದಿಸುತ್ತಿರುವುದು ನಮಗೆಲ್ಲ ಸಂತಸವಾಗಿರುವ ಜೊತೆಗೆ ಇಡೀ ಕಾರ್ಯಕ್ರಮದ ಕಳೆಯನ್ನು ಹೆಚ್ಚಿಸಿದೆ ತಾಯಿ ಸೇವೆಗಾಗಿ ನೆಟ್ಟ ಮನುಸುಳ್ಳ ಇವರ ಮಹಿಮಾತಿಷಯಗಳು ಕೀರ್ತಿಗಳು ಚಿರಂಜೀವಿಯಾಗಲಿ ಎಂದು ಶುಭ ಹಾರೈಸಿದರು.



ಉದಯವಾಹಿನಿ ಚಿತ್ರ

ಬಿಬಿಬಿಯ ಸಂಸ್ಥಾಪಕ ಅಧ್ಯಕ್ಷರಾದ ಅನಂತ ನಾಗ ರಾಜ್ ರವರು ಮಾತನಾಡಿ ದೇಶದೆಲ್ಲೆಡೆ ಮನೆಮಾತಾಗಿರುವ ಮಾತೃಸೇವೆಯ ಇವರ ಸಾಹಸಯಾತ್ರೆ, ಇಡೀ ಯುವ ಜನಾಂಗಕ್ಕೆ ಮಾದರಿ , ಆಧುನಿಕ ಸ್ತ್ರೀಯರು ಇಂಥವರ ಜೀವನಗಳಿಂದ ಸ್ಫೂರ್ತಿ ಪಡೆದು ಇವರು ನಡೆದ ಪಥದಲ್ಲಿ ತಾವು ಹೆಜ್ಜೆ ಇಡಲು ಪ್ರಯತ್ನಿಸಬೇಕು ಎಲ್ಲಿಯವರೆಗೆ ಇಂಥ ಸ್ತ್ರೀ ರತ್ನಗಳ ಜೀವನ ಪ್ರಭಾವ ಬೀರುವುದೋ ಅಲ್ಲಿಯತನಕ ದೇಶ ಸಮಾಜ ಇಂಥವರನ್ನು ಪ್ರೀತಿಸಿ ಗೌರವಿಸುತ್ತಲೇ ಇರುತ್ತದೆ. ಈ ಮಹನೀಯರನ್ನು ಗೌರವಿಸುತ್ತಿರುವುದು ನಮ್ಮ ಸಂಸ್ಥೆಗೆ ಕಿರೀಟವಿಟ್ಟಂತೆ, ಪಾವಿತ್ರತೆ ಹೆಚ್ಚಾಗಿದೆ, ನಿಜಕ್ಕೂ ಇದೊಂದು ಅರ್ಥಪೂರ್ಣ ಕಾರ್ಯಕ್ರಮ ಎಂದರು. ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದ ಕೃಷ್ಣಕುಮಾರ್ ನಮ್ಮ ತಾಯಿ ಜೀವನದಲ್ಲಿ ಅನೇಕ ಕಷ್ಟ ಕಾರ್ಪಣ್ಯಗಳಿಗೆ ಒಳಗಾಗಿ ತೀವ್ರ ಪರೀಕ್ಷೆಗೆ ಒಳಪಟ್ಟು ತಮ್ಮ ಪರಿಶುದ್ಧತೆ, ಧೈರ್ಯ ಶಾಂತಿ, ಮಮತೆ, ಸಹನೆ ಇತರ ಸದ್ಗುಣಗಳಿಂದ ಮೇಲ್ಬಂದು ಉತ್ತೀರ್ಣರಾದವರು, ಮಾತೃತ್ವದ ವೈಭವದ ಮೂಲಕ ಇಡೀ ಮನೆ ಹಾಗೂ ಮನವನ್ನು ಬೆಳಗಿದವರು ತಮ್ಮ ನಿಸ್ವಾರ್ಥ ಪ್ರೇಮ ಹಾಗು ತ್ಯಾಗದಿಂದ ಕುಟುಂಬವನ್ನು ಪೋಷಿಸಿ ಜನಮಾನಸದಲ್ಲಿ ಪ್ರಖ್ಯಾತರಾದವರು ಇಂತಹ ಸದ್ಗುಣಿ ಸಾದ್ವಿ, ಸಾಹಸಿ ತಾಯಿಯನ್ನು ಪಡೆದಿರುವುದು ನನ್ನ ಪೂರ್ವಜನ್ಮದ ಸುಕೃತ ಎಂದು ಹರ್ಷಿಸಿ, ಎಲ್ಲರಿಗೂ ತಮ್ಮ ಹೃದಯಾಂತರಾಳದ ಧನ್ಯವಾದಗಳನ್ನು ತಿಳಿಸಿದರು. ಈ ಸಂದರ್ಭದಲ್ಲಿ ಶಾರದಾ ವಿಲಾಸ್ ವಿದ್ಯಾಸಂಸ್ಥೆಯ ಕಾರ್ಯದರ್ಶಿಗಳಾದ ಶ್ರೀ ಎನ್ ಚಂದ್ರಶೇಖರ್ ಹಾಗೂ ಡಾ. ಪ್ರಕಾಶ್ ಎಂ ಕುಲಕರ್ಣಿ ಟ್ರಸ್ಟಿಗಳಾದ ಶ್ರೀ ಸುಬ್ರಾಯ, ಶ್ಯಾಮ್ ಸುಂದರ್, ಪ್ರಭಾಕರ್ ರಾವ್ , ಎಲ್ಲಾ ಸದಸ್ಯರು ಜೊತೆಗಿದ್ದರು.

# ರಾಜ್ಯಮಟ್ಟದ ಸ್ವಾತಂತ್ರ್ಯ ದಿನಾಚರಣೆಗೆ ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಿ: ಮುಖ್ಯ ಆಯುಕ್ತರು

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ರಾಜ್ಯಮಟ್ಟದ ಸ್ವಾತಂತ್ರ್ಯ ದಿನಾಚರಣೆಗೆ ಎಲ್ಲಾ ರೀತಿಯ ಸಕಲ-ಸಿದ್ಧತೆಗಳನ್ನು ಮಾಡಿಕೊಳ್ಳಲು ಮುಖ್ಯ ಆಯುಕ್ತರಾದ ಶ್ರೀ ತುಷಾರ್ ಗಿರಿ ನಾಥ್ ರವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ರಾಜ್ಯಮಟ್ಟದ ಸ್ವಾತಂತ್ರ್ಯ ದಿನಾಚರಣೆ ಆಚರಿಸುವ ಸಂಬಂಧ ಪಾಲಿಕೆ ಕೇಂದ್ರ ಕಛೇರಿಯ ಸಭಾಂಗಣ-01ರಲ್ಲಿ ನಡೆದ ಪೂರ್ವಭಾವಿ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಸರಿಯಾಗಿ ಪೂರ್ವಾಭ್ಯಾಸ ಮಾಡಿಕೊಳ್ಳಬೇಕು.

**ಪೂರ್ವ ಭಾವಿ ಸಭೆ**

ಪೂರ್ವಾಭ್ಯಾಸ ಮಾಡುವ ವೇಳೆ ಅವರಿಗೆ ತಿಂಡಿ ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಸರಿಯಾಗಿ ಮಾಡಲು ಸೂಚಿಸಿದರು. ಮಾಣಿಕ್ ಷಾ ಪೆರೇಡ್ ಮೈದಾನದಲ್ಲಿ ಆಸನಗಳ ವ್ಯವಸ್ಥೆ, ಯಾವ ದ್ವಾರಗಳಲ್ಲಿ ಯಾರಿಗೆ ಪ್ರವೇಶ ನೀಡಬೇಕು, ಪಾರ್ಕಿಂಗ್ ವ್ಯವಸ್ಥೆ, ಮಾರ್ಗ ಬದಲಾವಣೆ ಸೇರಿದಂತೆ ಇನ್ನಿತರೆ ವ್ಯವಸ್ಥೆಗಳಲ್ಲಿ ಯಾವುದೇ ರೀತಿಯ ಗೊಂದಲಗಳಿಲ್ಲದಂತೆ ನೋಡಿ ಕೊಳ್ಳಬೇಕೆಂದು ಸೂಚಿಸಲಾಯಿತು. ಮಾಣಿಕ್‌ಷಾ ಆವರಣದಲ್ಲಿ ಸೂಕ್ತ ಬಂದೋಬಸ್ತ್ ಗಾಗಿ ಅವಶ್ಯಕ ಭದ್ರತಾ ಸಿಬ್ಬಂದಿಯನ್ನು ನಿಯೋಜಿಸಿರಬೇಕು. ಬ್ಯಾರಿಕೇಡಿಂಗ್ ವ್ಯವಸ್ಥೆ ಸರಿಯಾಗಿದೆಬೇಕು. ಆವರಣ ಹಾಗೂ ಆವರಣದ ಸುತ್ತಮುತ್ತಲಿನ ಪ್ರದೇಶದಲ್ಲಿ ಸಂಪೂರ್ಣ ಸ್ವಚ್ಛತೆ ಕಾಪಾಡಬೇಕು ಎಂದು ತಿಳಿಸಿದರು. ಈ ವೇಳೆ ವಿಶೇಷ ಆಯುಕ್ತರಾದ ಅವಿನಾಶ್ ಮೆನನ್ ರಾಜೇಂದ್ರನ್, ಪ್ರೀತಿ ಗೆಹ್ಲೋಟ್, ವಲಯ ಆಯುಕ್ತರಾದ ಸ್ನೇಹಲ್, ವಿನೋತ್ ಪ್ರಿಯಾ, ರಮ್ಯಾ, ಬೆಂಗಳೂರು ನಗರ ಜಿಲ್ಲಾಧಿಕಾರಿಯಾದ ದನಾಯಂದ್, ಉಪ ಆಯುಕ್ತರಾದ ಮಂಜುನಾಥ ಸ್ವಾಮಿ, ವಲಯ ಜಂಟಿ ಆಯುಕ್ತರು, ಬಿಬಿಎಂಪಿ, ಲೋಕೋಪಯೋಗಿ ಇಲಾಖೆ, ಪೊಲೀಸ್ ಇಲಾಖೆ, ಜಲಮಂಡಳಿ, ಕನ್ನಡ ಸಂಸ್ಕೃತಿ ಇಲಾಖೆ ಸೇರಿದಂತೆ ಇನ್ನಿತರೆ ಇಲಾಖೆಗಳ ಸಂಬಂಧಪಟ್ಟ ಅಧಿಕಾರಿಗಳು ಉಪಸ್ಥಿತರಿದ್ದರು.

> **ಪ್ರಶಂಸಾ ಪತ್ರ ವಿತರಣೆ**
>
> **ಫೀಲ್ಡ್ ಮಾರ್ಷಲ್ ಮಾಣಿಕ್ ಷಾ ಪೆರೇಡ್ ಮೈದಾನದಲ್ಲಿ ನಡೆಯುವ ರಾಜ್ಯಮಟ್ಟದ ಸ್ವಾತಂತ್ರ್ಯ ದಿನಾಚರಣೆಯ ದಿನದಂದು ಅಂಗಾಂಗ ದಾನದ ವಿಶೇಷ ಕಾರ್ಯಕ್ಕಾಗಿ 80 ಮಂದಿಗೆ ಸನ್ಮಾನ್ಯ ಮುಖ್ಯಮಂತ್ರಿಗಳು ಸನ್ಮಾನಿಸಿ ಪ್ರಂಶಂಸಾ ಪತ್ರ ನೀಡಲಿದ್ದಾರೆ. ಅದಕ್ಕೆ ಬೇಕಾದ ಎಲ್ಲಾ ರೀತಿಯ ಸಿದ್ದತೆಗಳನ್ನು ಮಾಡಿಕೊಳ್ಳಲು ಅಧಿಕಾರಿಗಳಿಗೆ ಸೂಚಿಸಲಾಯಿತು.**

# ಸೈಟ್‌ಕೇರ್ ಆಸ್ಪತ್ರೆಗಳು ಸ್ತನ್ಯಪಾನ ಜಾಗೃತಿ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಯಲಹಂಕದ ಗ್ಯಾಲೇರಿಯಾ ಮಾಲ್‌ನ ಸಹಯೋಗ ದೊಂದಿಗೆ ಸೈಟ್‌ಕೇರ್ ಆಸ್ಪತ್ರೆಗಳು ಸ್ತನ್ಯಪಾನ ಜಾಗೃತಿ ಸಪ್ತಾಹದ 1 ರಿಂದ 7ನೇ ಆಗಸ್ಟ್ ಸಂದರ್ಭದಲ್ಲಿ ಮಾಲ್ ಆವರಣದಲ್ಲಿ ಫ್ಲ್ಯಾಷ್ ಮಾಬ್ ಕಾರ್ಯಕ್ರಮವನ್ನು ಆಯೋಜಿಸಿವೆ. ಸೈಟ್‌ಕೇರ್‌ನಲ್ಲಿರುವ ಮಹಿಳೆಯರ ಆಂಕೊಲಾಜಿ ತಂಡದ ವೈದ್ಯರು ಸ್ತನ್ಯಪಾನದ ಪ್ರಾಮುಖ್ಯತೆ ಮತ್ತು ಮಹಿಳೆಯಲ್ಲಿ ವ್ಯಾಪಕವಾದ ಆರೋಗ್ಯ ಸಮಸ್ಯೆಗಳಿಗೆ ಕಾರಣವಾಗುವ ಅಪಾಯಕಾರಿ ಅಂಶಗಳನ್ನು ಎತ್ತಿ ತೋರಿಸಿದ್ದಾರೆ, ಇದು ಕ್ಯಾನ್ಸರ್‌ನಂತಹ ಮಾರಣಾಂತಿಕ ಕಾಯಿಲೆಗಳಾಗಿ ಬದಲಾಗಬಹುದು. ಸಂಜೆ ನಡೆದ ಈ ಮೋಜಿನ ಕಾರ್ಯಕ್ರಮಕ್ಕೆ ಸುಮಾರು 500+ ಪ್ರೇಕ್ಷಕರು ಸಾಕ್ಷಿಯಾದರು.

# ಮಹಾಭಾರತ ಶಾಂತಿಪರ್ವ



• ಹಿಂದಿನ ಸಂಚಿಕೆಯಿಂದ

ರಾಜನು ತನ್ನ ಪುರೋಭಿದ್ಧಿಯನ್ನೂ ಕ್ಷೇಮವನ್ನೂ ಆಶಿಸುವ ಬುದ್ಧಿವಂತರಾದವರನ್ನು ಮಿತ್ರರನ್ನಾಗಿ ಮಾಡಿಕೊಳ್ಳಬೇಕು. ಶತ್ರುವಿನೊಂದಿಗೆ ಸಂಧಿಮಾಡಿಕೊಳ್ಳದಿದ್ದಾಗ ಜೀವವೇ ಉಳಿಯುವುದಿಲ್ಲ ಎನ್ನುವಂತಹ ಸಂದರ್ಭಗಳಲ್ಲಿ ಸಂಧಿಮಾಡಿಕೊಳ್ಳಲೇಬೇಕು. ಇದನ್ನು ಪರಿಗಣಿಸಲಾರದಷ್ಟು ಮೂರ್ಖನಾದರೆ, ಎಲ್ಲರೂ ಅಷ್ಟೊಂದು ಕಷ್ಟಪಟ್ಟು ಸಾಧಿಸುವಂಥವುಗಳನ್ನು ನಾವು ಪಡೆಯಲಾಗುವುದಿಲ್ಲ. ಸಂದರ್ಭಾನುಸಾರವಾಗಿ, ಅವಶ್ಯವಾದಾಗ ಶತ್ರುವಿನೊಡನೆ ಸಂಧಿಮಾಡಿಕೊಳ್ಳಬಲ್ಲ ಹಾಗೂ ಅಲ್ಲಿಯವರೆಗೆ ಮಿತ್ರರಾಗಿದ್ದವರೊಡನೆ ಜಗಳವಾಡ ಬಲ್ಲ ರಾಜನು ಯಶಸ್ವಿಯಾಗುವುದು. ಖಂಡಿತ. ಗೆಳೆತನವನ್ನು ಸ್ಥಾಪಿಸಿಕೊಳ್ಳುವುದಕ್ಕೆ ಮೊದಲು ವ್ಯಕ್ತಿಗಳನ್ನು ಕೂಲಂಕಷವಾಗಿ ಅಭ್ಯಸಿ ಸಬೇಕು. ಶತ್ರುಗಳ ಬಲಾಬಲಗಳನ್ನು ಯಾವಾಗಲೂ ತಿಳಿದಿರಬೇಕು. ಮಿತ್ರರು ಶತ್ರುಗಳಂತೆ ಕಾಣಬಹುದು, ಶತ್ರುಗಳು ಮಿತ್ರರಂತೆ ಬರಬಹುದು. ಸ್ನೇಹದ ಒಡಂ ಬಡಿಕೆಯನ್ನು ಮಾಡಿಕೊಂಡಾಗ, ಆ ಇನ್ನೊಬ್ಬನು ನಿಜವಾದ ಸ್ನೇಹಭಾವನೆಯಿಂದಿರುವನೋ ಅಥವಾ ಕೇವಲ ಸ್ವಾರ್ಥ ಷ್ಟಿಯಿಂದ ಆದಕ್ಕೆ ಒಪ್ಪಿರುವನೋ ಎಂದು ನಿರ್ಧರಿಸಲಾಗುವುದಿಲ್ಲ. ಶತ್ರು ಮಿತ್ರ ಎಂಬ ಪದಗಳೆರಡೂ ಸಾಪೇಕ್ಷವಾದುವುಗಳು. ಒಬ್ಬನು ಇನ್ನೊಬ್ಬನನ್ನು ತನಗೆ ಲಾಭದಾಯಕವಾಗಿರುವವರೆಗೆ, ತನ್ನ ಆಸಕ್ತಿಗಳು ರಕ್ಷಿತವಾಗಿರುವವರೆಗೆ ಮಾತ್ರವೇ ಮಿತ್ರನೆಂದು ಪರಿಗಣಿಸುವನು. ಆ ವ್ಯಕ್ತಿ ಜೀವಿಸಿರುವವರೆಗೂ ಇದು ಹೀಗೆಯೇ ಮುಂದುವರೆಯುವುದು ಎಂದಾದರೆ, ಸ್ನೇಹವು ಆಜೀವಪರ್ಯಂತ ಏರ್ಪಡುವುದು. ಪ್ರತಿಯೊಬ್ಬನ ಬದುಕಿನಲ್ಲಿ ಸ್ವಹಿತಾಸಕ್ತಿ ಎಂಬುದು ಬಹಳ ಬಲವತ್ತರವಾದುದು. ಲೋಕವೇ ಈ ಒಂದು ಅಂಶದ ಸುತ್ತ ತಿರುಗುತ್ತಿರುವುದು. ಯಾವುದಾದರೂ ಲಾಭವಿಲ್ಲದೆಯೇ ಯಾರೂ ಯಾರೊಬ್ಬರಿಗೂ ಪ್ರಿಯರಾಗಲಾರರು.

ಸ್ವಹಿತಸಾಧನೆಯ ಉದ್ದೇಶವಿಲ್ಲದಲ್ಲಿ ಯಾವ ಪ್ರೀತಿಯೂ ಏರ್ಪಡಲಾರದು. ಒಬ್ಬನು ಉದಾರಮನಸ್ಕನೆಂದು, ಇನ್ನೊಬ್ಬನು ಮಧುರವಾಗಿ ಮಾತನಾಡುವವನೆಂದು, ಮತ್ತೊಬ್ಬನು ತುಂಬ ಧಾರ್ಮಿಕನೆಂದು, ಇತರರಿಗೆ ಪ್ರಿಯನಾಗಬಹುದು. ಯಾವುದಾದರೂ ಪ್ರಯೋಜನಹೇತುವಾಗಿಯೇ ಒಬ್ಬರು ಇನ್ನೊಬ್ಬರಿಗೆ ಪ್ರಿಯರಾಗುತ್ತಾರೆಯಲ್ಲದೆ ಬೇರೆಯಲ್ಲ. ಸ್ನೇಹ ಏರ್ಪಟ್ಟ ಕಾರಣವು ಇಲ್ಲವಾದನೆ ಸ್ನೇಹವೂ ಇಲ್ಲವಾಗುವುದು. ''ಬುದ್ಧಿವಂತನಾದವನು ತಾನು ಶತ್ರುವಿನೊಡನೆ ಯಾವಾಗ ಸಂಧಿಮಾಡಿಕೊಳ್ಳಬೇಕು ಎಂಬುದನ್ನು ತಿಳಿದಿರಬೇಕು. ಹಿಂದೆ ಶತ್ರುಗಳಿಗಿದ್ದು ಈಗ ಮಿತ್ರರಾಗಿದ್ದಾರೆ ಎಂದಾಗ, ಒಬ್ಬರು ಇನ್ನೊಬ್ಬರನ್ನು ಮೀರಿಸಿ ತನ್ನ ಕಕ್ಷೆಯೊಳಗೆ ತಂದುಕೊಳ್ಳುವುದಕ್ಕೆ ಹೊಂಚುಹಾಕುತ್ತ ಸಮಯ ಕಾಯುತ್ತಿದ್ದಾರೆಂದೇ ಅರ್ಥ. ಇಬ್ಬರಲ್ಲಿ ಯಾರು ಹೆಚ್ಚು ಬುದ್ಧಿವಂತರೋ ಅವರು ಗೆಲ್ಲುವರು. ಮುಖ್ಯವಾದ ಅಂಶವೆಂದರೆ, ಇನ್ನೊಬ್ಬನ ಬಗ್ಗೆ ನೀನು ಹೆದರಿದಾಗಲೂ ಹೆದರದೆ ಇರುವವನಂತೆ ಇರಬೇಕು.

**ಮುಂದುವರಿಯುವುದು...**

# ನಾಗರಪಂಚಮಿ, ಸಾತ್ತ್ವಿಕತೆ ಗ್ರಹಿಸಲು ಉಪಯುಕ್ತ ಕಾಲ

• ಉದಯವಾಹಿನಿ, ಬೆಂಗಳೂರು

ಶ್ರಾವಣ ಶುಕ್ಲ ಪಂಚಮಿಯಂದು ನಾಗರಪಂಚಮಿಯನ್ನು ಆಚರಿಸಲಾಗುತ್ತದೆ. ಆಸ್ತಿಕ ಋಷಿಯು ಸರ್ಪಯಜ್ಞ ಮಾಡುವ ಜನಮೇಜಯ ರಾಜನನ್ನು ಪ್ರಸನ್ನಗೊಳಿಸಿಕೊಂಡನು. ಜನಮೇಜಯ ರಾಜನು ವರವನ್ನು ಕೇಳು ಎಂದು ಹೇಳಿದಾಗ, ಆಸ್ತಿಕನು ಸರ್ಪಯಜ್ಞವನ್ನು ನಿಲ್ಲಿಸಬೇಕು ಎಂಬ ವರವನ್ನು ಕೇಳಿಕೊಂಡನು. ಜನಮೇಜಯನು ಸರ್ಪಯಜ್ಞವನ್ನು ನಿಲ್ಲಿಸಿದ ದಿನವು ಪಂಚಮಿಯಾಗಿತ್ತು.

ನಾಗರಪಂಚಮಿ – ಸಾತ್ತ್ವಿಕತೆ ಗ್ರಹಿಸಲು ಉಪಯುಕ್ತ ಕಾಲ ಪಂಚಪ್ರಾಣಗಳೇ ಪಂಚನಾಗಗಳಾಗಿವೆ. ನಾಗರಪಂಚಮಿಯ ದಿನದಲ್ಲಿ ವಾತಾವರಣವು ಸ್ಥಿರವಾಗಿರುತ್ತದೆ. ಸಾತ್ತ್ವಿಕತೆಯನ್ನು ಗ್ರಹಿಸಲು ಈ ಕಾಲವು ಅತ್ಯಂತ ಯೋಗ್ಯ ಮತ್ತು ಬಹಳ ಉಪಯುಕ್ತವಾಗಿದೆ. ಈ ದಿನದಂದು ಶೇಷನಾಗ ಮತ್ತು ಶ್ರೀವಿಷ್ಣುವಿಗೆ ಮುಂದಿನಂತೆ ಪ್ರಾರ್ಥನೆ ಮಾಡಬೇಕು 'ತಮ್ಮ ಕೃಪೆಯಿಂದ ಈ ದಿನದಂದು ಶಿವ ಲೋಕದಿಂದ ಪ್ರಕ್ಷೇಪಿತವಾಗುವ ಲಹರಿಗಳು ನನ್ನಿಂದ ಹೆಚ್ಚೆಚ್ಚು ಗ್ರಹಣವಾಗಲಿ. ನನ್ನ ಆಧ್ಯಾತ್ಮಿಕ ಪ್ರಗತಿಗೆ ಎದುರಾಗುವ ಎಲ್ಲಾ ಅಡಚಣೆಗಳೂ ನಾಶವಾಗಲಿ. ದೇವತೆಗಳ ಶಕ್ತಿಯು ನನ್ನ ಪಂಚಪ್ರಾಣಗಳಲ್ಲಿ ಸಂಗ್ರಹವಾಗಿ ಅದು ಈಶ್ವರ ಪ್ರಾಪ್ತಿಗಾಗಿ ಮತ್ತು ರಾಷ್ಟ್ರ ರಕ್ಷಣೆಗಾಗಿ ಉಪಯೋಗವಾಗಲಿ. ನನ್ನ ಪಂಚಪ್ರಾಣದ ಶುದ್ಧಿಯಾಗಲಿ.' ನಾಗದೇವತೆಯು ಸಂಪೂರ್ಣ ಬ್ರಹ್ಮಾಂಡದ ಕುಂಡಲಿನಿಯಾಗಿದ್ದಾನೆ. ಪಂಚಪ್ರಾಣವೆಂದರೆ ಪಂಚಭೌತಿಕ ತತ್ತ್ವದಿಂದ ಉಂಟಾದ ಶರೀರದ ಸೂಕ್ಷ್ಮರೂಪವಾಗಿದೆ. ಸ್ಥೂಲ ದೇಹವು ಪ್ರಾಣಹೀನವಾಗಿದೆ, ಸ್ಥೂಲ ದೇಹದಲ್ಲಿ ಚಲಿಸುವ ಪ್ರಾಣವಾಯುವು ಪಂಚಪ್ರಾಣದಿಂದ ಬರುತ್ತದೆ.

**ನಾಗರಪಂಚಮಿಯಂದು ಮಾಡಿದ ಉಪವಾಸದ ಮಹತ್ವ** 5 ಯುಗಗಳ ಹಿಂದೆ ಸತ್ಯೇಶ್ವರೀ ಎಂಬ ಹೆಸರಿನ ಕನಿಷ್ಠ ದೇವಿಯಿದ್ದಳು. ಸತ್ಯೇಶ್ವರನು ಅವಳ ಸಹೋದರನಾಗಿದ್ದನು. ಸತ್ಯೇಶ್ವರನು ನಾಗರಪಂಚಮಿಯ ಹಿಂದಿನ ದಿನ ಮೃತ್ಯು ಹೊಂದಿದನು. ಆಗ ಸಹೋದರನ ಮೃತ್ಯುವಿನ ಶೋಕದಲ್ಲಿ ಸತ್ಯೇಶ್ವರಿಯು ಆಹಾರವನ್ನು ಸ್ವೀಕರಿಸಲಿಲ್ಲ.



ಉದಯವಾಹಿನಿ ಚಿತ್ರ

> **ಪೂಜೆ : ನಾಗರಪಂಚಮಿಯ ದಿನ ಅರಿಶಿನ ಅಥವಾ ರಕ್ತಚಂದನದಿಂದ ಮಣೆಯ ಮೇಲೆ ನವನಾಗಗಳ ಆಕೃತಿಗಳನ್ನು ಬಿಡಿಸಿ ಅವುಗಳ ಪೂಜೆಯನ್ನು ಮಾಡಿ ಹಾಲು ಮತ್ತು ಅರಳಿನ ನೈವೇದ್ಯವನ್ನು ಅರ್ಪಿಸಬೇಕು. ನವನಾಗಗಳು ಪವಿತ್ರಕಗಳ ಒಂಬತ್ತು ಪ್ರಮುಖ ಗುಂಪುಗಳಾಗಿವೆ.**

**ಪೂರ್ವ ಭಾವಿ ಸಭೆ**

ಆದುದರಿಂದ ಆ ದಿನ ಸ್ತ್ರೀಯರು ಸಹೋದರನ ಹೆಸರಿನಲ್ಲಿ ಉಪವಾಸ ಮಾಡುತ್ತಾರೆ. ಸಹೋದರನಿಗೆ ಅಖಂಡ ಆಯುಷ್ಯವು ದೊರಕಲಿ, ಅನೇಕ ಆಯುಧಗಳು ಪ್ರಾಪ್ತವಾಗಲಿ ಮತ್ತು ಅವನು ಪ್ರತಿಯೊಂದು ದುಃಖ ಮತ್ತು ಸಂಕಟಗಳಿಂದ ಪಾರಾಗಲಿ' ಎನ್ನುವುದು ಸಹ ಈ ಉಪವಾಸದ ಹಿಂದಿನ ಕಾರಣವಾಗಿದೆ. ನಾಗರಪಂಚಮಿಯ ಹಿಂದಿನ ದಿನ ಪ್ರತಿಯೊಬ್ಬ ಸಹೋದರಿಯು ದೇವರಲ್ಲಿ ಮೊರೆ ಇಡುವುದರಿಂದ ಅವಳ ಸಹೋದರನಿಗೆ ಲಾಭವಾಗುತ್ತದೆ ಮತ್ತು ಅವನ ರಕ್ಷಣೆಯಾಗುತ್ತದೆ.

ನಾಗನ ಪೂಜೆ ಮಾಡುವುದರ ಹಿಂದಿನ ಶಾಸ್ತ್ರ

ಸತ್ಯೇಶ್ವರಿಗೆ ಅವಳ ಸಹೋದರನು ನಾಗರೂಪದಲ್ಲಿ ಕಂಡನು. ಆಗ ಅವಳು ಆ ನಾಗರೂಪವನ್ನು ತನ್ನ ಸಹೋದರನೆಂದು ಭಾವಿಸಿದಳು. ಆಗ ನಾಗದೇವನು, ನನ್ನನ್ನು ಸಹೋದರನೆಂದು ಭಾವಿಸಿ ಪೂಜೆ ಮಾಡಿದ ಸಹೋದರಿಯ ರಕ್ಷಣೆಯನ್ನು ನಾನು ಮಾಡುವೆನು ಎಂದು ಅವಳಿಗೆ ವಚನ ನೀಡಿದನು. ಆದುದರಿಂದಲೇ ಆ ದಿನ ಪ್ರತಿಯೊಬ್ಬ ಸ್ತ್ರೀಯು ನಾಗನ ಪೂಜೆ ಮಾಡಿ ನಾಗರಪಂಚಮಿಯನ್ನು ಆಚರಿಸುತ್ತಾಳೆ.

**ನಾಗನ ಮಹಾತ್ಮೆ:** ಶೇಷನಾಗನು ಪಾತಾಳ ದಲ್ಲಿ ವಾಸಿಸುತ್ತಾನೆ. ಅವನು ತನ್ನ ಹೆಡೆಯ ಮೇಲೆ ಪೃಥ್ವಿಯನ್ನು ಧರಿಸಿದ್ದಾನೆ. ಅವನಿಗೆ ಸಹಸ್ರ ಹೆಡೆಗಳಿವೆ. ಪ್ರತಿಯೊಂದು ಹೆಡೆಯ ಮೇಲೆ ಒಂದು ವಜ್ರವಿದೆ. ಅವನು ಶ್ರೀವಿಷ್ಣುವಿನ ತಮೋಗುಣದಿಂದ ಉತ್ಪನ್ನವಾಗಿದ್ದಾನೆ. ಪ್ರತಿಯೊಂದು ಕಲ್ಪದ ಅಂತ್ಯದಲ್ಲಿ ಶ್ರೀವಿಷ್ಣು ಮಹಾಸಾಗರದಲ್ಲಿ ಶೇಷಾಸನದ ಮೇಲೆ ಶಯನ ಮಾಡುತ್ತಾನೆ. ತ್ರೇತಾಯುಗದಲ್ಲಿ ಶ್ರೀವಿಷ್ಣು ರಾಮನ ಅವತಾರವನ್ನು ತೆಗೆದುಕೊಂಡಾಗ ಶೇಷನು ಲಕ್ಷ್ಮಣನ ಅವತಾರವನ್ನು ತೆಗೆದು ಕೊಂಡಿದ್ದನು. ದ್ವಾಪರ ಮತ್ತು ಕಲಿಯುಗದ ಸಂಧಿಕಾಲದಲ್ಲಿ ಕೃಷ್ಣನ ಅವತಾರವಾದಾಗ ಶೇಷನು ಬಲರಾಮನಾಗಿದ್ದನು. ಶ್ರೀಕೃಷ್ಣನು ಯಮುನಾ ನದಿಯ ಆಳದಲ್ಲಿದ್ದ ಕಾಲಿಯಾ ನಾಗನನ್ನು ಮರ್ದನ ಮಾಡಿದನು. ಆ ದಿನವು ಶ್ರಾವಣ ಶುಕ್ಲ ಪಂಚಮಿಯಾಗಿತು ನಾಗಗಳಲ್ಲಿನ ಶ್ರೇಷ್ಠನಾದ ಅನಂತನೇ ನಾನು ಎಂದು ಗೀತೆಯಲ್ಲಿ (10.29) ಶ್ರೀಕೃಷ್ಣ ತನ್ನ ವಿಭೂತಿಯನ್ನು ಹೇಳುತ್ತಾನೆ. ಅನಂತಂ ವಾಸುಕಿಂ ಶೇಷಂ ಪದ್ಮನಾಭಂ ಚ ಕಂಬಲಮ್ ಶಂಖಪಾಲಂ ಧೃತರಾಷ್ಟ್ರಂ ತಕ್ಷಕಂ, ಕಾಲಿಯಂ ತಥಾ ಅನಂತ, ವಾಸುಕೀ, ಶೇಷ, ಪದ್ಮನಾಭ, ಕಂಬಲ, ಶಂಖಪಾಲ, ಧೃತರಾಷ್ಟ್ರ, ತಕ್ಷಕ ಮತ್ತು ಕಾಲಿಯಾ ಹೀಗೆ ಒಂಭತ್ತು ಜಾತಿಯ ನಾಗಗಳ ಆರಾಧನೆಯನ್ನು ಮಾಡುತ್ತಾರೆ. ಇದರಿಂದ ಸರ್ಪಭಯವಿರುವುದಿಲ್ಲ ಮತ್ತು ವಿಷದಿಂದ ತೊಂದರೆಯಾಗುವುದಿಲ್ಲ.'

**ನಿಷೇಧ :** ನಾಗರಪಂಚಮಿಯ ದಿನ ಏನನ್ನೂ ಹೆಚ್ಚಬಾರದು, ಕೊಯ್ಯಬಾರದು, ಕರಿಯಬಾರದು, ಒಲೆಯ ಮೇಲೆ ತವೆಯನ್ನು ಇಡಬಾರದು ಮುಂತಾದ ನಿಯಮಗಳನ್ನು ಪಾಲಿಸಬೇಕು. ಈ ದಿನ ಭೂಮಿಯನ್ನು ಅಗೆಯಬಾರದು.

# ಹಂಚಿಕೊಳ್ಳದೆ ಇರೋಣ



ಸಾಮಾಜಿಕ ಕಳಕಳಿ

**ಹೆಚ್.ಎಸ್. ಪ್ರತಿಮಾ**
ಲೇಖಕರು
ಸಾಮಾಜಿಕ ಚಿಂತಕಿ ಹಾಗೂ ಶಿಕ್ಷಕಿ, ಹಾಸನ

• ಉದಯವಾಹಿನಿ, ವಿಶೇಷ

ಮೌನಿಯಾಗಿ ನಾವು ಬಾಳೋಣ
ಜೀವನದ ರಹಸ್ಯ ಯಾರೊಂದಿಗೂ
ನೋವನು ಹಂಚಿಕೊಳ್ಳದೆ ಸುಮ್ಮನಿರೋಣ
ಬಾಳು ಒಡೆದ ಮಡಕೆಯಾಗದೆ
ನಡೆಯೋಣ......
ವಿಶ್ವಾಸ,ಪ್ರೀತಿಯಲಿ ಜೊತೆಯಾಗಿರೋಣ
ಆದರೆ ಒಳ್ಳೆ ಕೆಲಸ ಮಾಡೋಣ
ಇಲ್ಲದಿದ್ದರೆ ಸುಮ್ಮನೆ ಇರೋಣ
ಯಾರಿಗೂ ತೊಂದರೆ ನೀಡದೆ ಸಾಗೋಣ ..
ಜೀವನ ಸಾಗರವ ಸಾರ್ಥಕವಾಗಿಸೋಣ
ಕಷ್ಟ ಸುಖವ ಜೊತೆ ಸೇರಿ ಆಲಿಸೋಣ
ಆದಷ್ಟು ಕೈಲಾದ ಸಹಾಯ ಮಾಡೋಣ
ಬದುಕು ಕ್ಷಣಿಕ ಎಂದು ತಿಳಿಯೋಣ.....
ದಿನನಿತ್ಯ ಗೋಜಲುಗಳೇ ಹೆಚ್ಚು ಅರಿಯೋಣ
ಧ್ಯಾನವನು ಮಾಡುತಲಿ ನಡೆಯೋಣ
ಮಾತುಗಳು ಹಿತವಿರಲು ಸಂತಸದಿ
ನಗುತಿರೋಣ
ಬಾಳಿನಲಿ ಒಳಿತಿಹುದು ಸ್ನೇಹದಿ ಎನ್ನೋಣ
ಕಷ್ಟ ಸುಖವ ಹೇಳಿದರೆ ನಗುವರು ಎಲ್ಲಾ
ಹಣಕಿಸುತ ನಡೆವರು ಅವರಿವರ ಬಳಿ ಮೆಲ್ಲ
ಮೌನಿಯಾಗಿ ಇರುವುದ ಕಲಿತೆ ಇಲ್ಲ
ಸಾಕಾಗಿ ಹೋಗಿದೆ ಜೀವಿಸಲು
ಬಿಡುವುದಿಲ್ಲ......

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 01:30 ರಿಂದ 03:00 |
| ಗುಳಿಕ ಕಾಲ | ಬೆಳಿಗ್ಗೆ | 09:00 ರಿಂದ 10:30 |
| ಯಮಗಂಡ ಕಾಲ | ಬೆಳಿಗ್ಗೆ | 06:00 ರಿಂದ 07:30 |

**ಮೇಷ** ಗಾಳಿಗೊಡ್ಡಿದ ಆಹಾರ ನಿಮಗೆ ಅನಾರೋಗ್ಯ ತರಬಹುದಾದ್ದರಿಂದ ಅವುಗಳನ್ನು ತಿನ್ನಬೇಡಿ. ಹಣಕಾಸಿನಲ್ಲಿ ಸುಧಾರಣೆ ನಿಶ್ಚಿತ. ನಿಮ್ಮ ಹತ್ತಿರದ ಜನರು ವೈಯಕ್ತಿಕ ಮಟ್ಟದಲ್ಲಿ ನಿಮಗೆ ಸಮಸ್ಯೆಗಳನ್ನು ಸೃಷ್ಟಿಸುತ್ತಾರೆ.

**ವೃಷಭ** ಯೋಗ ಮತ್ತು ಧ್ಯಾನ ನೀವು ಒಳ್ಳೆಯ ದೇಹರಚನೆ ಕಾಯ್ದುಕೊಳ್ಳಲು ಮತ್ತು ಮಾನಸಿಕವಾಗಿ ಸದೃಢವಾಗಿರಲು ಸಹಾಯ ಮಾಡುತ್ತದೆ. ಆರ್ಥಿಕ ಜೀವನದ ಸ್ಥಿತಿ ಇಂದು ಉತ್ತಮವಾಗಿದೆ ಎಂದು ಹೇಳಲಾಗುವುದಿಲ್ಲ.

**ಮಿಥುನ** ನಿಮ್ಮ ಸಂಬಂಧದ ಆ ಎಲ್ಲಾ ದೂರುಗಳು ಮತ್ತು ದ್ವೇಷಗಳು ಈ ಅದ್ಭುತವಾದ ದಿನದಂದು ಕಣ್ಮರೆಯಾಗುತ್ತವೆ. ಇತರ ದೇಶಗಳಲ್ಲಿ ವೃತ್ತಿಪರ ಸಂಪರ್ಕಗಳನ್ನು ಅಭಿವೃದ್ಧಿಪಡಿಸಲು ಇದು ಉತ್ತಮ ಸಮಯ.

**ಕರ್ಕಾಟಕ** ಇತ್ತೀಚೆಗೆ ನಿಮ್ಮಲ್ಲಿ ಕೆಲವರು ಓವರ್‌ಟೈಮ್ ಮಾಡುತ್ತಿರುತ್ತಾರೆ ಹಾಗೂ ನಿಮ್ಮ ಚೈತನ್ಯ ಉಡುಗುತ್ತಿರುತ್ತದೆ– ಇಂದು ನೀವು ಒತ್ತಡ ಹಾಗೂ ಸಂದಿಗ್ಧತೆಯನ್ನು ಬಯಸುವುದಿಲ್ಲ.

**ಸಿಂಹ** ಒಂದು ಕಠಿಣ ಸಮಯದ ನಂತರ, ಕೆಲಸದಲ್ಲಿ ಏನಾದರೂ ಸುಂದರವಾದ್ದರಿಂದ ಈ ದಿನ ನಿಮಗೆ ಆಶ್ಚರ್ಯವನ್ನುಂಟು ಮಾಡುತ್ತದೆ. ಸಂವಹನವನ್ನು ಜಾಗರೂಕತೆಯಿಂದ ನಿಭಾಯಿಸಬೇಕು.

**ಕನ್ಯಾ** ನಿಮ್ಮ ಮನಸ್ಸು ಒಳ್ಳೆಯ ವಿಷಯಗಳನ್ನು ಗ್ರಹಿಸುತ್ತದೆ. ಸಂಬಂಧಿಕರಿಂದ ಹಣದ ಸಾಲವನ್ನು ತೆಗೆದುಕೊಂಡಿರುವ ಜನರು, ಯಾವುದೇ ಪರಿಸ್ಥಿತಿಯಲ್ಲಿಯೂ ಸಾಲವನ್ನು ಮರುಪಾವತಿ ಮಾಡಬೇಕಾಗುತ್ತದೆ

**ತುಲಾ** ಫಿಟ್ ನೆಸ್ ಮತ್ತು ತೂಕ ನಷ್ಟ ಕಾರ್ಯಕ್ರಮಗಳು ನೀವು ಒಳ್ಳೆಯ ದೇಹರಚನೆ ಹೊಂದಲು ಸಹಾಯ ಮಾಡುತ್ತದೆ. ದುಂದುಗಾರಿಕೆ ಮತ್ತು ಸಂಶಯಾಸ್ಪದವಾದ ಹಣಕಾಸು ಯೋಜನೆಗಳನ್ನು ತಪ್ಪಿಸಿ.

**ವೃಶ್ಚಿಕ** ಆಶಾವಾದಿಗಳಾಗಿರಿ ಮತ್ತು ಜೀವನದ ಉಜ್ವಲ ಬದಿಯನ್ನು ನೋಡಿ. ನಿಮ್ಮ ಆತ್ಮವಿಶ್ವಾಸಭರಿತ ನಿರೀಕ್ಷೆಗಳು ನಿಮ್ಮ ಭರವಸೆಗಳು ಮತ್ತು ಆಸೆಗಳನ್ನು ಸಾಕ್ಷಾತ್ಕಾರಗೊಳಿಸಲು ಸಹಾಯ ಮಾಡುತ್ತವೆ.

**ಧನಸ್ಸು** ಮನೆಯಲ್ಲಿ ಯಾವುದೇ ಬದಲಾವಣೆ ಮಾಡುವ ಮುನ್ನ ನಿಮ್ಮ ಹಿರಿಯರ ಸಲಹೆ ತೆಗೆದುಕೊಳ್ಳಿ ಇಲ್ಲವಾದರೆ ಅದು ಅವರಿಗೆ ಕೋಪ ಮತ್ತು ಅಸಮಾಧಾನವನ್ನು ತರಬಹುದು.

**ಮಕರ** ಕುಟುಂಬದ ವೈದ್ಯಕೀಯ ವೆಚ್ಚದಲ್ಲಿ ಹೆಚ್ಚಳವನ್ನು ತಳ್ಳಿಹಾಕಲು ಸಾಧ್ಯವಿಲ್ಲ. ದೊಡ್ಡ ಗುಂಪಿನಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳುವುದು ಅತ್ಯಂತ ಮನರಂಜನಾತ್ಮಕವಾಗಿರುತ್ತದೆ– ಆದರೆ ನಿಮ್ಮ ವೆಚ್ಚಗಳು ಹೆಚ್ಚಾಗುತ್ತವೆ.

**ಕುಂಭ** ಮಕ್ಕಳ ಜೊತೆಗಿನ ನಿಮ್ಮ ಕಠಿಣ ವರ್ತನೆ ನಿಮಗೆ ಸಿಟ್ಟು ಬರಿಸಬಹುದು. ಇದು ನಿಮ್ಮ ನಡುವೆ ಕೇವಲ ಒಂದು ತಡೆಗೋಡೆಯನ್ನು ಮಾತ್ರ ಸೃಷ್ಟಿಸುವುದರಿಂದ ನೀವು ನಿಮ್ಮ ಮೇಲೆ ನಿಯಂತ್ರಣ ಹೊಂದಿರಬೇಕು.

**ಮೀನ** ತನ್ನ ಪ್ರೀತಿಪಾತ್ರರಿಂದ ದೂರವಿರುವ ಜನರು, ಇಂದು ಅವರ ಪ್ರೀತಿ ಪಾತ್ರರನ್ನು ನೆನಪಿಸಿಕೊಳ್ಳಬಹುದು. ರಾತ್ರಿಯ ಸಮಯದಲ್ಲಿ ನೀವು ಪ್ರೇಮಿಯೊಂದಿಗೆ ಫೋನ್‌ನಲ್ಲಿ ಗಂಟೆಗಟ್ಟಲೆ ಮಾತನಾಡಬಹುದು.

# ಮೃತ ಪಿಎಸ್‌ಐ ಕುಟುಂಬಕ್ಕೆ 50 ಲಕ್ಷ ರೂ. ಪರಿಹಾರ ಘೋಷಣೆ

## ಪರಶುರಾಮ ಪತ್ನಿ ಬಿಇ ವ್ಯಾಸಂಗ ಮಾಡಿದ್ದು, ಇಲಾಖೆಯಲ್ಲಿ ಸೂಕ್ತವಾದ ಉದ್ಯೋಗವನ್ನು ನೀಡುತ್ತೇವೆ: ಡಾ.ಜಿ.ಪರಮೇಶ್ವರ

• ಉದಯವಾಹಿನಿ ಕೊಪ್ಪಳ

ಪಿಎಸ್‌ಐ ಪರಶುರಾಮ ಅವರ ಆತ್ಮಹತ್ಯೆ, ಯಾದಗಿರಿಯಲ್ಲಿ ನಿಗೂಢವಾಗಿ ಮೃತಪಟ್ಟಿದ್ದರು. ಈ ಪ್ರಕರಣ ರಾಜ್ಯ ರಾಜಕೀಯದಲ್ಲಿ ಸಂಚಲನ ಸೃಷ್ಟಿಸಿದೆ. ಇದರ ಬೆನ್ನಲ್ಲೆ ಮೃತರ ನಿವಾಸಕ್ಕೆ ಬುಧವಾರ ಗೃಹ ಸಚಿವ ಡಾ.ಜಿ.ಪರಮೇಶ್ವರ ಅವರು ಭೇಟಿ ನೀಡಿ, ಕುಟುಂಬಸ್ಥರಿಗೆ ಸಾಂತ್ವಾನ ಹೇಳಿದರು.

ಅಲ್ಲದೇ ಈ ಸಾವಿಗೆ ಸೂಕ್ತ ನ್ಯಾಯ ಕೊಡಿಸುವುದಾಗಿ ಅವರು ಕುಟುಂಬಸ್ಥರಿಗೆ ಭರವಸೆ ನೀಡಿದರು. ಜಿಲ್ಲೆಯ ಕಾರಟಗಿಯ ಸೋಮನಾಳ ಗ್ರಾಮದಲ್ಲಿರುವ ನಿವಾಸದಲ್ಲಿ ಒಂದು ತಾಸಿಗು ಹೆಚ್ಚು ಕಾಲ ಸಚಿವರು ಪರಶುರಾಮ ಅವರ ಕುಟುಂಬದವರೊಂದಿಗೆ ಚರ್ಚಿಸಿದರು. ಪರಶುರಾಮ್ ಪತ್ನಿಗೆ ಸೂಕ್ತವಾದ ಕೆಲಸ ನೀಡಲಾಗುವುದು ಎಂದು ಭೇಟಿ ವೇಳೆ ಸುದ್ದಿಗಾರರ ಹಲವು ಪ್ರಶ್ನೆಗಳಿಗೆ ಉತ್ತರಿಸಿದರು.

ಪ್ರಾಮಾಣಿಕ ಪೊಲೀಸ್ ಅಧಿಕಾರಿ ಮೃತಪಟ್ಟಿದ್ದಾರೆ. ಈ ಸಂಬಂಧ ತನಿಖೆ ನಡೆಯುತ್ತಿದ್ದು, ಮರಣೋತ್ತರ ಪರೀಕ್ಷೆಯ ವರದಿಗೆ ನಿರೀಕ್ಷೆ ಮಾಡಲಾಗುತ್ತಿದೆ. ಎಫ್‌ಎಸ್‌ಎಲ್‌ನವರು ಪರಿ ಶೀಲನೆ ನಡೆಸಿ, ಸ್ಯಾಂಪಲ್ಸ್ ಸಂಗ್ರಹಿಸಿದ್ದಾರೆ.

ಇಲಾಖೆಯ ಪ್ರಾಮಾಣಿಕ ಅಧಿಕಾರಿಯನ್ನು ಕಳೆದುಕೊಂಡಿದ್ದಕ್ಕೆ ನೋವಾಗುತ್ತಿದೆ ಎಂದು ಸಚಿವರು ವಿಷಾದ ವ್ಯಕ್ತಪಡಿಸಿದರು. ಪಿಎಸ್‌ಐ ಪರಶುರಾಮ ಅವರ ಕುಟುಂಬಕ್ಕೆ ಸಾಂತ್ವಾನ ಹೇಳುವುದು ನಮ್ಮ ಧರ್ಮ, ಕರ್ತವ್ಯವಾಗಿದ್ದು, ಪರಶುರಾಮ ತನ್ನ ಕುಟುಂಬದವರಿಗೆ ಎಲ್ಲವೂ ಆಗಿದ್ದ. ಎಲ್ಲಾ ಜವಾಬ್ದಾರಿಗಳನ್ನು ಹೊತ್ತು ನೋಡಿಕೊಳ್ಳುತ್ತಿದ್ದ ಎಂಬುದನ್ನು ಆತನ ಸಹೋದರ ಹನುಮಂತ ಅವರಿಂದ ತಿಳಿದುಕೊಂಡಿದ್ದೇನೆ.

ಕುಟುಂಬ ಸಂಕಷ್ಟವಲ್ಲದೆ, ಬೀದಿಗೆ ತಳ್ಳಿದಂತಾಗಿದೆ. ಕಠಿಣ ಪರಿಶ್ರಮದಿಂದ ಎಂಟು ಪರೀಕ್ಷೆಗಳನ್ನು ಪಾಸ್ ಮಾಡಿ, ಪಿಎಸ್‌ಐ ಉದ್ಯೋಗವನ್ನು ಆಯ್ಕೆ ಮಾಡಿಕೊಂಡಿದ್ದ. ಇಂತಹ ಅಧಿಕಾರಿಯನ್ನು ಕಳೆದುಕೊಂಡಿರುವುದು ನಮಗೂ ನಷ್ಟವಾಗಿದೆ ಎಂದು ಅವರು ಬೇಸರ ವ್ಯಕ್ತಪಡಿಸಿದರು. ಪ್ರಕರಣವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ಪರಶುರಾಮ ಅವರ ಪತ್ನಿ ಬಿಇ ವ್ಯಾಸಂಗ ಮಾಡಿದ್ದು, ಇಲಾಖೆಯಲ್ಲಿ ಸೂಕ್ತವಾದ ಉದ್ಯೋಗವನ್ನು ನೀಡುತ್ತೇವೆ. ರಾಯಚೂರು ಕೃಷಿ ವಿಶ್ವವಿದ್ಯಾಲಯ ಅಥವಾ ಜೆಸ್ಕಾಂನಲ್ಲಿ ವ್ಯಾಸಂಗಕ್ಕೆ ಸೂಕ್ತವಾದ ಉದ್ಯೋಗ ಕಲ್ಪಿಸುವಂತೆ ಕುಟುಂಬಸ್ಥರು ಮನವಿ ಮಾಡಿದ್ದಾರೆ. ಬೇರೆ ಇಲಾಖೆಯಲ್ಲಿ ಉದ್ಯೋಗ ಕೋರಿರುವುದರಿಂದ ಮುಖ್ಯಮಂತ್ರಿಯವರು ನಿರ್ಧಾರ ತೆಗೆದುಕೊಳ್ಳಬೇಕು.

ಈ ವಿಚಾರವನ್ನು ಮುಖ್ಯಮಂತ್ರಿಯವರೊಂದಿಗೆ ಚರ್ಚಿಸುವುದಾಗಿ ಹೇಳಿದರು. ತನಿಖೆ ವೇಳೆ ಸ್ಥಳೀಯ ಪೊಲೀಸರ ಮೇಲೆ ಒತ್ತಡ ಬರಬಾರದು ಎಂಬ ಉದ್ದೇಶದಿಂದ. ನ್ಯಾಯ ಸಿಗುತ್ತದೆಯೋ ಇಲ್ಲವೋ ಎಂಬ ಅನುಮಾನ ವ್ಯಕ್ತವಾಗಬಾರದು ಎಂಬ ನಿಟ್ಟಿನಲ್ಲಿ ಪ್ರಕರಣದ ತನಿಖೆಯನ್ನು ಸಿಐಡಿಗೆ ವಹಿಸಲಾಗಿದೆ. ವರದಿ ಆಧರಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು. ಪ್ರಕರಣದ ತನಿಖೆಯನ್ನು ಸಿಬಿಐಗೆ ವಹಿಸುವಂತೆ ಕುಟುಂಬದವರು ಹೇಳಿರುವುದು ನಿಜ. ಸಿಬಿಐಗೆ ವಹಿಸುವ ಅವಶ್ಯಕತೆ ಇಲ್ಲ. ಈ ಬಗ್ಗೆ ಕುಟುಂಬಸ್ಥರಿಗೆ ಮನವರಿಕೆ ಮಾಡುತ್ತೇವೆ. ಮನೆಯವರು ಏನು ದೂರು ಕೊಟ್ಟಿದ್ದಾರೆ ಅದನ್ನು ಆಧರಿಸಿ ಕ್ರಮ ತೆಗೆದುಕೊಳ್ಳುತ್ತೇವೆ. ನ್ಯಾಯ ಒದಗಿಸಿಕೊಡುತ್ತೇವೆ.

ಪಿಎಸ್‌ಐ ವರ್ಗಾವಣೆ ಐಜಿ ಹಂತದಲ್ಲಿ ನಡೆಯುತ್ತದೆ. ಏಳು ತಿಂಗಳಲ್ಲಿ ಯಾಕೆ ವರ್ಗಾವಣೆಯಾಗಿದೆ ಎಂಬುದನ್ನು ಸಿಐಡಿ ತನಿಖೆಯಲ್ಲಿ ಹೊರ ಬರುತ್ತದೆ ಎಂದರು. ಇಲಾಖೆಯಲ್ಲಿ ಸಮರ್ಥ ಅಧಿಕಾರಿಗಳಿದ್ದಾರೆ. ಆಪಾದನೆಗಳು ಬರಬಾರದು ಎಂಬ ನಿಟ್ಟಿನಲ್ಲಿ ಸಿಐಡಿಗೆ ವಹಿಸಲಾಗಿದೆ. ಜಾತಿ ಆಧಾರದ ಮೇಲೆ ಪೋಸ್ಟಿಂಗ್ಸ್ ನೀಡುವುದಿಲ್ಲ. ಇದಕ್ಕೆ ಕಾನೂನಿನಲ್ಲಿ ಅವಕಾಶ ಇಲ್ಲ ಎಂದು ಸ್ಪಷ್ಟನೆ ನೀಡಿದರು

ವಿರೋಧ ಪಕ್ಷದವರಿಂದ ಪಾಠ ಕಲಿಯಬೇಕಿಲ್ಲ. ಛಲವಾದಿ ನಾರಾಯಣಸ್ವಾಮಿ ಈಗತಾನೇ ವಿಧಾನ ಪರಿಷತ್‌ನ ವಿಪಕ್ಷ ನಾಯಕರಾಗಿದ್ದಾರೆ. ಇನ್ನಷ್ಟು ಚೆನ್ನಾಗಿ ತಿಳಿದುಕೊಂಡ ನಂತರ ಮಾತನಾಡಲಿ.

ಯಡಿಯೂರಪ್ಪ ಸಿಎಂ ಆಗಿದ್ದಾಗ ಸಿಬಿಐಗೆ ಚೋರ್ ಬಚಾವೋ ಎಂದು ಆರೋಪಿಸಿದ್ದರು. ಬಸವರಾಜ ಬೊಮ್ಮಾಯಿ, ಅರಗ ಜ್ಞಾನೇಂದ್ರ ಗೃಹ ಸಚಿವರಾಗಿದ್ದಾಗ ನಡೆದ ಪ್ರಕರಣಗಳನ್ನು ಸಿಬಿಐಗೆ ಏಕೆ ವಹಿಸಲಿಲ್ಲ? ಅವರು ಪ್ರಶ್ನಿಸಿದರು.

> ಪರಶುರಾಮ ಕೆಲಸಕ್ಕೆ ಸೇರಿದ ಏಳು ವರ್ಷದಲ್ಲಿಯೇ ಮೃತನಾಗಿದ್ದಾನೆ. ಡಿವೈಎಸ್‌ಪಿ ಹಂತದವರೆಗೆ ಹೋಗುತ್ತಿದ್ದ. ಸರ್ಕಾರದಿಂದ ಕುಟುಂಬಕ್ಕೆ 50 ಲಕ್ಷ ರೂ. ಪರಿಹಾರವನ್ನು ಕಲ್ಪಿಸಲಾಗುವುದು ಎಂದು ತಿಳಿಸಿದರು. ಅಲ್ಲಿನ ಶಾಸಕ ಮತ್ತು ಪುತ್ರ, ಪರಶುರಾಮ ಅವರ ಬಳಿ ಹಣಕ್ಕೆ ಒತ್ತಾಯಿಸಿದ್ದರು ಎಂದು ಕುಟುಂಬಸ್ಥರು ಆಪಾದನೆ ಮಾಡಿದ್ದಾರೆ. ಈ ಕುರಿತು ಘಟನೆಯಾದ ದಿನವೇ ಪ್ರಕರಣ ದಾಖಲಿಸಿ, ತನಿಖೆಯನ್ನು ಸಿಐಡಿಗೆ ವಹಿಸಲಾಗಿದೆ. –ಡಾ.ಜಿ.ಪರಮೇಶ್ವರ


ಉದಯವಾಹಿನಿ ಚಿತ್ರ

**ನೀರು ಹರಿಯಲು ತೊಂದರೆ**

ಇಲಾಖೆಯಲ್ಲಿ ಹಣ ಪಡೆದು ವರ್ಗಾವಣೆ ಮಾಡುವುದಿಲ್ಲ.ನಮ್ಮ ಹಂತದಲ್ಲಿ ಈ ರೀತಿ ನಡೆಯುವುದಿಲ್ಲ. ಈ ರೀತಿಯ ಆರೋಪಗಳಿರುವುದರಿಂದ ಪ್ರತಿ ವರ್ಷ ವರ್ಗಾವಣೆಯಾಗದಂತೆ ತಡೆಯಲು, ಪಿಎಸ್‌ಐ ಹುದ್ದೆಯಿಂದ ಎಸ್‌ಪಿ ಹುದ್ದೆವರೆಗು ವರ್ಗಾವಣೆ ಅವಧಿಯನ್ನು ಎರಡು ವರ್ಷಕ್ಕೆ ಹೆಚ್ಚಿಸಲಾಗಿದೆ ಎಂದು ಪ್ರಶ್ನೆಯೊಂದಕ್ಕೆ ಅವರು ಉತ್ತರಿಸಿದರು.

**ಸಾಂತ್ವಾನ ಹೇಳುವುದು ನಮ್ಮ ಧರ್ಮ**

## ಅಂಚೆ ಸೇವೆಯಲ್ಲಿ ಬಳ್ಳಾರಿ ವಿಭಾಗಕ್ಕೆ 15 ರಾಜ್ಯ ಪ್ರಶಸ್ತಿಗಳು: ಚಿದಾನಂದ

• ಉದಯವಾಹಿನಿ ಬಳ್ಳಾರಿ

ಭಾರತೀಯ ಅಂಚೆ ಇಲಾಖೆಯು 2023–24ನೆ ಅರ್ಥಿಕ ವರ್ಷದಲ್ಲಿ ಹಮ್ಮಿಕೊಂಡ ಹಲವು ಕಾರ್ಯಕ್ರಮಗಳನ್ನು ಜಾರಿಗೊಳಿಸುವಲ್ಲಿ ಬಳ್ಳಾರಿ ಅಂಚೆ ವಿಭಾಗವು ಸಾರ್ವಜನಿಕರಿಗೆ ಅತ್ಯುತ್ತಮವಾಗಿ ಸೇವೆಯನ್ನು ನೀಡಿರುತ್ತದೆ, ಪ್ರತಿಫಲವಾಗಿ ಭಾರತೀಯ ಅಂಚೆ ಇಲಾಖೆ ಕೊಡ ಮಾಡುವ ಪ್ರಶಸ್ತಿಗಳಲ್ಲಿ ಬಳ್ಳಾರಿ ವಿಭಾಗ 15 ಪ್ರಶಸ್ತಿಗಳನ್ನು ಪಡೆದುಕೊಂಡಿದೆ ಎಂದು ಅಂಚೆ ಇಲಾಖೆಯ ಜಿಲ್ಲಾ ಅಧೀಕ್ಷಕರಾದ ಚಿದಾನಂದ ತಿಳಿಸಿದ್ದಾರೆ.

ಜುಲೈ 30 ರಂದು ಚಿಕ್ಕಬಳ್ಳಾಪುರದ ಡಿಸ್ಕವರಿ ವಿಲೇಜ್ ರೆಸಾರ್ಟ್‌ನಲ್ಲಿ ಹಮ್ಮಿಕೊಂಡಿದ್ದ ಕರ್ನಾಟಕ ವೃತ್ತ ಮಟ್ಟದ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಬಳ್ಳಾರಿ ಅಂಚೆ ವಿಭಾಗವು ತನ್ನ ಅತ್ಯುತ್ತಮ ಸೇವೆಗಾಗಿ ರಾಜ್ಯಮಟ್ಟದ 15 ಪ್ರಶಸ್ತಿಗಳನ್ನು ಪಡೆದು ರಾಜ್ಯದಲ್ಲಿಯೇ ಅತಿಹೆಚ್ಚು ಪ್ರಸಸ್ತಿ ಪಡೆದ ವಿಭಾಗವಾಗಿ ಹೊರಹೊಮ್ಮಿದೆ. ಉಪ ವಿಭಾಗ ಮಟ್ಟದಲ್ಲಿ ಬಳ್ಳಾರಿ, ಹೊಸಪೇಟೆ , ಕೂಡ್ಲಿಗಿ ಉಪವಿಭಾಗಗಳು , ಪ್ರಧಾನ ಅಂಚೆ ಕಚೇರಿ ಮಟ್ಟದಲ್ಲಿ ಬಳ್ಳಾರಿ , ಹೊಸಪೇಟೆ ಪ್ರಧಾನ ಅಂಚೆ ಕಛೇರಿಗಳು ,ಉಪ ಅಂಚೆ ಕಛೇರಿಗಳ ಮಟ್ಟದಲ್ಲಿ ಸಿರುಗುಪ್ಪ , ಕೂಡ್ಲಿಗಿ, ಅರಸೀಕೆರೆ ಉಪ ಅಂಚೆ ಕಛೇರಿಗಳು ಮತ್ತು ಶಾಖಾ ಅಂಚೆ ಕಚೇರಿ ಮಟ್ಟದಲ್ಲಿ ಮಾದಿಹಳ್ಳಿ ರಾಜ್ಯದಲ್ಲೇ ಉತ್ತಮ ಪ್ರದರ್ಶನ ನೀಡಿ ರಾಜ್ಯ ಪ್ರಶಸ್ತಿ ಪಡೆದಿವೆ ಜೊತೆಗೆ ವೈಯಕ್ತಿಕ ವಿಭಾಗದಲ್ಲಿ ಬಳ್ಳಾರಿ ಪ್ರಧಾನ ಅಂಚೆ ಕಚೇರಿಯ ಶಾಂತಮ್ಮ IPPB ಯಲ್ಲಿ ಮೂರು ರಾಜ್ಯ ಪ್ರಶಸ್ತಿಗಳಿಗೆ ಭಾಜನರಾಗಿದ್ದಾರೆ.



ಉದಯವಾಹಿನಿ ಚಿತ್ರ

**ಕರ್ನಾಟಕ ವೃತ್ತ ಮಟ್ಟದ ಪ್ರಶಸ್ತಿ ಪ್ರಧಾನ**

ಪ್ರಧಾನ ಮಂತ್ರಿ ಜನ ಸುರಕ್ಷಾ ಯೋಜನೆಗಳ ಅನುಷ್ಠಾನ, ಹೊಸ ಅಂಚೆ ಉಳಿತಾಯ ಖಾತೆಗಳನ್ನು ತೆರೆಯುವ ಮತ್ತು ಇಂಡಿಯಾ ಪೋಸ್ಟ್ ಪೇಮೆಂಟ್ ಬ್ಯಾಂಕಿನ ಸೇವೆಗಳನ್ನು ಜನರ ಮನೆಬಾಗಿಲಿಗೆ ತಲುಪಿಸುವಲ್ಲಿ ಬಳ್ಳಾರಿ ವಿಭಾಗದ ಅಂಚೆ ಸಿಬ್ಬಂದಿ ಉತ್ತಮವಾಗಿ ಕಾರ್ಯನಿರ್ವಹಿಸಿದ ಸಲುವಾಗಿ ಸಲುವಾಗಿ ಬಳ್ಳಾರಿ ಅಂಚೆ ವಿಭಾಗ ಈ ಪ್ರಶಸ್ತಿಗಳನ್ನು ಪಡೆದುಕೊಳ್ಳಲು ಸಾಧ್ಯವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು. ಇದರ ಎಲ್ಲಾ ಶ್ರೇಯಸ್ ವಿಜಯನಗರ ಮತ್ತು ಬಳ್ಳಾರಿ ಜಿಲ್ಲೆಯ ಸಮಸ್ತ ಅಂಚೆ ಸಿಬ್ಬಂದಿಗೆ ಸಲ್ಲುತ್ತದೆ ಎಂದು ಅಂಚೆ ಅಧೀಕ್ಷಕರು ಸಿಬ್ಬಂದಿಗಳನ್ನು ಅಭಿನಂದಿಸಿದರು.

ಅಂಚೆ ಇಲಾಖೆಯ ಉಳಿತಾಯ ಯೋಜನೆಗಳು, ವಿಮಾ ಯೋಜನೆಗಳು, ಮನೆಬಾಗಿಲಿಗೆ DBT ಆಯ್ಕೆಗಳು ಮತ್ತು ಪತ್ರವ್ಯವಹಾರಗಳು ಕಟ್ಟ ಕಡೆಯ ಪ್ರತಿ ನಾಗರಿಕನಿಗೂ ಸುಬಧ್ರತೆ ಮೂಡಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿವೆ ಜನ ಸಾಮಾನ್ಯರಿಗೆ ಅಂಚೆ ಇಲಾಖೆಯ ಸೇವೆಗಳು ಅತ್ಯಂತ ವಿಶ್ವಾಸ ಅರ್ಹತೆ ಪಡೆದುಕೊಂಡಿವೆ ಕಾರಣ ಸಾರ್ವಜನಿಕರ ಸೇವೆಗಾಗಿ ಇಲಾಖೆ ಸದಾ ಸನ್ನದ್ದ ವಿದೆ ಎಂದು ಅವರು ತಿಳಿಸಿದರು.

## ಶ್ರೀಕೃಷ್ಣ ಜಯಂತಿ: ಅದ್ದೂರಿ ಆಚರಣೆಗೆ ನಿರ್ಧಾರ

• ಉದಯವಾಹಿನಿ, ಚಿತ್ರದುರ್ಗ

ಜಿಲ್ಲಾಡಳಿತದ ವತಿಯಿಂದ ಇದೇ ಆಗಸ್ಟ್ 26ರಂದು ಜಿಲ್ಲಾ ಕೇಂದ್ರದಲ್ಲಿ ಶ್ರೀಕೃಷ್ಣ ಜಯಂತಿಯನ್ನು ಅದ್ದೂರಿ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಶ್ರೀಕೃಷ್ಣ ಜಯಂತಿ ಆಚರಿಸುವ ಕುರಿತು ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಶ್ರೀ ಕೃಷ್ಣ ಜಯಂತಿಯನ್ನು ಆಗಸ್ಟ್ 26ರಂದು ಮಧ್ಯಾಹ್ನ 12ಕ್ಕೆ ಚಿತ್ರದುರ್ಗ ನಗರದ ಹೊಳಲ್ಕೆರೆ ರಸ್ತೆಯ ಶ್ರೀಕೃಷ್ಣ ವೃತ್ತದ ಸಮೀಪದಲ್ಲಿ ವೇದಿಕೆ ಕಾರ್ಯ ಕ್ರಮ ನಡೆಯಲಿದೆ.

ಸರ್ಕಾರದ ಶಿಷ್ಟಾಚಾ ರದ ಅನುಸಾರ ಆಹ್ವಾನ ಪತ್ರಿಕೆ ಮುದ್ರಿಸಿ, ಜನಪ್ರತಿನಿಧಿಗಳನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಲಾಗುವುದು. ಸಮಾರಂಭದಲ್ಲಿ ಶ್ರೀಕೃಷ್ಣ ಅವರ ಕುರಿತು ಉಪನ್ಯಾಸ ಕಾರ್ಯಕ್ರಮ ಏರ್ಪಡಿಸಲಾಗುವುದು ಎಂದು ತಿಳಿಸಿದರು.


ಉದಯವಾಹಿನಿ ಚಿತ್ರ

ಸಭೆಯಲ್ಲಿ ಜಿಲ್ಲಾ ಯಾದವ ಸಂಘದ ಅಧ್ಯಕ್ಷ ಮೀಸೆ ಮಹಲಿಂಗಪ್ಪ, ಕಾರ್ಯದರ್ಶಿ ಆನಂದಪ್ಪ, ತಹಶೀಲ್ದಾರ್ ಡಾ.ನಾಗವೇಣಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ, ಆಹಾರ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್, ಜಿಲ್ಲಾ ದೈಹಿಕ ಶಿಕ್ಷಣ ಅಧಿಕಾರಿ ಚಿದಾನಂದ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು ಇದ್ದರು.

## ಕಾರ್ಖಾನೆಯಲ್ಲಿ ಭೀಕರ ಅಗ್ನಿ ಅವಘಡ ಓರ್ವ ಸಜೀವ ದಹನ, ಹಲವರಿಗೆ ಗಾಯ

• ಉದಯವಾಹಿನಿ ಬೆಳಗಾವಿ

ಬೆಳಗಾವಿಯ ಫ್ಯಾಕ್ಟರಿಯೊಂದರಲ್ಲಿ ನಡೆದ ಭೀಕರ ಅಗ್ನಿ ಅವಘಡದಲ್ಲಿ ಓರ್ವ ಕಾರ್ಮಿಕ ಸಜೀವ ದಹನವಾಗಿ , ಹಲವಾರು ಕಾರ್ಮಿಕರು ಗಾಯಗೊಂಡಿದ್ದಾರೆ ಎಂದು ತಿಳಿದು ಬಂದಿದೆ. ಬೆಳಗಾವಿಯ ನಾವಗೆಯ ಸ್ನೇಹಂ ಸೆಲೋ ಟೇಪ್ ತಯಾರಿಕಾ ಕಂಪನಿಯಲ್ಲಿ ಅಗ್ನಿ ಅವಘಡ ಸಂಭವಿಸಿದೆ. ಗಾಯಗೊಂಡವರನ್ನು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಸ್ನೇಹಂ ಟೇಪ್ ಮ್ಯಾನುಫ್ಯಾಕ್ಚರಿಂಗ್ ಕಾರ್ಖಾನೆಯ ಲಿಫ್ಟ್‌ನಲ್ಲಿ ಶಾರ್ಟ್ ಸರ್ಕ್ಯೂಟ್ ಆಗಿ ಬೆಂಕಿ ಇಡೀ ಕಾರ್ಖಾನೆಗೆ ಆವರಿಸಿದೆ. ಪರಿಣಾಮ ಲಿಫ್ಟ್‌ನಲ್ಲಿ ಸಿಲುಕಿದ್ದ ಕಾರ್ಮಿಕ ಯಲ್ಲಪ್ಪ ಎಂಬುವವರು ಸಜೀವವಾಗಿ ದಹನವಾಗಿದ್ದಾರೆ. ಸತತ 5 ಗಂಟೆ ಕಾರ್ಯಾಚರಣೆ ನಡೆಸಿ ಫ್ಯಾಕ್ಟರಿಯ ಗೋಡೆ ಒಡೆದು ಅಗ್ನಿಶಾಮಕ ದಳದ ಸಿಬ್ಬಂದಿ ಬೆಂಕಿ ನಂದಿಸಿದ್ದಾರೆ. ಫ್ಯಾಕ್ಟರಿಯಲ್ಲಿ 150 ಕ್ಕೂ ಹೆಚ್ಚು ಜನ ಕೆಲಸ ಮಾಡುತ್ತಿದ್ದು, ಸದ್ಯ ಅದೃಷ್ಟವಶಾತ್ ಪಾರಾಗಿದ್ದಾರೆ. ಆದರೆ ಓರ್ವ ಕಾರ್ಮಿಕ ಯಲ್ಲಪ್ಪ ಬೆಂಕಿಯಲ್ಲಿ ಬೆಂದು ಸಜೀವ ದಹನವಾಗಿದ್ದಾನೆ.

## ಮಧ್ಯರಾತ್ರಿ ಏಕಾಏಕಿ ಕುಸಿದು ಬಿದ್ದ ಸೇತುವೆ

• ಉದಯವಾಹಿನಿ ಕಾರವಾರ

ಉತ್ತರ ಕನ್ನಡ ಜಿಲ್ಲೆ ಕಾರವಾರ ನಗರದ ಕೋಡಿಭಾಗ್‌ನಲ್ಲಿ ಕಾಳಿ ನದಿಗೆ ಅಡ್ಡಲಾಗಿ ನಿರ್ಮಿಸಿರುವ ಸುಮಾರು 60 ವರ್ಷ ಹಳೆಯ ಸೇತುವೆ ಮಧ್ಯರಾತ್ರಿ ಒಂದು ಗಂಟೆ ಸುಮಾರಿಗೆ ಏಕಾಏಕಿ ಕುಸಿದು ಬಿದ್ದಿದೆ.

ಕಾರವಾರ ಮತ್ತು ಗೋವಾ ನಡುವಿನ ರಾಷ್ಟ್ರೀಯ ಹೆದ್ದಾರಿಯಲ್ಲಿ ನಿರ್ಮಿಸಿದ ಸೇತುವೆ ಇದಾಗಿದ್ದು, ಸೇತುವೆ ಕುಸಿತದಿಂದಾಗಿ ವಾಹನ ಸಂಚಾರಕ್ಕೆ ತೊಂದರೆಯಾಗಿದೆ.ರಾಷ್ಟ್ರೀಯ ಹೆದ್ದಾರಿ 66ರ ನಿರ್ಮಾಣದ ವೇಳೆ ಹೊಸ ಸೇತುವೆ ನಿರ್ಮಿಸಲಾಗಿದ್ದು, ಇನ್ನೊಂದು ಮಾರ್ಗಕ್ಕೆ ಹಳೆ ಸೇತುವೆ ಬಳಸಲಾಗುತ್ತಿತ್ತು. ಹಳೆ ಸೇತುವೆ ಮೇಲೆ ಲಾರಿ ಚಲಿಸುವಾಗಲೇ ಕುಸಿದು ಬಿದ್ದಿದೆ. ತಮಿಳುನಾಡು ಮೂಲದ ಲಾರಿ ಚಾಲಕ ಬಾಲಮುರುಗನ್(37) ಸಮೇತ ಲಾರಿ ನದಿಗೆ ಬಿದ್ದಿದೆ. ಲಾರಿಯ ಮುಂಭಾಗದ ಗ್ಲಾಸ್ ಒಡೆದು ಕ್ಯಾಬಿನ್ ಮೇಲೆ ನಿಂತು ಚಾಲಕ ರಕ್ಷಣೆಗೆ ಕೂಗಾಡಿದ್ದು, ಬೀಟ್ ಪೊಲೀಸರು ಕೂಡಲೇ ಕಾರ್ಯಪ್ರವೃತ್ತರಾಗಿ ಲಾರಿ ಚಾಲಕನ ಪ್ರಾಣ ಉಳಿಸಿದ್ದಾರೆ. ಸ್ಥಳೀಯ ಮೀನುಗಾರರು ಹಾಗೂ ಪೊಲೀಸ್ ಸಿಬ್ಬಂದಿ ಬೋಟ್ ಮೂಲಕ ಲಾರಿ ಚಾಲಕನನ್ನು ರಕ್ಷಿಸಿ ಆಸ್ಪತ್ರೆಗೆ ದಾಖಲಿಸಿದ್ದಾರೆ. ಇನ್ನೊಂದು ಹೊಸ ಸೇತುವೆಯಲ್ಲಿ ಸಂಚಾರಕ್ಕೆ ವ್ಯವಸ್ಥೆ ಮಾಡಲಾಗಿದೆ. ಹಳೆ ಸೇತುವೆ ಕುಸಿತದಲ್ಲಿ ಇನ್ನೂ ಕೆಲವು ವಾಹನಗಳು ಬಿದ್ದ ಶಂಕೆ ಹಿನ್ನೆಲೆಯಲ್ಲಿ ಶೋಧ ಕಾರ್ಯಾಚರಣೆ ನಡೆಸಲಾಗಿದೆ.

## ಕಾಡಾನೆ ದಾಳಿ: ಅಪಾರ ಹಾನಿ

• ಉದಯವಾಹಿನಿ ಮೂಡಿಗೆರೆ

ಗೋಣಿಬೀಡು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸಾಲುಮರ ಗ್ರಾಮದ ಬಳಿ ಮಂಗಳವಾರ 19 ಕಾಡಾನೆಗಳ ತಂಡ ದಾಳಿ ನಡೆಸಿದ್ದು, ಅಪಾರ ಪ್ರಮಾಣದ ಬೆಳೆ ಹಾನಿಗೊಳಿಸಿವೆ. 15 ದಿನಗಳಿಂದಲೂ ಗೋಣಿಬೀಡು ಗ್ರಾಮದ ಕಸ್ಕೇಬೈಲ್, ಆನೆದಿಬ್ಬ, ಹೊಸಪುರ, ಗಾಡಿಚೌಕ, ಕಲ್ಲುಗುಡ್ಡ ಸೇರಿದಂತೆ ಸುತ್ತಮುತ್ತಲ ಗ್ರಾಮಗಳಲ್ಲಿ ಕಾಡಾನೆಗಳು ಸಂಚರಿಸುತ್ತಿದ್ದವು.

ಗುಂಪಾಗಿ ದಾಳಿ ನಡೆಸುತ್ತಿದ್ದ ತಂಡದಲ್ಲಿ 13 ಕಾಡಾನೆಗಳಿರಬಹುದು ಎಂದು ಅಂದಾಜಿಸಲಾಗಿತ್ತು. ಆದರೆ ಮಂಗಳವಾರ ಬೆಳಿಗ್ಗೆ ಸಾಲುಮರ ಮುಖ್ಯ ರಸ್ತೆಯಲ್ಲಿ ಕಾಫಿ ತೋಟದಿಂದ ಅರಣ್ಯ ಪ್ರದೇಶಕ್ಕೆ 19ಕಾಡಾನೆಗಳು ದಾಟಿರುವ ವಿಡಿಯೊ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿತ್ತು. ಕಾಡಾನೆಗಳು ಕಸ್ಕೇಬೈಲ್ ಚರ್ಚ್ ಹಾಲ್ ಬಳಿಕ ಇಂದ್ರೇಶ್ ಎಂಬುವವರ ತೋಟದಲ್ಲಿ ಬೀಡು ಬಿಟ್ಟಿದ್ದು, ಅಪಾರ ಪ್ರಮಾಣದ ಕಾಫಿ ಗಿಡಗಳು ಹಾನಿಯಾಗಿವೆ. ಅರಣ್ಯ ಇಲಾಖೆ ಅಧಿಕಾರಿಗಳು, ಸಿಬ್ಬಂದಿ ಕಾಡಾನೆಗಳನ್ನು ಓಡಿಸುವ ಕಾರ್ಯದಲ್ಲಿ ತೊಡಗಿದ್ದು, ಗೋಣಿಬೀಡು, ಕಸ್ಕೇಬೈಲ್, ಆನೆದಿಬ್ಬ, ಹೊಸಪುರ ಸೇರಿದಂತೆ ಬೇಲೂರು ತಾಲ್ಲೂಕಿನ ಚೀಕನಹಳ್ಳಿ ಪ್ರದೇಶದವರೆಗೂ ಕಾಫಿ ತೋಟಗಳಲ್ಲಿ ಚಟುವಟಿಕೆಗಳು ಸ್ಥಬ್ಧವಾಗಿದ್ದವು.

## ಮತ್ಸ್ಯ ಸಂಪದ ಯೋಜನೆ: ಮೋಟಾರ್ ಸೈಕಲ್ ವಿತ್ ಐಸ್ ಬಾಕ್ಸ್ ಘಟಕ ಯೋಜನೆಗೆ ಅರ್ಜಿ ಆಹ್ವಾನ

• ಉದಯವಾಹಿನಿ ಚಿತ್ರದುರ್ಗ

2020–21 ರಿಂದ 2023–24ನೇ ಸಾಲಿನ ಬಾಕಿ ಉಳಿದ ಕಾರ್ಯಕ್ರಮಗಳಿಗೆ ಮತ್ತು 2024–25ನೇ ಸಾಲಿನ ಪ್ರಧಾನ ಮಂತ್ರಿ ಮತ್ಸ್ಯ ಸಂಪದ ಯೋಜನೆ ಯಡಿ ಮೋಟಾರ್ ಸೈಕಲ್ ವಿತ್‌ಐಸ್ ಬಾಕ್ಸ್ ಘಟಕದಡಿ ನೀಡಿದ ಹೆಚ್ಚುವರಿ ಗುರಿಗಳಿಗೆ ಜಿಲ್ಲೆಯ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಗಸ್ಟ್ 23 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.

ಈ ಯೋಜನೆಯಡಿ 0.75 ಲಕ್ಷ ಘಟಕ ವೆಚ್ಚ ನಿಗಧಿಪಡಿಸಲಾಗಿದ್ದು, ಒಟ್ಟು 12 ಘಟಕಗಳನ್ನು ನಿರ್ಮಿಸಲು ಗುರಿ ಹೊಂದಿದ್ದು, ಮಹಿಳೆಯರಿಗೆ ಹಾಗೂ ಪರಿಶಿಷ್ಟ ಪಂಗಡಕ್ಕೆ ತಲಾ 5, ಪರಿಶಿಷ್ಟ ಜಾತಿಗೆ 2 ಘಟಕಗಳು ಮೀಸಲಿವೆ. ಸಾಮಾನ್ಯ ವರ್ಗದವರಿಗೆ ಘಟಕ ವೆಚ್ಚದ ಶೇ.40 ರಷ್ಟು ಹಾಗೂ ಮಹಿಳೆ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದವರಿಗೆ ಶೇ.60ರಷ್ಟು ಸಹಾಯಧನ ನೀಡಲಾಗುವುದು. ಆಸಕ್ತ ಫಲಾನುಭವಿಗಳು ನಿಗದಿತ ಸಮಯದೊಳಗೆ ಅರ್ಜಿಗಳನ್ನು ಸಂಬಂಧಿಸಿದ ತಾಲ್ಲೂಕಿನ ಮೀನುಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಗೆ ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸಲು ಸೂಚಿಸಿದೆ.

ಹೆಚ್ಚಿನ ಮಾಹಿತಿಗಾಗಿ ಚಿತ್ರದುರ್ಗ, ಚಳ್ಳಕೆರೆ ಹಾಗೂ ಮೊಳಕಾಲ್ಮುರು ಮೀನುಗಾರಿಕೆ ಸಹಾಯಕ ನಿರ್ದೇಶಕ ತುಳಸೀದಾಸ್ ಅವರ ಮೊಬೈಲ್ ಸಂಖ್ಯೆ 9342187356, ಹಿರಿಯೂರು ಮೀನುಗಾರಿಕೆ ಸಹಾಯಕ ನಿರ್ದೇಶಕ ಎನ್.ಮಂಜುನಾಥ್ ಅವರ ಮೊಬೈಲ್ 7022933310 ಹಾಗೂ ಹೊಸ ದುರ್ಗ ಮತ್ತು ಹೊಳಲ್ಕೆರೆ ಮೀನುಗಾರಿಕೆ ಸಹಾಯಕ ನಿರ್ದೇಶಕ ವೆಂಕಟೇಶ್ವರ ಅವರ ಮೊಬೈಲ್ ಸಂಖ್ಯೆ 9945004235 ಸಂಪರ್ಕಿಸಬಹುದು ಎಂದು ಮೀನು ಗಾರಿಕೆ ಉಪನಿರ್ದೇಶಕರು ತಿಳಿಸಿದ್ದಾರೆ.

## ಎಲ್‌ಕೆಜಿ ಮತ್ತು ಯುಕೆಜಿ ತರಗತಿಗಳ ಆರಂಭಕ್ಕೆ ಶಾಸಕರಿಂದ ಚಾಲನೆ

• ಉದಯವಾಹಿನಿ ಸಿರುಗುಪ್ಪ

ನಗರದ ತಹಶೀಲ್ದಾರ್ ಕಛೇರಿಯ ಮುಂಭಾದಲ್ಲಿರುವ 7,8ನೇ ವಿಭಾಗ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆ, ಶಾಲಾ ಶಿಕ್ಷಣ ಇಲಾಖೆಗಳ ವತಿಯಿಂದ ಅಕ್ಷರ ಅವಿಷ್ಕಾರ ಯೋಜನೆಯಡಿ ಕಲ್ಯಾಣ ಕರ್ನಾಟಕ ಭಾಗದಲ್ಲಿ 2024–25ನೇ ಸಾಲಿನಲ್ಲಿನ ಆರಂಭಗೊಳ್ಳುತ್ತಿರುವ ಎಲ್.ಕೆ.ಜಿ ಮತ್ತು ಯು.ಕೆ.ಜಿಯ ಪೂರ್ವ ಪ್ರಾಥಮಿಕ ತರಗತಿಗಳ ಕೊಠಡಿಯನ್ನು ಶಾಸಕ ಬಿ.ಎಮ್.ನಾಗರಾಜ ಅವರು ಉದ್ಘಾಟಿಸಿದರು.

ನಂತರ ಮಾತನಾಡಿ ರಾಜ್ಯದಲ್ಲಿ ಸಾಕ್ಷರತೆಯ ಪ್ರಮಾಣದಲ್ಲಿ ಹಿಂದುಳಿದ ಕಲ್ಯಾಣ ಕರ್ನಾಟಕದ ಭಾಗದ ಶಾಲೆಯ ಮಕ್ಕಳಿಗೆ ಪೂರ್ವ ಪ್ರಾಥಮಿಕವಾಗಿ ಎಲ್.ಕೆ.ಜಿ ಮತು ಯು.ಕೆ.ಜಿ ತರಗತಿಗಳಲ್ಲಿ ಇಂಗ್ಲೀಷ್ ಭಾಷೆ ಕಲಿಸುವ ಉದ್ದೇಶದಿಂದ ಕರ್ನಾಟಕ ಸರ್ಕಾರವು ಮಹತ್ತರ ಯೋಜನೆಯನ್ನು ಜಾರಿಗೆ ತಂದಿದೆ. ಶಾಲೆಗೆ ಅಗತ್ಯವಿರುವ ನೀರು, ಸ್ವಚ್ಚತೆ, ಮತ್ತು ಇನ್ನಿತರ ಸೌಲಭ್ಯಗಳನ್ನು ನೀಡುವಂತೆ ಸಂಬಂಧಿಸಿದ ಜನ ಪ್ರತಿನಿಧಿಗಳಿಗೆ ಸೂಚಿಸಿದರು. ಇದೇ ವೇಳೆ ಕ್ಷೇತ್ರ ಶಿಕ್ಷಣಾಧಿಕಾರಿ ಗುರಪ್ಪ, ಕ್ಷೇತ್ರ ಸಮನ್ವಯಾಧಿಕಾರಿ ತಮ್ಮನಗೌಡ ಪಾಟೀಲ್, ತಾಲ್ಲೂಕು ಪ್ರಭಾರಿ ದೈಹಿಕ ಶಿಕ್ಷಣಾಧಿಕಾರಿ ರಮೇಶ, ಕರ್ನಾಟಕ ರಾಜ್ಯ ಗ್ರೇಡ್–2 ದೈಹಿಕ ಶಿಕ್ಷಕರ ಸಂಘದ ರಾಜ್ಯ ಉಪಾಧ್ಯಕ್ಷ ಬಿ.ಈರಣ್ಣ, ನಿವೃತ್ತ ಶಿಕ್ಷಣ ಸಂಯೋಜಕ ಬಸವರಾಜಯ್ಯ, ಪ್ರಸ್ತುತ ಇ.ಸಿ.ಓಗಳಾದ ರಫೀಕ್, ಹನುಮನಗೌಡ, ಬಿ.ಆರ್.ಪಿಗಳಾದ ಕಾಳಿಂಗಪ್ಪ, ವೀರೇಶ, ಗಜೇಂದ್ರ, ರುದ್ರವೇಣಿ, ಸಿ.ಆರ್.ಪಿ. ಮಂಜುನಾಥ ಅಂಗಡಿ, ಶಾಲಾ ಅಭಿವೃದ್ದಿ ಮಂಡಳಿ ಅಧ್ಯಕ್ಷ ಲಕ್ಷಣ, ಮುಖ್ಯಗುರು ಸದಾಶಿವ. ಎನ್.ಬನ್ನೋಡೆ, ಬಗರ್ ಹುಕ್ಕುಂ ಸದಸ್ಯ ಪವನ್ ದೇಸಾಯಿ, ಮುಖಂಡರಾದ ಮೋಹಿನುದ್ದೀನ್ ಖಾದ್ರಿ, ವೆಂಕಟೇಶ, ಗೊರವರ ಶ್ರೀನಿವಾಸ ಹಾಗೂ ಶಿಕ್ಷಕರು, ವಿದ್ಯಾರ್ಥಿಗಳು ಇದ್ದರು.


ಉದಯವಾಹಿನಿ ಚಿತ್ರ

> ತಾಲೂಕಿನಲ್ಲಿ ಅಕ್ಷರ ಅವಿಷ್ಕಾರ ಯೋಜನೆಯಡಿ 32 ಶಾಲೆಗಳಲ್ಲಿ ಕಟ್ಟಡ, ಸಿಬ್ಬಂದಿಗಳು ಮತ್ತು ಆಯಾಗಳ ವ್ಯವಸ್ಥೆಯೊಂದಿಗೆ ತರಗತಿಗಳನ್ನು ಆರಂಭಿಸಲಾಗುತ್ತಿದ್ದು, ಮುಂದಿನ ದಿನಗಳಲ್ಲೂ ಹೆಚ್ಚಿನ ಅಭಿವೃದ್ದಿಗೆ ಹೊತ್ತು ಕೊಡಲಾಗುವುದು –ಬಿ.ಎಮ್.ನಾಗರಾಜ, ಶಾಸಕ

## ಜಿಲ್ಲಾ ಮಟ್ಟದ 'ಜನಸ್ಪಂದನ' ಕಾರ್ಯಕ್ರಮ

• ಉದಯವಾಹಿನಿ ಬಳ್ಳಾರಿ

ಜಿಲ್ಲಾ ಮಟ್ಟದ ಜನಸ್ಪಂದನ ಕಾರ್ಯಕ್ರಮವನ್ನು ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅವರ ಅಧ್ಯಕ್ಷತೆಯಲ್ಲಿ ಆ.16 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಅನಂತಪುರ ರಸ್ತೆಯ ನೂತನ ಜಿಲ್ಲಾಡಳಿತ ಭವನದಲ್ಲಿ ಏರ್ಪಡಿಸಲಾಗಿದೆ ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಅವರು ತಿಳಿಸಿದ್ದಾರೆ. ಸಾರ್ವಜನಿಕರು ಸರ್ಕಾರಿ ಕೆಲಸಕ್ಕೆ ಸಂಬಂಧಿಸಿದಂತೆ ತಮ್ಮ ಅಹವಾಲುಗಳೇನಾದರು ಇದ್ದಲ್ಲಿ ಆ.16 ರಂದು ನಡೆಯುವ ಜನಸ್ಪಂದನ ಕಾರ್ಯಕ್ರಮದಲ್ಲಿ ಭಾಗವಹಿಸಿ ತಮ್ಮ ಅಹವಾಲುಗಳನ್ನು ಸಲ್ಲಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಿರಿಗೇರಿಯಲ್ಲಿ ಸ್ವಯಂ ಪ್ರೇರಿತ ರಕ್ತದಾನ ಶಿಬಿರಕ್ಕೆ ವೈದ್ಯಾಧಿಕಾರಿ ಚಾಲನೆ

• ಉದಯವಾಹಿನಿ ಸಿರುಗುಪ್ಪ

ತಾಲ್ಲೂಕಿನ ಸಿರಿಗೇರಿ ಗ್ರಾಮದ ಶ್ರೀ ನಾಗನಾಥೇಶ್ವರ ದೇವಸ್ಥಾನದ ಬಳಿ ಪ್ರಾಥಮಿಕ ಆರೋಗ್ಯ ಕೇಂದ್ರ, ಗ್ರಾಮ ಪಂಚಾಯಿತಿ, ಇನ್ನಿತರ ಇಲಾಖೆಗಳು, ಸಂಘ ಸಂಸ್ಥೆಗಳ ಸಹಯೋಗದಲ್ಲಿ ನಡೆದ ಸ್ವಯಂ ಪ್ರೇರಿತ ರಕ್ತದಾನ ಶಿಬಿರಕ್ಕೆ ವೈದ್ಯಾಧಿಕಾರಿ ತಿಪ್ಪೆಸ್ವಾಮಿರೆಡ್ಡಿ ಚಾಲನೆ ನೀಡಿದರು. ನಂತರ ಮಾತನಾಡಿ ತುರ್ತುಪರಿಸ್ಥಿತಿಯ ಸಮಯದಲ್ಲಿನ ರೋಗಿಗಳಿಗೆ ಜೀವ ದಾನವನ್ನು ನೀಡಲು ಅಗತ್ಯವಾಗಿರುವ ರಕ್ತದಾನ ಮಾಡಲಿಕ್ಕೆ ಸಂಘ ಸಂಸ್ಥೆಗಳು, ಗ್ರಾಮಸ್ಥರು ಮುಂದೆ ಬಂದಿರುವುದು ಸ್ವಾಗತಾರ್ಹವೆಂದರು. ವೈದ್ಯರಾದ ನಾಗರಾಜ ಅವರು ಮಾತನಾಡಿ ಇತ್ತೀಚೆಗೆ ಪ್ರಕೃತಿ ವಿಕೋಪ, ಡೆಂಗ್ಯೂ, ಜ್ವರದಂತಹ ಸಂದರ್ಭಗಳಿಂದಾಗಿ ರಕ್ತದಾನದ ಅವಶ್ಯಕತೆಯಿರುತ್ತದೆ. ನಾವು ಮಾಡುವ ರಕ್ತದಾನ ದಿಂದ ನಾಲ್ಕು ಜನರ ಜೀವವನ್ನು ಉಳಿಸಬಹುದಾಗಿದೆ. ಅಲ್ಲದೇ ಆರು ತಿಂಗಳಿಗೊಮ್ಮೆ ರಕ್ತದಾನ ಮಾಡುತ್ತಾ ಬಂದ ವ್ಯಕ್ತಿಯ ದೇಹದಲ್ಲಿ ಕೊಬ್ಬಿನಾಂಶ ಕರಗುತ್ತದೆ. ರಕ್ತದೊತ್ತಡ, ಮದುಮೇಹದಂತಹ ಕಾಯಿಲೆಗಳಿಂದ ಪಾರಾಗಬಹುದಾಗಿದ್ದು, ಆರೋಗ್ಯವಂತ ಎಲ್ಲಾ ಗ್ರಾಮಸ್ಥರು ರಕ್ತದಾನ ಮಾಡಬಹುದೆಂದು ತಿಳಿಸಿದರು. ಇದೇ ವೇಳೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಉಪ್ಪಾರ ರಾಮಪ್ಪ, ಆರೋಗ್ಯ ನಿರೀಕ್ಷಕರಾದ ಕೆ.ಎಮ್.ಷಡಕ್ಷರಯ್ಯ, ಮಾರೆಪ್ಪ ಮುಖಂಡರಾದ ವಿ.ಹನುಮೇಶ ಹಾಗೂ ಆಶಾ ಕಾರ್ಯಕರ್ತೆಯರು, ಇನ್ನಿತರ ಸಂಘಸಂಸ್ಥೆಗಳ ಪದಾಧಿಕಾರಿಗಳು ಇದ್ದರು.


ಉದಯವಾಹಿನಿ ಚಿತ್ರ

# ಜಿಲ್ಲೆಯ ಶಾಲೆಗಳಲ್ಲಿ 245 ಶಿಥಿಲಾವಸ್ಥೆ ಕೊಠಡಿಗಳು

## ಕೊಠಡಿಗಳ ಕೊರತೆಯ ಕಾರಣಕ್ಕೆ ಬೇರೆ ಬೇರೆ ತರಗತಿಗಳ ವಿದ್ಯಾರ್ಥಿಗಳನ್ನು ಒಂದೇ ಕೊಠಡಿಯಲ್ಲಿ ಕೂರಿಸಿ ಪಾಠ

• ಉದಯವಾಹಿನಿ ದಾವಣಗೆರೆ

ನಗರದ ನಿಟುವಳ್ಳಿ ರಸ್ತೆಯಲ್ಲಿರುವ ಲೇಬರ್ ಕಾಲೊನಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಒಟ್ಟು 9 ಕೊಠಡಿಗಳಿವೆ. ಇವುಗಳಲ್ಲಿ ಎರಡು ಕೊಠಡಿ ಶಿಥಿಲಾವಸ್ಥೆಯಲ್ಲಿದ್ದರೆ, ಮೂರು ಕೊಠಡಿಗಳು ದುರಸ್ತಿಗಾಗಿ ಎದುರು ನೋಡುತ್ತಿವೆ. ಇನ್ನುಳಿದ 4 ಕೊಠಡಿಗಳಲ್ಲೇ 1 ರಿಂದ 7ನೇ ತರಗತಿ ವರೆಗಿನ 45 ವಿದ್ಯಾರ್ಥಿಗಳಿಗೆ ಪಾಠ ಹೇಳಿಕೊಡಲಾಗುತ್ತಿದೆ.


1 ರಿಂದ 3ರ ವರೆಗಿನ (ನಲಿ–ಕಲಿ) ವಿದ್ಯಾರ್ಥಿಗಳಿಗೆ ಒಂದು ಕೊಠಡಿ, 4 – 5ನೇ ತರಗತಿ ವಿದ್ಯಾರ್ಥಿಗಳಿಗೆ ಒಂದು ಕೊಠಡಿ, 6 – 7ನೇ ತರಗತಿ ವಿದ್ಯಾರ್ಥಿಗಳಿಗೆ ಮತ್ತೊಂದು ಕೊಠಡಿಯಲ್ಲಿ ಪಾಠ ಮಾಡಲಾಗುತ್ತಿದೆ. ಇನ್ನೊಂದು ಕೊಠಡಿಯನ್ನು ಕಚೇರಿಯಾಗಿ (ಆಫೀಸ್ ರೂಮ್) ಬಳಸಲಾಗುತ್ತಿದೆ.

ಕೊಠಡಿಗಳ ಕೊರತೆಯ ಕಾರಣಕ್ಕೆ ಬೇರೆ ಬೇರೆ ತರಗತಿಗಳ ವಿದ್ಯಾರ್ಥಿಗಳನ್ನು ಒಂದೇ ಕೊಠಡಿಯಲ್ಲಿ ಕೂರಿಸಿ ಪಾಠ ಮಾಡುವ ಸ್ಥಿತಿ ಇದೊಂದೇ ಶಾಲೆಯದ್ದಲ್ಲ. ಜಿಲ್ಲೆಯ ನೂರಾರು ಸರ್ಕಾರಿ ಶಾಲೆಗಳಲ್ಲಿ ಇದೇ ಅನಿವಾರ್ಯತೆ ಸೃಷ್ಟಿಯಾಗಿದೆ. ಜಿಲ್ಲೆಯಲ್ಲಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಒಟ್ಟು 6,377 ಶಾಲಾ ಕೊಠಡಿಗಳಿವೆ.

ಈ ಪೈಕಿ 245 ಕೊಠಡಿಗಳು ಶಿಥಿಲಾವಸ್ಥೆ ತಲುಪಿದ್ದು, ಯಾವುದೇ ಕ್ಷಣದಲ್ಲಿ ಕುಸಿದು ಬೀಳುವ ಅಪಾಯ ಇದೆ. 800 ಕೊಠಡಿಗಳು ದುರಸ್ತಿಯಾಗಬೇಕಿದ್ದು, ಈ ಕೊಠಡಿಗಳಲ್ಲೂ ಪಾಠ ಮಾಡದ ಸ್ಥಿತಿ ಇದೆ. ಶಿಥಿಲಾವಸ್ಥೆಯಲ್ಲಿರುವ ಬಹುತೇಕ ಕೊಠಡಿಗಳು 30 –35 ವರ್ಷಗಳ ಹಿಂದೆ ನಿರ್ಮಾಣವಾದಂತಹವು. ಶಾಲೆಯಹಳೆಯ ಪೀಠೋಪಕರಣಗಳನ್ನಿಟ್ಟು ಈ ಕೊಠಡಿಗಳಿಗೆ ಬೀಗ ಹಾಕಲಾಗಿದೆ. ಇನ್ನು ದುರಸ್ತಿಯಾಗಬೇಕಿರುವ ಕೊಠಡಿಗಳಲ್ಲಿ ಮಳೆ ನೀರು ಸೋರುವುದು, ಚಾವಣಿ ಬೀಳುವುದು ಸಾಮಾನ್ಯವಾಗಿದೆ. ಮಳೆಗಾಲದಲ್ಲಿ ಈ ಕೊಠಡಿಗಳನ್ನು ಬಳಸಲು ಸಾಧ್ಯವೇ ಇಲ್ಲದ ಸ್ಥಿತಿ ಇದೆ. ಕೆಲವು ಕೊಠಡಿಗಳ ಬಾಗಿಲು, ಕಿಟಕಿಗಳೂ ಹಾಳಾ ಗಿವೆ. ತುಂಬಾ ಹಳೆಯ ಕೊಠಡಿಗಳು ಸೋರುವುದು ಸಹಜ. ಆದರೆ, 4–5 ವರ್ಷಗಳ ಹಿಂದೆ ನಿರ್ಮಾಣವಾದ ಕೆಲವು ಕೊಠಡಿಗಳೂ ಸೋರುತ್ತಿವೆ. ಮೊದಲೇ ಕೊಠಡಿಗಳ ಸಮಸ್ಯೆ ಇದೆ. ಹೊಸ ಕೊಠಡಿಗಳೂ ಸೋರಿದರೆ, ಎಲ್ಲಿ ಪಾಠ ಮಾಡುವುದು' ಎಂದು ಶಿಕ್ಷಕರೊಬ್ಬರು ಪ್ರಶ್ನಿಸಿದರು. ಕೊಠಡಿಗಳ ದುರಸ್ತಿಗೆ ಅನುದಾನ ಬರಲ್ಲ. ಶಾಲೆಗೆ ಹೊಸ ಕೊಠಡಿಗಳ ಮಂಜೂರಾತಿಗೆ ಗ್ರಾಮಸ್ಥರು ಕ್ಷೇತ್ರದ ಶಾಸಕರ ಮೇಲೆ ಒತ್ತಡ ಹೇರಬೇಕು.

ಆದರೆ, ಈ ಬಗ್ಗೆ ಯಾರೂ ತಲೆ ಕೆಡಿಸಿಕೊಳ್ಳುವುದಿಲ್ಲ. ಹೀಗಾಗಿ ನಾವೂ ಅಸಹಾಯಕರಾಗಿದ್ದೇವೆ' ಎಂದು ಮತ್ತೊಬ್ಬ ಶಿಕ್ಷಕ ಬೇಸರಿಸಿದರು. 'ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಮುಖ್ಯಮಂತ್ರಿ ವಿಶೇಷ ಅನುದಾನದಲ್ಲಿ 7.19 ಕೋಟಿ ಅನುದಾನದಲ್ಲಿ 51 ಕೊಠಡಿಗಳ ನಿರ್ಮಾಣಕ್ಕೆ ಕ್ರಿಯಾಯೋಜನೆ ರೂಪಿಸಲಾಗಿದೆ' ಎಂದು ಡಿಡಿಪಿಐ ಜಿ.ಕೊಟ್ರೇಶ್ ತಿಳಿಸಿದರು. ಮಳೆಯಿಂದಾಗಿ ಕೆಲ ದಿನಗಳ ಹಿಂದಷ್ಟೇ ನಗ ರದ 45ನೇ ವಾರ್ಡ್ ವ್ಯಾಪ್ತಿಯ ಕರೂರಿನಲ್ಲಿರುವ ಸರ್ಕಾರಿ ಕಿರಿಯ ಪ್ರಾಥಮಿಕ ಉರ್ದು ಶಾಲೆಯ ಕೊಠಡಿಯೊಂದರ ಚಾವಣಿ ಕುಸಿದು ಬಿದ್ದಿತ್ತು. ಮುನ್ನೆಚ್ಚರಿಕೆಯ ಕ್ರಮವಾಗಿ ಆ ಕೊಠಡಿಯಲ್ಲಿ ಪಾಠ ಮಾಡುವುದನ್ನು ನಿಲ್ಲಿಸಲಾಗಿತ್ತು. ಹೀಗಾಗಿ ಯಾವುದೇ ಅನಾಹುತ ಸಂಭವಿಸಿರಲಿಲ್ಲ.

**ಒಂದೇ ಕೊಠಡಿಯಲ್ಲಿ ಕೂರಿಸಿ ಪಾಠ**


ಉದಯವಾಹಿನಿ ಚಿತ್ರ

> 2022–23ನೇ ಸಾಲಿನಲ್ಲಿ ಜಿಲ್ಲೆಗೆ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯಿಂದ 225 ಕಟ್ಟಡಗಳು ಮಂಜೂರಾಗಿದ್ದವು. ಆ ಪೈಕಿ 202 ಕೊಠಡಿಗಳು ಉದ್ಘಾಟನೆಗೊಂಡು ಬಳಕೆಯಾಗುತ್ತಿವೆ. ಇನ್ನು 23 ಕೊಠಡಿಗಳು ನಿರ್ಮಾಣದ ಅಂತಿಮ ಹಂತದಲ್ಲಿವೆ –ಜಿ.ಕೊಟ್ರೇಶ್, ಡಿಡಿಪಿಐ

**ಆದಷ್ಟು ಬೇಗ ಕೊಠಡಿಗಳ ದುರಸ್ತಿ**

ಸುರಕ್ಷತೆ ದೃಷ್ಟಿಯಿಂದ ಯಾವುದೇ ಕಾರಣಕ್ಕೂ ವಿದ್ಯಾರ್ಥಿಗಳನ್ನು ಶಿಥಿಲಾವಸ್ಥೆಯ ಕೊಠಡಿಗಳಲ್ಲಿ ಕೂರಿಸಬೇಡಿ. ಬೀಳುವ ಹಂತದಲ್ಲಿರುವ ಕೊಠಡಿಗಳಿಗೆ ಬೀಗ ಹಾಕಿ ಎಂದು ಶಿಕ್ಷಕರಿಗೆ ಕಟ್ಟುನಿಟ್ಟಾಗಿ ಸೂಚಿಸಲಾಗಿದೆ' ಎಂದು ತಿಳಿಸಿದರು. 'ದುರಸ್ತಿ ಹಾಗೂ ಶಿಥಿಲಾವಸ್ಥೆ ಕೊಠಡಿಗಳ ತಾಲ್ಲೂಕುವಾರು ಪಟ್ಟಿಯನ್ನು ಜಿಲ್ಲಾ ಪಂಚಾಯಿತಿ ಸಿಇಒ ಹಾಗೂ ಜಿಲ್ಲಾಧಿಕಾರಿಗೆ ಸಲ್ಲಿಸಲಾಗಿದೆ. ಆದಷ್ಟು ಬೇಗ ಕೊಠಡಿಗಳ ದುರಸ್ತಿ ನಡೆಯಲಿದೆ' ಎಂದು ವಿಶ್ವಾಸ ವ್ಯಕ್ತಪಡಿಸಿದರು.

# 9ನೇ ಕ್ರಮಾಂಕದವರೆಗೂ ಬ್ಯಾಟರ್ಸ್ ಆದರೂ 110 ರನ್‌ಗಳಿಂದ ಸೋತ ಟೀಂ ಇಂಡಿಯಾ

## ಕೇವಲ 250ಕ್ಕೂ ಕಡಿಮೆ ಟಾರ್ಗೆಟ್ ಬೆನ್ನಟ್ಟಲು ಸಾಧ್ಯವಾಗದೆ ಸೋಲು



### ಅದ್ಭುತ ಸೃಷ್ಟಿಸಿದ ಶ್ರೀಲಂಕಾ

**ಭಾರತ ತಂಡದ ಸೋಲಿಗೆ ಶ್ರೀಲಂಕಾ ಸ್ಪಿನ್ನರ್‌ಗಳ ಮಾರಕ ದಾಳಿಯೇ ಪ್ರಮುಖ ಕಾರಣ. ಮೊದಲೆರಡು ಪಂದ್ಯಗಳಲ್ಲಿ ಪಾರುಪತ್ಯ ಮೆರೆದಿದ್ದ ಲಂಕಾ ಸ್ಪಿನ್ನರ್ಸ್ ಕೊನೆಯ ಏಕದಿನ ಪಂದ್ಯದಲ್ಲೂ ಮಾರಕ ದಾಳಿ ನಡೆಸಿದರು. ಅದರಲ್ಲೂ ಭಾರತದ ಬ್ಯಾಟರ್ಸ್‌ಗಲ ಹೆಡೆಮುರಿ ಕಟ್ಟಿದ ಎಡಗೈ ಸ್ಪಿನ್ನರ್ ದುನಿತ್ ವೆಲ್ಲಾಲಗೆ ಕೇವಲ 31 ಎಸೆತಗಳಲ್ಲಿ 5 ವಿಕೆಟ್ ಪಡೆದು ಸರಣಿಯಲ್ಲಿ ಎರಡನೇ ಬಾರಿಗೆ ಐದು ವಿಕೆಟ್ ಪಡೆದ ಸಾಧನೆ ಮಾಡಿದರು. ಇವರಲ್ಲದೆ ಲೆಗ್ ಸ್ಪಿನ್ನರ್ ಜೆಫ್ರಿ ವಾಂಡರ್ಸೆ 2 ವಿಕೆಟ್ ಪಡೆದರೆ, ಮಹೇಶ್ ತೀಕ್ಷಣ ಹಾಗೂ ಅಸಿತಾ ಫೆರ್ನಾಂಡೊ ತಲಾ ಒಂದು ವಿಕೆಟ್ ಪಡೆದರು.**

ಕೊಲಂಬೊದ ಆರ್. ಪ್ರೇಮದಾಸ ಕ್ರೀಡಾಂಗಣದಲ್ಲಿ ನಡೆದ ಭಾರತ ಹಾಗೂ ಶ್ರೀಲಂಕಾ ನಡುವಿನ ಮೂರನೇ ಹಾಗೂ ಕೊನೆಯ ಏಕದಿನ ಪಂದ್ಯದಲ್ಲಿ ಆತಿಥೇಯ ಶ್ರೀಲಂಕಾ ತಂಡ 110 ರನ್‌ಗಳಿಂದ ಗೆಲುವು ದಾಖಲಿಸಿದೆ. ಈ ಮೂಲಕ ಮೂರು ಪಂದ್ಯಗಳ ಏಕದಿನ ಸರಣಿಯನ್ನು 2-0 ಅಂತರದಿಂದ ವಶಪಡಿಸಿಕೊಂಡಿದೆ. ಸರಣಿ ಆರಂಭಕ್ಕೂ ಮುನ್ನ ಗೆಲುವಿನ ಫೇವರೇಟ್ ಎನಿಸಿಕೊಂಡಿದ್ದ ರೋಹಿತ್ ಪಡೆ ಒಂದೇ ಒಂದು ಪಂದ್ಯವನ್ನು ಗೆಲ್ಲಲು ಸಾಧ್ಯವಾಗದೆ ಮುಜುಗರದ ಸೋಲಿಗೆ ಕೊರಳೊಡ್ಡಿದೆ. ವಿಚಿತ್ರ ಸಂಗತಿಯೆಂದರೆ ಇಡೀ ಸರಣಿಯಲ್ಲಿ ಟೀಂ ಇಂಡಿಯಾ 8ನೇ ಕ್ರಮಾಂಕದವರೆಗೂ ಬ್ಯಾಟ್ಸ್‌ಮನ್‌ಗಳನ್ನೂ ಹೊಂದಿದ್ದರೂ, ಮೂರೂ ಪಂದ್ಯಗಳಲ್ಲಿ ಕೇವಲ 250 ಕ್ಕೂ ಕಡಿಮೆ ಟಾರ್ಗೆಟ್ ಅನ್ನು ಬೆನ್ನಟ್ಟಲು ಸಾಧ್ಯವಾಗದೆ ಸೋಲೊಪ್ಪಿಕೊಂಡಿತು. ಈ ಮೂಲಕ 1997 ರ ನಂತರ ಅಂದರೆ ಬರೋಬ್ಬರಿ 27 ವರ್ಷಗಳ ನಂತರ ಲಂಕಾ ನಾಡಲ್ಲಿ ಟೀಂ ಇಂಡಿಯಾ ಏಕದಿನ ಸರಣಿ ಸೋತ ಕಳಪೆ ದಾಖಲೆ ಬರೆದಿದೆ. ಅಲ್ಲದೆ ಚಾಂಪಿಯನ್ಸ್ ಟ್ರೋಫಿಗೂ ಮುನ್ನ ಟೀಂ ಇಂಡಿಯಾದ ಈ ಬ್ಯಾಟಿಂಗ್ ವೈಫಲ್ಯ ತಂಡದ ನೂತನ ಕೋಚ್ ಗೌತಮ್ ಗಂಭೀರ್ ಅವರನ್ನು ಚಿಂತೆಗೀಡುಮಾಡಿದೆ.

ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಶ್ರೀಲಂಕಾ ತಂಡ 248 ರನ್‌ಗಳ ಗುರಿ ನೀಡಿತು. ಇದಕ್ಕೆ ಉತ್ತರವಾಗಿ ಟೀಂ ಇಂಡಿಯಾ 138 ರನ್‌ಗಳಿಗೆ ಆಲೌಟ್ ಆಯಿತು. ಅಚ್ಚರಿಯೆಂದರೆ ಬ್ಯಾಟ್ಸ್‌ಮನ್‌ಗಳ ದಂಡೇ ಹೊಂದಿದ್ದ ಭಾರತ ತಂಡ ಪೂರ್ಣ 50 ಓವರ್‌ಗಳನ್ನು ಆಡಲು ಸಾಧ್ಯವಾಗದೆ ಕೇವಲ 26.1 ಓವರ್‌ಗಳಿಗೆ ತನ್ನ ಇನ್ನಿಂಗ್ಸ್ ಮುಗಿಸಿತು.

**ಮತ್ತೆ ಬ್ಯಾಟಿಂಗ್ ವೈಫಲ್ಯ ಸೋಲು**

ಟೀಂ ಇಂಡಿಯಾ ಈ ಪಂದ್ಯಕ್ಕೆ ಬರೋಬ್ಬರಿ 9 ಬ್ಯಾಟರ್‌ಗಳನ್ನು ಕಣಕ್ಕಿಳಿಸಿತ್ತು. ಆದರೆ ರೋಹಿತ್ ಶರ್ಮಾ ಹೊರತುಪಡಿಸಿ, ಶ್ರೀಲಂಕಾದ ಸ್ಪಿನ್ ಸ್ನೇಹಿ ಪಿಚ್‌ನಲ್ಲಿ ಯಾವುದೇ ಬ್ಯಾಟ್ಸ್‌ಮನ್ ತನ್ನ ಶಕ್ತಿ ತೋರಿಸಲು ಸಾಧ್ಯವಾಗಲಿಲ್ಲ. ಆರಂಭಿಕ ಶುಭ್‌ಮನ್ ಗಿಲ್ ಕೇವಲ 6 ರನ್ ಗಳಿಸಿ ಔಟಾದರೆ, ವಿರಾಟ್ ಕೊಹ್ಲಿ ಕೂಡ 20 ರನ್, ರಿಷಬ್ ಪಂತ್ ಕೇವಲ 6 ರನ್‌ಗಳಿಗೆ ತಮ್ಮ ಇನ್ನಿಂಗ್ಸ್ ಮುಗಿಸಿದರು. ಉಳಿದಂತೆ ಇಡೀ ಸರಣಿಯಲ್ಲಿ ಸತತ ವೈಫಲ್ಯ ಅನುಭವಿಸಿರುವ ಶ್ರೇಯಸ್ ಅಯ್ಯರ್ 8 ರನ್ ಗಳಿಸಿ ಔಟಾದರೆ, ಅಕ್ಷರ್ ಪಟೇಲ್ 2 ರನ್, ರಿಯಾನ್ ಪರಾಗ್ 15 ರನ್‌ಗಳಿಗೆ ಸುಸ್ತಾದರು. ಶಿವಂ ದುಬೆ ಕೇವಲ 9 ರನ್‌ಗಳಿಗೆ ಆಟ ಮುಗಿಸಿದರೆ, ಕೊನೆಯಲ್ಲಿ ಹೋರಾಟ ನೀಡಿದ ಸುಂದರ್ 30 ರನ್‌ಗಳ ಕಾಣಿಕೆ ನೀಡಿದರು. ಇನ್ನು ಈ ಪಂದ್ಯದಲ್ಲಿ ಶುಭ್ಮನ್ ಗಿಲ್ ಬಿಟ್ಟರೆ ಉಳಿದೆಲ್ಲ ಬ್ಯಾಟ್ಸ್‌ಮನ್‌ಗಳು ಸ್ಪಿನ್ನರ್‌ಗಳಿಗೆ ಬಲಿಯಾದರು.

**ರೋಹಿತ್ ಬಿಟ್ಟರೆ ಮಿಕ್ಕವರೆಲ್ಲಾ ಫ್ಲಾಫ್**

ಏಕದಿನ ಸರಣಿಯಲ್ಲಿ ರೋಹಿತ್ ಶರ್ಮಾ ಬಿಟ್ಟರೆ ಟೀಂ ಇಂಡಿಯಾ ಪರ ಯಾವ ಬ್ಯಾಟ್ಸ್‌ಮನ್‌ಗೂ ಹೇಳಿಕೊಳ್ಳುವಂತಹ ಪ್ರದರ್ಶನ ನೀಡಲು ಸಾಧ್ಯವಾಗಲಿಲ್ಲ. ರೋಹಿತ್ ಇಡೀ ಸರಣಿಯಲ್ಲಿ 157 ರನ್ ಕಲೆಹಾಕಿ ಭಾರತದ ಪರ ಸರಣಿಯಲ್ಲಿ ಅತಿ ಹೆಚ್ಚು ರನ್ ಬಾರಿಸಿದ ಬ್ಯಾಟರ್ ಎನಿಸಿಕೊಂಡರು. ಉಳಿದಂತೆ ಅಕ್ಷರ್ ಪಟೇಲ್ 79 ರನ್, ವಿರಾಟ್ ಕೊಹ್ಲಿ ಕೇವಲ 58 ರನ್, ಆರಂಭಿಕ ಶುಭ್‌ಮನ್ ಗಿಲ್ 57, ಸುಂದರ್ 50 ರನ್ ಕಲೆಹಾಕಿದರು. ಮೊದಲೆರಡು ಪಂದ್ಯಗಳಲ್ಲಿ ಆಡುವ ಅವಕಾಶ ಪಡೆದಿದ್ದ ಕೆಎಲ್ ರಾಹುಲ್ 31 ರನ್ ಮತ್ತು ಅಯ್ಯರ್ ಕೇವಲ 38 ರನ್ ಕೊಡುಗೆ ನೀಡಿದರು.

# ಕೂದಲು, ಉಗುರು ಕಟ್.. ರಕ್ತವನ್ನೂ ಹೊರ ತೆಗೆದು ತೂಕ ಇಳಿಸಲು ವಿನೇಶ್ ಹೋರಾಟ ಹೇಗಿತ್ತು

ಭಾರತದ ಕುಸ್ತಿಪಟು ವಿನೇಶ್ ಫೋಗಟ್ ಪ್ಯಾರಿಸ್ ಒಲಿಂಪಿಕ್ಸ್ ನಿಂದ ಅನರ್ಹಗೊಂಡಿದ್ದಾರೆ. ರಾತ್ರಿ ನಡೆದಿದ್ದ ಸೆಮಿಫೈನಲ್ ಪಂದ್ಯದಲ್ಲಿ ಕ್ಯೂಬಾದ ಗುಜ್ಮನ್ ಲೋಪೆಜ್ ಅವರನ್ನು ಸೋಲಿಸಿ 50 ಕೆಜಿ ವಿಭಾಗದ ಕುಸ್ತಿ ಸ್ಪರ್ಧೆಯಲ್ಲಿ ಫೈನಲ್‌ಗೆ ತಲುಪಿದ್ದ ವಿನೇಶ್ ಫೋಗಟ್ ನಿಗದಿತ ತೂಕದ ಮಿತಿಗಿಂತ ಹೆಚ್ಚಿರುವುದರಿಂದ ಅವರನ್ನು ಸ್ಪರ್ಧೆಯಿಂದ ಅನರ್ಹಗೊಳಿಸಲಾಗಿದೆ.

ಮಾಹಿತಿಯ ಪ್ರಕಾರ, ರಾತ್ರಿ ಪರೀಕ್ಷಿಸಿದಾಗ ವಿನೇಶ್ ಫೋಗಟ್ ಅವರ ತೂಕ 2 ಕೆಜಿ ಹೆಚ್ಚಿತ್ತು. ಹೀಗಾಗಿ ಈ ತೂಕವನ್ನು ಕಡಿಮೆ ಮಾಡಲು ವಿನೇಶ್ ಇಡೀ ರಾತ್ರಿ ನಿದ್ರೆ ಮಾಡದೆ ಶ್ರಮಿಸಿದ್ದಾರೆ. ವರದಿ ಪ್ರಕಾರ, ಸೆಮಿ-ಫೈನಲ್ ಪಂದ್ಯವನ್ನು ಗೆದ್ದಾಗ ವಿನೇಶ್ ಅವರ ತೂಕ 52 ಕೆಜಿ ಇತ್ತು. ನಂತರ ತನ್ನ ತೂಕವನ್ನು 2 ಕೆಜಿಯಷ್ಟು ಕ' ಡಿ ವ' ಾ ಮಾಡಲು ವಿನೇಶ್ ಇಡೀ ರಾತ್ರಿ ಶ್ರಮಿಸಿದ್ದಾರೆ. ಮಾಧ್ಯಮ ವರದಿಗಳ ಪ್ರಕಾರ, ಸೆಮಿಫೈನಲ್‌ನಲ್ಲಿ ಗೆದ್ದ ನಂತರ ವಿನೇಶ್ ಫೋಗಟ್ ವಿಶ್ರಾಂತಿ ಪಡೆದಿಲ್ಲ. ರಾತ್ರಿಯಿಡೀ ಎಚ್ಚರದಿಂದಿದ್ದ ಅವರು ತನ್ನ ಹೆಚ್ಚುವರಿ ತೂಕವನ್ನು ಕಡಿಮೆ ಮಾಡಲು ಪ್ರಯತ್ನಿಸಿದ್ದಾರೆ. ಸ್ಪೋರ್ಟ್ಸ್‌ಸ್ಟಾರ್ ವರದಿ ಪ್ರಕಾರ, ವಿನೇಶ್ ಫೋಗಟ್ ತೂಕ ಇಳಿಸಿಕೊಳ್ಳಲು ಸೈಕ್ಲಿಂಗ್, ಸ್ಕಿಪ್ಪಿಂಗ್ ಮೊರೆ ಹೋಗಿದ್ದಾರೆ. ಅಷ್ಟೇ ಅಲ್ಲ, ತೂಕ ಇಳಿಸುವ ಸಲುವಾಗಿ ವಿನೇಶ್ ತನ್ನ ತಲೆ ಕೂದಲು ಮತ್ತು ಉಗುರುಗಳನ್ನು ಸಹ ಕತ್ತರಿಸಿದ್ದಾರೆ. ಇದು ಸಾಲದೆಂಬಂತೆ ತನ್ನ ದೇಹದ ರಕ್ತವನ್ನು ಸಹ ಹೊರತೆಗೆಸಿದ್ದಾರೆ. ಇದರಿಂದಾಗಿ ಅವರ ಕೇವಲ 1 ರಾತ್ರಿಯಲ್ಲಿ 1 ಕೆಜಿ. 850 ಗ್ರಾಂ ತೂಕವನ್ನು ಕಡಿಮೆ ಮಾಡಿದ್ದಾರೆ. ಆದರೆ ನಿಗದಿತ ತೂಕಕ್ಕಿಂತ ಕೇವಲ 150 ಗ್ರಾಂ ಹೆಚ್ಚಿದ್ದರಿಂದ ಅವರನ್ನು ಅನರ್ಹಗೊಳಿಸಲಾಗಿದೆ.

ಕುಸ್ತಿಯಲ್ಲಿ, ಯಾವುದೇ ಕುಸ್ತಿಪಟುವಿಗೆ ಕೇವಲ 100 ಗ್ರಾಂ ಹೆಚ್ಚುವರಿ ತೂಕದ ಭತ್ಯೆಯನ್ನು ನೀಡಲಾಗುತ್ತದೆ.

ಅರ್ಥಾತ್, ವಿನೇಶ್ 50 ಕೆಜಿ, 100 ಗ್ರಾಂ ತೂಕ ಹೊಂದಿದ್ದರೆ, ಅವರು ಚಿನ್ನದ ಪದಕದ ಪಂದ್ಯವನ್ನು ಆಡಲು ಸಾಧ್ಯವಾಗುತ್ತಿತ್ತು. ಆದರೆ ಅವಳ ತೂಕ 50 ಗ್ರಾಂ ಹೆಚ್ಚಿದ್ದರಿಂದಾಗಿ ಅವಳ ಒಲಿಂಪಿಕ್ ಪದಕ ಗೆಲ್ಲುವ ಕನಸು ಭಗ್ನಗೊಂಡಿದೆ. ಕುಸ್ತಿಯಲ್ಲಿ, ಪಂದ್ಯಗಳ ಮೊದಲು ಕುಸ್ತಿಪಟುಗಳನ್ನು ತೂಕ ಮಾಡಲಾಗುತ್ತದೆ. ಇದಲ್ಲದೇ 2 ದಿನಗಳ ಕಾಲ ಇದೇ ವಿಭಾಗದಲ್ಲಿ ಕುಸ್ತಿಪಟು ತನ್ನ ತೂಕವನ್ನು ಕಾಯ್ದುಕೊಳ್ಳಬೇಕಾಗಿದ್ದರೂ ವಿನೇಶ್‌ಗೆ ಸಾಧ್ಯವಾಗಲಿಲ್ಲ.

ಇದೀಗ ಫೋಗಾಟ್ ಅನರ್ಹರಾಗಿರುವುದರಿಂದ ಅವರಿಗೆ ಬೆಳ್ಳಿ ಪದಕವೂ ಸಿಗುವುದಿಲ್ಲ. ಹೀಗಾಗಿ 50 ಕೆಜಿ ವಿಭಾಗದಲ್ಲಿ ಚಿನ್ನ ಮತ್ತು ಕಂಚಿನ ಪದಕ ನೀಡಲಾಗುತ್ತದೆ. ಅಂದರೆ ಅಮೆರಿಕದ ಕುಸ್ತಿಪಟು ಸಾರಾ ಹಿಲ್ಡೆಬ್ರಾಂಡ್ ಫೈನಲ್ ಪಂದ್ಯವನ್ನು ಆಡದೇ ಚಿನ್ನ ಪಡೆಯಲ್ಲಿದ್ದಾರೆ. ಆದರೆ ಕಂಚಿನ ಪದಕಕ್ಕಾಗಿ ಪಂದ್ಯ ನಡೆಯಲಿದೆ.



# ಫೋಗಟ್ ಅನರ್ಹ; ಐಒಎ ಅಧ್ಯಕ್ಷೆ ಪಿಟಿ ಉಷಾ ಮೊದಲ ಪ್ರತಿಕ್ರಿಯೆ

ಭಾರತದ ಮಹಿಳಾ ಕುಸ್ತಿಪಟು ವಿನೇಶ್ ಫೋಗಟ್ ಅವರನ್ನು ಪ್ಯಾರಿಸ್ ಒಲಿಂಪಿಕ್ಸ್‌ನಿಂದ ಅನರ್ಹಗೊಳಿಸಲಾಗಿದೆ. ಇದರಿಂದಾಗಿ ಭಾರತದ ಮೊದಲ ಚಿನ್ನ ಅಥವಾ ಬೆಳ್ಳಿ ಪದಕ ಗೆಲ್ಲುವ ಕನಸು ಕೂಡ ಭಗ್ನಗೊಂಡಿದೆ. ವಿನೇಶ್ ಫೋಗಟ್ ಕೇವಲ 100 ಗ್ರಾಂ ತೂಕ ಹೆಚ್ಚಿದ್ದ ಕಾರಣದಿಂದ ಅವರನ್ನು ಒಲಿಂಪಿಕ್ಸ್‌ನಿಂದ ಅನರ್ಹಗೊಳಿಸಲಾಗಿದೆ. ಈ ನಡುವೆ ನಿರ್ಜಲೀಕರಣದಿಂದಾಗಿ ಬಳಲುತ್ತಿರುವ ವಿನೇಶ್ ಅವರನ್ನು ಪ್ಯಾರಿಸ್‌ನ ಒಲಿಂಪಿಕ್ಸ್ ಕ್ರೀಡಾ ಗ್ರಾಮದಲ್ಲಿರುವ ಕ್ಲಿನಿಕ್‌ನಲ್ಲಿ ದಾಖಲಿಸಲಾಗಿದೆ. ಇದೀಗ ವಿನೇಶ್‌ರನ್ನು ಭೇಟಿಯಾಗಿದ್ದ ಐಒಎ ಅಧ್ಯಕ್ಷೆ ಪಿಟಿ ಉಷಾ ಮಾತನಾಡಿ, 'ವಿನೇಶ್ ಅವರ ಅನರ್ಹತೆ ಆಘಾತಕಾರಿಯಾಗಿದೆ. ನಾನು ಸ್ವಲ್ಪ ಸಮಯಕ್ಕೂ ಮುಂಚೆ ಒಲಿಂಪಿಕ್ ವಿಲೇಜ್ ಪಾಲಿಕ್ಲಿನಿಕ್‌ನಲ್ಲಿ ವಿನೇಶ್ ಅವರನ್ನು ಭೇಟಿಯಾಗಿದ್ದೆ ಮತ್ತು ಅವರಿಗೆ ಭಾರತೀಯ ಒಲಿಂಪಿಕ್ ಸಂಸ್ಥೆ, ಭಾರತ ಸರ್ಕಾರ ಮತ್ತು ಇಡೀ ದೇಶದಿಂದ ಸಂಪೂರ್ಣ ಬೆಂಬಲವನ್ನು ನೀಡುವುದಾಗಿ ಭರವಸೆ ನೀಡಿದ್ದೇನೆ. ನಾವು ವಿನೇಶ್‌ಗೆ ಎಲ್ಲಾ ರೀತಿಯ ವೈದ್ಯಕೀಯ ಮತ್ತು ಭಾವನಾತ್ಮಕ ಬೆಂಬಲವನ್ನು ನೀಡುತ್ತಿದ್ದೇವೆ' ಎಂದು ಹೇಳಿಕೊಂಡಿದ್ದಾರೆ.



ವಿನೇಶ್ ಫೋಗಟ್ ಅವರ ಅನರ್ಹತೆಯ ಬಗ್ಗೆ ಮಾತನಾಡಿರುವ ಐಒಎ ಅಧ್ಯಕ್ಷೆ ಪಿ.ಟಿ. ಉಷಾ, ತಂಡದ ವೈದ್ಯ ಪದ್ರಿವಾಲಾ, ವಿನೇಶ್ ಫೋಗಟ್ ಅನರ್ಹತೆಯ ವಿರುದ್ಧ ಭಾರತೀಯ ಒಲಿಂಪಿಕ್ ಸಂಸ್ಥೆ ನಿರಂತರವಾಗಿ ಧ್ವನಿ ಎತ್ತುತ್ತಿದೆ.

ಡಬ್ಲ್ಯುಎಫ್‌ಐ ಕೂಡ ಒಲಿಂಪಿಕ್ ಸಮಿತಿಗೆ ಪತ್ರ ಬರೆದು ವಿನೇಶ್ ಅವರನ್ನು ಹೊರಗಿಡುವುದಕ್ಕೆ ವಿರೋಧ ವ್ಯಕ್ತಪಡಿಸಿದೆ ಎಂದಿದ್ದಾರೆ. ಇದರ ಜೊತೆಗೆ ವಿನೇಶ್ ಅವರ ಆರೋಗ್ಯದ ಬಗ್ಗೆ ಮಾಹಿತಿ ನೀಡಿರುವ ಇವರು, 'ವಿನೇಶ್ ಅವರ ವೈದ್ಯಕೀಯ ತಪಾಸಣೆ ನಡೆಸಲಾಗಿದ್ದು, ಸದ್ಯ ಆಕೆ ಆರೋಗ್ಯವಾಗಿದ್ದಾರೆ. ವಿನೇಶ್ ದೈಹಿಕವಾಗಿ ಚೆನ್ನಾಗಿದ್ದಾರೆ ಆದರೆ ಮಾನಸಿಕವಾಗಿ ಅವರು ತುಂಬಾ ಕುಗ್ಗಿದ್ದಾರೆ ಎಂದು ಹೇಳಿದ್ದಾರೆ.




**ತೂಕ ಇಳಿಸಿಕೊಳ್ಳಲು ಇನ್ನಿಲ್ಲದ ಪ್ರಯತ್ನ**

ಈ ಬಗ್ಗೆ ಮಾಹಿತಿ ನೀಡಿರುವ ವೈದ್ಯ ಪರ್ದಿವಾಲಾ, 'ಕೆಲವೊಮ್ಮೆ ನಿರಂತರ ಪಂದ್ಯಗಳಿಂದ ಹೆಚ್ಚು ನೀರು ಕುಡಿಯಬೇಕಾಗುತ್ತದೆ, ಅಂತಹ ಪರಿಸ್ಥಿತಿಯಲ್ಲಿ ತೂಕ ಹೆಚ್ಚಾಗುತ್ತದೆ. ರಾತ್ರಿ ವಿನೇಶ್‌ನ ತೂಕ ಹೆಚ್ಚಾದಾಗ ಅದನ್ನು ಕಡಿಮೆ ಮಾಡಲು ವೈದ್ಯಕೀಯ ತಂಡ ಅನೇಕ ಪ್ರಯತ್ನಗಳನ್ನು ಮಾಡಿತು, ಅವರ ಕೂದಲನ್ನು ಸಹ ಕತ್ತರಿಸಲಾಯಿತು. ಆದರೆ ಬೆಳಿಗ್ಗೆ 7 ಗಂಟೆಗೆ ಅವರನ್ನು ತೂಕ ಮಾಡಿದಾಗ, ಅವರು ನಿಗದಿಗಿಂತ 100 ಗ್ರಾಂ ಹೆಚ್ಚು ತೂಕ ಇರುವುದು ಕಂಡು ಬಂದಿತ್ತು ಎಂದಿದ್ದಾರೆ.




# ಪ್ರಭಾಸ್‌ಗೆ ತ್ರಿಷಾ ನಾಯಕಿ ಅನಿಮಲ್ ನಿರ್ದೇಶಕ ಆಕ್ಷನ್ ಕಟ್

'ಕಲ್ಕಿ 2898 ಎಡಿ' ಸಿನಿಮಾದ ಯಶಸ್ಸಿನಲ್ಲಿರುವ ಪ್ರಭಾಸ್ ಇದೀಗ 'ಸ್ಪಿರಿಟ್' ಸಿನಿಮಾಗೆ ಸಿದ್ಧತೆ ನಡೆಸುತ್ತಿದ್ದಾರೆ. ಇದರ ನಡುವೆ ಈ ಸಿನಿಮಾ ಬಗ್ಗೆ ಲೇಟೆಸ್ಟ್ ಅಪ್‌ಡೇಟ್‌ವೊಂದು ಸಿಕ್ಕಿದೆ. ಈ ಚಿತ್ರದಲ್ಲಿ ಡಾರ್ಲಿಂಗ್ ಪ್ರಭಾಸ್ ಜೊತೆ ತ್ರಿಷಾ ರೊಮ್ಯಾನ್ಸ್ ಮಾಡಲಿದ್ದಾರೆ. ಕಳೆದ 20 ವರ್ಷಗಳಿಂದ ಚಿತ್ರರಂಗದಲ್ಲಿ ಆಕ್ಟಿವ್ ಇರುವ ನಟಿ ತ್ರಿಷಾ ಇಂದಿಗೂ ಬೇಡಿಕೆಯನ್ನು ಉಳಿಸಿಕೊಂಡಿದ್ದಾರೆ. ವಿಜಯ ದಳಪತಿ, ಮೆಗಾಸ್ಟಾರ್ ಚಿರಂಜೀವಿ, ಅಜಿತ್ ಕುಮಾರ್‌ಗೆ ಪ್ರಸ್ತುತ ನಾಯಕಿಯಾಗಿ ಸದ್ದು ಮಾಡುತ್ತಿರುವ ತ್ರಿಷಾ ಇದೀಗ ಪ್ರಭಾಸ್ ಸಿನಿಮಾಗೆ ಎಂಟ್ರಿ ಕೊಟ್ಟಿದ್ದಾರೆ.



ತ್ರಿಷಾರನ್ನು ಈಗಾಗಲೇ ಅನಿಮಲ್ ನಿರ್ದೇಶಕ ಸಂದೀಪ್ ರೆಡ್ಡಿ ವಂಗಾ ಭೇಟಿಯಾಗಿ ಸಿನಿಮಾದ ಕಥೆ ಹೇಳಿದ್ದಾರೆ. ಸಿನಿಮಾ ಕುರಿತು ಮಾತುಕತೆಯಾಗಿದ್ದು, ಸದ್ಯದಲ್ಲೇ ಚಿತ್ರತಂಡ ಈ ಕುರಿತು ಘೋಷಣೆ ಮಾಡಬೇಕಿದೆ. ಸದ್ಯ 'ಸ್ಪಿರಿಟ್' ಸಿನಿಮಾದ ಪ್ರೀ ಪ್ರೊಡಕ್ಷನ್ ಕೆಲಸಗಳು ನಡೆಯುತ್ತಿದೆ.

ಪ್ರಭಾಸ್ ಮತ್ತು ತ್ರಿಷಾ ಇಬ್ಬರೂ ಬೇರೆ ಬೇರೆ ಪ್ರಾಜೆಕ್ಟ್‌ಗಳಲ್ಲಿ ಬ್ಯುಸಿಯಾಗಿದ್ದಾರೆ. ದಿ ರಾಜಾ ಸಾಬ್ ಸಿನಿಮಾದ ಬಳಿಕ ಸಂದೀಪ್ ರೆಡ್ಡಿ ವಂಗಾ ಜೊತೆ ಚಿತ್ರತಂಡ ಸೇರಿಕೊಳ್ಳಲಿದ್ದಾರೆ ಪ್ರಭಾಸ್. ಸದ್ಯ ಈ ಚಿತ್ರದ ಅಪ್‌ಡೇಟ್ ಕೇಳಿ ಅಭಿಮಾನಿಗಳು ಥ್ರಿಲ್ ಆಗಿದ್ದಾರೆ.



# ಧನುಷ್ ನಟನೆಯ ಬಾಲಿವುಡ್ ಸಿನಿಮಾದಲ್ಲಿ ಕೃತಿ ನಾಯಕಿ



**ಧನುಷ್ ಗ್ರೀನ್ ಸಿಗ್ನಲ್**

ತಮಿಳು ನಟ ಧನುಷ್‌ಗೆ ಬಾಲಿವುಡ್ ಸಿನಿಮಾ ಏನು ಹೊಸದಲ್ಲ. ರಾಂಜಾನ, ಅತ್ರಾಂಗಿ ರೆ ಸೇರಿದಂತೆ ಕೆಲವು ಚಿತ್ರಗಳಲ್ಲಿ ನಟಿಸಿದ್ದಾರೆ. ಇದೀಗ ಬಾಲಿವುಡ್‌ನ ಹೊಸ ಚಿತ್ರಕ್ಕೆ ಧನುಷ್ ಗ್ರೀನ್ ಸಿಗ್ನಲ್ ಕೊಟ್ಟಿದ್ದಾರೆ. ಕೃತಿ ಸನೋನ್ ಜೊತೆ ನಟ ರೊಮ್ಯಾನ್ಸ್ ಮಾಡಲಿದ್ದಾರೆ. ಈ ಹಿಂದೆ ರಾಂಜಾನ ಚಿತ್ರ ನಿರ್ದೇಶನ ಮಾಡಿದ್ದ ಆನಂದ್ ಎಲ್. ರೈ ಅವರ ಹೊಸ ಸಿನಿಮಾಗೆ ನಟಿಸಲು ಧನುಷ್ ಒಪ್ಪಿಗೆ ನೀಡಿದ್ದಾರೆ. ಈ ಚಿತ್ರಕ್ಕೆ ಕೃತಿ ಸನೋನ್ ಹೀರೋಯಿನ್ ಆಗಿ ಆಯ್ಕೆ ಆಗಿದ್ದಾರೆ. ಈ ಜೋಡಿಯ ಹೊಸ ಪ್ರೇಮ ಕಥೆಗೆ ತೇರೆ ಇಷ್ಕ್ ಮೇ ಎಂದು ಟೈಟಲ್ ಇಡಲಾಗಿದೆ. ಇದೊಂದು ಮ್ಯೂಸಿಕಲ್ ಲವ್ ಸ್ಟೋರಿಯಾಗಿದ್ದು, ಕೃತಿ ಮತ್ತು ಧನುಷ್ ಇಬ್ಬರೂ ಡಿಫರೆಂಟ್ ರೋಲ್‌ನಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಈ ವರ್ಷದ ಅಂತ್ಯದಲ್ಲಿ ಶೂಟಿಂಗ್ ಶುರುವಾಗಲಿದೆ. ಸದ್ಯ ಧನುಷ್ 'ಕುಬೇರ' ಸಿನಿಮಾದ ಶೂಟಿಂಗ್‌ನಲ್ಲಿ ಬ್ಯುಸಿಯಾಗಿದ್ದಾರೆ. ಇದಾದ ನಂತರ ಡೈರೆಕ್ಟರ್ ಆನಂದ್ ಎಲ್. ರೈ ಚಿತ್ರವನ್ನು ಕೈಗೆತ್ತಿಕೊಳ್ಳಲಿದ್ದಾರೆ. ಮೊದಲ ಬಾರಿಗೆ ಧನುಷ್ ಮತ್ತು ಕೃತಿ ಸನೋನ್ ಜೋಡಿಯಾಗ್ತಿರೋದ್ರಿಂದ ಈ ಚಿತ್ರದ ಮೇಲೆ ಅಭಿಮಾನಿಗಳಿಗೆ ಬೆಟ್ಟದಷ್ಟು ನಿರೀಕ್ಷೆಯಿದೆ.

# ಟಾಕ್ಸಿಕ್ ಸಿನಿಮಾ ಶೂಟಿಂಗ್ ಶುರು

ನ್ಯಾಷನಲ್ ಸ್ಟಾರ್ ಯಶ್ ನಟನೆಯ 'ಟಾಕ್ಸಿಕ್' ಸಿನಿಮಾ ಚಿತ್ರೀಕರಣಕ್ಕೆ ಮುಹೂರ್ತ ಫಿಕ್ಸ್ ಆಗಿದೆ. ಇದೇ ಆ.8ರಿಂದ ಬೆಂಗಳೂರಿನಲ್ಲಿ ಟಾಕ್ಸಿಕ್ ಸಿನಿಮಾ ಚಿತ್ರೀಕರಣ ಶುರುವಾಗಲಿದೆ. ಈ ಮೂಲಕ ಯಶ್ ಫ್ಯಾನ್ಸ್‌ಗೆ ಗುಡ್ ನ್ಯೂಸ್ ಸಿಕ್ಕಿದೆ. ಉಜಿರೆಯ ಸುರ್ಯ ದೇಗುಲಕ್ಕೆ ಪತ್ನಿ ರಾಧಿಕಾ ಜೊತೆ ಯಶ್ ಭೇಟಿ ಕೊಟ್ಟ ಬೆನ್ನಲ್ಲೇ ಟಾಕ್ಸಿಕ್ ಸಿನಿಮಾ ಚಿತ್ರೀಕರಣ ಶುರು ಮಾಡಲು ಸಿದ್ಧತೆ ನಡೆಯುತ್ತಿದೆ. ಯಶ್‌ಗೆ 8 ಲಕ್ಕಿ ನಂಬರ್ ಆಗಿರೋ ಕಾರಣ ಈ ದಿನ 'ಟಾಕ್ಸಿಕ್' ಚಿತ್ರಕ್ಕೆ ಚಾಲನೆ ಸಿಗಲಿದೆ. ಯಶ್ ಪಾಲಿಗೆ 8ನೇ ತಾರೀಕು ವಿಶೇಷವಾಗಿದೆ. 2+0+2+4 ಈ ಇಸವಿಯನ್ನು ಕೂಡಿದಾಗ 8 ಸಂಖ್ಯೆ ಬರುತ್ತದೆ. ಹಾಗಾಗಿ 2024ರ 8ನೇ ತಿಂಗಳಾದ ಆಗಸ್ಟ್ 8ರಂದು ಟಾಕ್ಸಿಕ್ ಚಿತ್ರದ ಶೂಟಿಂಗ್ ಚಾಲನೆ ನೀಡಲು ಮುಂದಾಗಿದ್ದಾರೆ. ಬೆಂಗಳೂರಿನಲ್ಲಿ 'ಟಾಕ್ಸಿಕ್' ಸಿನಿಮಾ ಚಿತ್ರೀಕರಣ ಪ್ರಾರಂಭವಾಗುತ್ತದೆ ಎಂದು ಸಿನಿಮಾ ವಿಮರ್ಶಕರೊಬ್ಬರು ಸೋಷಿಯಲ್ ಮೀಡಿಯಾದಲ್ಲಿ ತಿಳಿಸಿದ್ದಾರೆ. ಅಂದಹಾಗೆ, ಯಶ್ ಜನ್ಮ ದಿನಾಂಕ ಜ.8 ಮತ್ತು ಅವರು ಟಾಕ್ಸಿಕ್ ಸಿನಿಮಾ ಕೂಡ ಡಿ.8ರಂದು ಘೋಷಣೆ ಮಾಡಿದ್ದರು.

ಈಗಾಗಲೇ ಕಿಯಾರಾ ಅಡ್ವಾಣಿ, ನಯನ ತಾರಾ, ಹುಮಾ ಖುರೇಶಿ ಸೇರಿದಂತೆ ಹಲವರ ಹೆಸರು ಕೇಳಿ ಬರುತ್ತಿದೆ. ಸದ್ಯದಲ್ಲೇ ಈ ಕುರಿತು ಅಧಿಕೃತ ಮಾಹಿತಿ ಸಿಗಲಿದೆ.

ಈಗ ಚಿತ್ರದ ಶೂಟಿಂಗ್ ಅಪ್‌ಡೇಟ್ ಕೇಳಿ ಫ್ಯಾನ್ಸ್ ಥ್ರಿಲ್ ಆಗಿದ್ದಾರೆ. ಇನ್ನೂ ಯಶ್ ಈ ಸಿನಿಮಾಗೆ ಮಲಯಾಳಂ ನಿರ್ದೇಶಕಿ ಗೀತು ಮೋಹನ್‌ದಾಸ್ ಆಯಕ್ಷನ್ ಕಟ್ ಹೇಳ್ತಿದ್ದಾರೆ.

ಸ್ವತಃ ಯಶ್ ಅವರೇ ಈ ಚಿತ್ರವನ್ನು ನಿರ್ಮಾಣ ಮಾಡುತ್ತಿದ್ದಾರೆ. ಅವರ ಜೊತೆ ಕೆವಿಎನ್ ಸಂಸ್ಥೆ ಕೂಡ ಕೈಜೋಡಿಸಿದೆ.



# ಗೋವಾದಲ್ಲಿ ಕೊಡೆ ಹಿಡಿದು ನಿಂತ ಸೋನು



'ಬಿಗ್ ಬಾಸ್' ಬೆಡಗಿ ಸೋನು ಗೌಡ ಗೋವಾಗೆ ತೆರಳಿದ್ದಾರೆ. ಮಳೆಯಲ್ಲಿ ಕೊಡೆ ಹಿಡಿದು ಸಖತ್ ಹಾಟ್ ಆಗಿ ಸೋನು ಗೌಡ ಪೋಸ್ ನೀಡಿದ್ದಾರೆ. ಈ ಫೋಟೋಗಳನ್ನು ನಟಿ ಸೋಷಿಯಲ್ ಮೀಡಿಯಾದಲ್ಲಿ ಶೇರ್ ಮಾಡಿದ್ದಾರೆ.

ಸದಾ ಒಂದಲ್ಲಾ ಒಂದು ಸುದ್ದಿಯ ಮೂಲಕ ಸೋಷಿಯಲ್ ಮೀಡಿಯಾದಲ್ಲಿ ಸದ್ದು ಮಾಡುವ ನಟಿ ಸೋನು ಈಗ ಗೋವಾ ವೆಕೇಷನ್‌ನಲ್ಲಿ ಬ್ಯುಸಿಯಾಗಿದ್ದಾರೆ. ತುಂಡು ಬಟ್ಟೆ ಧರಿಸಿ ನಟಿ ಸಖತ್ ಗ್ಲ್ಯಾಮರಸ್ ಆಗಿ ಕಾಣಿಸಿಕೊಂಡಿದ್ದಾರೆ.

ಕಪ್ಪು ಕಲರ್ ಟೀ ಶರ್ಟ್‌ಗೆ ನೀಲಿ ಬಣ್ಣದ ಚಿಕ್ಕದಾದ ಜೀನ್ಸ್ ಚಡ್ಡಿಯನ್ನು ಸೋನು ಧರಿಸಿದ್ದಾರೆ. ನಟಿಯ ಲುಕ್‌ಗೆ ಬಗೆ ಬಗೆಯ ಕಾಮೆಂಟ್‌ಗಳು ಬರುತ್ತಿವೆ. ಚಡ್ಡಿ ಸಣ್ಣದಾಯ್ತು ಎಂದು ನಟಿಯ ಕಾಲೆಳೆದಿದ್ದಾರೆ.

ಇನ್ನೂ ಮಾರ್ಚ್ 22ರಂದು ಅಕ್ರಮವಾಗಿ ಮಗುವೊಂದನ್ನು ದತ್ತು ಪಡೆದ ವಿಚಾರವಾಗಿ 11 ದಿನಗಳ ಕಾಲ ನಟಿ ಸೋನು ಬಂಧನದಲ್ಲಿದ್ದರು. ಆ ನಂತರ ಬಿಡುಗಡೆಯಾದರು. ಅಂದಹಾಗೆ, ಕ್ಯಾಡ್ಬರೀಸ್ ಸಿನಿಮಾದಲ್ಲಿ ಸೋನು ಶ್ರೀನಿವಾಸ್ ಗೌಡ ಕೂಡ ಕಾಣಿಸಿಕೊಂಡಿದ್ದಾರೆ. ಐಟಂ ಹಾಡಿಗೆ ನಟಿ ಹೆಜ್ಜೆ ಹಾಕಿದ್ದಾರೆ. ಧರ್ಮ ಕೀರ್ತಿರಾಜ್, ಅದ್ವಿತಿ ಶೆಟ್ಟಿ ನಟನೆಯ ಸಿನಿಮಾ ಇದಾಗಿದೆ. ಈ ಚಿತ್ರದ ರಿಲೀಸ್‌ಗೆ ಸೋನು ಎದುರು ನೋಡ್ತಿದ್ದಾರೆ.

# ಕಿಶೋರ್‌ಗೆ 'ಸ್ನೇಹಲೋಕ' ಡೈರೆಕ್ಟರ್ ಆಕ್ಷನ್ ಕಟ್

ಸ್ನೇಹಲೋಕ, ನಿನಗಾಗಿ, ಅಸುರ, ಗಟ್ಟಿಮೇಳ ಸಿನಿಮಾಗಳ ನಿರ್ದೇಶಕ ಎಸ್. ಮಹೇಂದರ್ ಮತ್ತೆ ನಿರ್ದೇಶನಕ್ಕೆ ಮರಳಿದ್ದಾರೆ. ಬಹುಭಾಷಾ ನಟ ಕಿಶೋರ್‌ಗೆ ಆಕ್ಷನ್ ಕಟ್ ಹೇಳಲು ಸಜ್ಜಾಗಿದ್ದಾರೆ. ಯಾವುದೇ ಭಾಷೆ ಮತ್ತು ಪಾತ್ರವಾದರೂ ಆ ಪಾತ್ರವೇ ತಾವಾಗಿ ನಟಿಸುವ ಪ್ರತಿಭಾನ್ವಿತ ನಟ ಕಿಶೋರ್ ಜೊತೆ 'ಸ್ನೇಹಲೋಕ' ನಿರ್ದೇಶಕ ಎಸ್. ಮಹೇಂದರ್ ಕೈಜೋಡಿಸಿದ್ದಾರೆ. ಇಬ್ಬರ ಕಾಂಬಿನೇಷನ್ ಸಿನಿಮಾಗೆ 'ಆಪರೇಷನ್ ಕೊಂಬುಡಿಕ್ಕಿ' ಎಂಬ ವಿಭಿನ್ನ ಟೈಟಲ್ ಇಡಲಾಗಿದೆ.

ಈ ಸಿನಿಮಾದಲ್ಲಿ ಇಂದಿನ ಜನರೇಷನ್‌ಗೆ ಹೋಲುವ ವಿಭಿನ್ನ ಕಥೆಯನ್ನೇ ಎಸ್. ಮಹೇಂದರ್ ಹೆಣೆದಿದ್ದಾರೆ. ಕಥೆ ಕೇಳಿ ಥ್ರಿಲ್ ಆಗಿ ಈ ಚಿತ್ರಕ್ಕೆ ಕಿಶೋರ್ ಗ್ರೀನ್ ಸಿಗ್ನಲ್ ಕೊಟ್ಟಿದ್ದಾರೆ. ಈ ಚಿತ್ರವನ್ನು ಅದ್ಧೂರಿಯಾಗಿ 'ಶಿವಾಜಿ ಸುರತ್ಕಲ್' ನಿರ್ಮಾಪಕ ಅನುಪ್ ಹನುಮಂತೇಗೌಡ ನಿರ್ಮಾಣ ಮಾಡುತ್ತಿದ್ದಾರೆ. ಅದಷ್ಟೇ ಅಲ್ಲ, ಚಿತ್ರಕ್ಕೆ 'ಕೆಜಿಎಫ್' ಖ್ಯಾತಿಯ ರವಿ ಬಸ್ರೂರು ಸಂಗೀತ ನಿರ್ದೇಶನ ಮಾಡಲಿದ್ದಾರೆ.

ಸದ್ಯ ಕಿಶೋರ್ ಹೊಸ ಚಿತ್ರಕ್ಕೆ ಎಸ್.ಮಹೇಂದರ್ ನಿರ್ದೇಶನ ಮಾಡುತ್ತಿರುವ ಸುದ್ದಿ ಕೇಳಿ ಅಭಿಮಾನಿಗಳು ಥ್ರಿಲ್ ಆಗಿದ್ದಾರೆ. ಈ ಸಿನಿಮಾ ಕುರಿತು ಫ್ಯಾನ್ಸ್‌ಗೆ ನಿರೀಕ್ಷೆಯಿದೆ.



Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966